ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೨

**ಪಟ್ಟಿ – ೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**

**ಶುಕ್ರವಾರ, ದಿನಾಂಕ : ೧೦ನೇ ಫೆಬ್ರವರಿ, ೨೦೧೭**

---

**ಸಮೂಹ – IV**

---

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

## ಪಠ್ಯ ಪುಸ್ತಕ ಪರಿಷ್ಕರಣಾ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೮೦ (೩೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೭–೧೮ನೇ ಸಾಲಿಗೆ ಪರಿಷ್ಕರಿಸಿದ ಹೊಸ ಪಠ್ಯ ಪುಸ್ತಕಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆಯೇ ; (೦೧ನೇ ತರಗತಿಯಿಂದ ೧೦ನೇ ತರಗತಿಯ ಪ್ರತಿಯೊಂದು ವಿಷಯದ ವಿವರ ನೀಡುವುದು)

(ಆ) ರಾಜ್ಯ ಸರ್ಕಾರ ಡಾ: ಬರಗೂರು ರಾಮಚಂದ್ರಪ್ಪ, ಸರ್ವಾಧ್ಯಕ್ಷರು ಆಗಿರುವ ಪರಿಷ್ಕರಣಾ ಸಮಿತಿಯು (ಪ್ರತಿಯೊಂದು ವಿಷಯವಾರು) ನೇಮಕಗೊಂಡ ದಿನಾಂಕದಿಂದ ಇಲ್ಲಿಯವರೆಗೂ ಕಾರ್ಯ ನಿರ್ವಹಣಾ ವರದಿ ನಡೆಸಲಾದ ಪ್ರತಿಯೊಂದು ಚರ್ಚೆಗಳ ವಿವರ ಸ್ವೀಕರಿಸಲಾದ ಅಹವಾಲು, ದೂರು, ಮನವಿ, ದಾಖಲೆಗಳ ವಿವರ ನೀಡುವುದು ;

(ಇ) ಸದರಿ ಪರಿಷ್ಕರಣಾ ಸಮಿತಿಗೆ ನೇಮಿಸಲಾದ ಪ್ರತಿಯೊಬ್ಬ ಸದಸ್ಯರ ಹೆಸರು ಕಾರ್ಯಾವಧಿ ಅರ್ಧದಲ್ಲೇ ತೆರವುಗೊಳಿಸಿದ ಸದಸ್ಯರು ಬದಲಿ ನೇಮಕಗೊಂಡ ಸದಸ್ಯರುಗಳು ಯಾರ್‍ಯಾರು ; (ಅವರು ಭಾಗವಹಿಸಿದ ಸಭೆಯ ವಿವರಗಳನ್ನು ನೀಡುವುದು)

(ಈ) ಪರಿಷ್ಕರಣಾ ಸಮಿತಿಯು ಪ್ರತಿ ವಿಷಯವಾರು ಪಠ್ಯ ಪುಸ್ತಕಗಳಲ್ಲಿ ತರಗತಿವಾರು ತೆಗೆದು ಹಾಕಿದ ಅಂಶಗಳು ಹಾಗೂ ಸೇರ್ಪಡೆಗೊಳಿಸಿದ ಅಂಶಗಳು, ಅದಕ್ಕೆ ಒದಗಿಸಿರುವ ಸಮರ್ಥನೆಯು ಏನೇನು ; ವಿವರಗಳನ್ನು ಸಂಪೂರ್ಣವಾಗಿ ಒದಗಿಸುವುದು ; (ಪ್ರತಿ ವಿಷಯವಾರು ಹಾಗೂ ತರಗತಿವಾರು ಎಲ್ಲಾ ಪುಸ್ತಕಗಳ ವಿವರಣೆ ನೀಡುವುದು)

(ಉ) ಎನ್.ಸಿ.ಈ.ಆರ್.ಟಿ ಪಠ್ಯ ಪುಸ್ತಕಗಳನ್ನೇ ಕನ್ನಡಕ್ಕೆ ಅನುವಾದಿಸುವ ಕಾರ್ಯ ನಡೆದಿದೆಯೇ ; ಅದನ್ನು ಅಳವಡಿಸಿಕೊಳ್ಳುವ ಚಿಂತನೆ ಇದೆಯೇ ; ಇದ್ದರೆ ಯಾವ ಯಾವ ತರಗತಿಗಳಿಗೆ ಅಳವಡಿಸಿಕೊಳ್ಳಲಾಗುವುದು ; ಯಾವ ವರ್ಷದಿಂದ ಜಾರಿಗೊಳಿಸಲಾಗುವುದು ?

## ವಿಶ್ವವಿದ್ಯಾಲಯಗಳಲ್ಲಿನ ನೇಮಕವಾಗುವ ಪ್ರಾಧ್ಯಾಪಕರ / ಸಹ ಪ್ರಾಧ್ಯಾಪಕರ / ಸಿಬ್ಬಂದಿಗಳ (ಹಿಂದಿನ) ಸೇವೆ ಪರಿಗಣಿಸುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೮೧ (೩೭೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವ ವಿದ್ಯಾಲಯಗಳಲ್ಲಿ ನೇಮಕವಾಗುವ ಸಹ ಪ್ರಾಧ್ಯಾಪಕರ / ಪ್ರಾಧ್ಯಾಪಕರ / ಸಿಬ್ಬಂದಿ ವರ್ಗದವರ ಹಿಂದಿನ ಸೇವೆಯನ್ನು ಪರಿಗಣಿಸಿ, ಹಳೆಯ ಪೆನ್ಷನ್ ಸ್ಕೀಮ್ ಕೊಡದೇ ಇರುವ ಹಾಗೂ ಹಿಂದಿನ ಸೇವೆಯನ್ನು ಪರಿಗಣಿಸದೆ ಇರುವ ಕುರಿತು ಇರುವ ಆದೇಶದ ಪ್ರತಿಗಳನ್ನು ಹಾಗೂ ನಿಯಮಾವಳಿಗಳ ಮಾಹಿತಿ ನೀಡುವುದು ;

(ಆ) ಈ ಕಾರಣಕ್ಕಾಗಿ ಅನುಭವಿ ಬೋಧಕರು ವಿಶ್ವ ವಿದ್ಯಾಲಯಗಳ ಸೇವೆಯಿಂದ ಹೊರ ಹೋಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ;

(ಇ) ಮಹಾ ವಿದ್ಯಾಲಯಗಳಿಂದ ಈ ರೀತಿ ಉನ್ನತ ಶಿಕ್ಷಣದ ಸಂಸ್ಥೆಗಳಿಗೆ ನೇಮಕವಾಗಲು ಇರುವ ನಿಯಮಾವಳಿಗಳೇನು ; (ಮಾಹಿತಿ ನೀಡುವುದು)

(ಈ) ವಿಜಯಪುರದ ಮಹಿಳಾ ವಿಶ್ವವಿದ್ಯಾಲಯ ಹಾಗೂ ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದಲ್ಲಿ ಈಗ ಮಂಜೂರಾಗಿರುವ ಬೋಧಕ / ಬೋಧಕೇತರ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಬೋಧಕ / ಬೋಧಕೇತರ ಹುದ್ದೆಗಳು, ತಾತ್ಕಾಲಿಕ ಹುದ್ದೆಗಳು / ಹೊರ ಸಂಪನ್ಮೂಲ ಸಂಸ್ಥೆಗಳಿಂದ ನೇಮಕಗೊಂಡಿರುವ ಬೋಧಕ / ಬೋಧಕೇತರ ಹುದ್ದೆಗಳು ಹಾಗೂ ಅತಿಥಿ ಉಪನ್ಯಾಸಕರ ಹುದ್ದೆಗಳು ಎಷ್ಟು; (ಅಂಕಿ ಅಂಶಗಳೊಡನೆ ವಿವರಣೆ ನೀಡುವುದು)

(ಉ) ಸಿಬ್ಬಂದಿಗಳ ಕೊರತೆಯಿಂದ ಈ ವಿಶ್ವವಿದ್ಯಾಲಯಗಳು ಬಸವಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು ?

## ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೮೨ (೩೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರೌಢ ಶಾಲಾ ಶಿಕ್ಷಕರ ನೇಮಕಾತಿಗಾಗಿ ಸರ್ಕಾರ ಅಧಿಸೂಚನೆ ಹೊರಡಿಸಿದ್ದು ಯಾವಾಗ ;

(ಆ) ಈ ನಿಟ್ಟಿನಲ್ಲಿ ಹೈಕೋರ್ಟ್ ಹಾಗೂ ಕೆ.ಎ.ಟಿ ಗಳಲ್ಲಿ ವ್ಯಾಜ್ಯಗಳನ್ನು ದಾಖಲಿಸಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಹೈಕೋರ್ಟ್ ಹಾಗೂ ಕೆ.ಎ.ಟಿ ತೀರ್ಪುಗಳ ಪ್ರತಿಗಳನ್ನು ಒದಗಿಸುವುದು ;

(ಈ) ಪ್ರಸ್ತುತ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಇರುವ ಅಡೆತಡೆ ಏನು ; (ವಿಷಯವಾರು ಶಿಕ್ಷಕರ ಮಾಹಿತಿ ನೀಡುವುದು) ಸಮಸ್ಯೆಯ ಪರಿಹಾರಕ್ಕೆ ನಿಗಧಿಯಾದ ಕಾಲಮಿತಿ ಏನು ; ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ರಾಜ್ಯದಲ್ಲಿನ ಗುತ್ತಿಗೆ ಆಧಾರದ ಶಿಕ್ಷಕರ ಸಮಸ್ಯೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೮೩ (೩೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗುತ್ತಿಗೆ ಆಧಾರದ ಶಿಕ್ಷಕ /ಉಪನ್ಯಾಸಕರ ಸೇವೆ ಖಾಯಂಗೊಳಿಸಿದ ದಿನಾಂಕದಿಂದಲೇ ಸೇವೆಯನ್ನು ಪರಿಗಣಿಸಿ ಅವರಿಗೆ ನೀಡಿರುವ ವಾರ್ಷಿಕ ಬಡ್ತಿಗಳನ್ನು ಕಡಿತಗೊಳಿಸುವ / ಹಿಂಪಡೆಯುವ ಬಗ್ಗೆ ಸರ್ಕಾರ ನಿರ್ಣಯ ಕೈಗೊಂಡಿದೆಯೇ ;

(ಆ) ಈ ಸಮಸ್ಯೆಯಿಂದ ಈ ಸಮೂಹದ ಶಿಕ್ಷಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವರ ಸಮಸ್ಯೆ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ನರೇಗಾ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೪ (೪೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನರೇಗಾ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಂದ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಯು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು;

(ಇ) ಈ ಯೋಜನೆಯಿಂದ ಕಡು ಬಡವರಿಗೆ ಪ್ರಯೋಜನವಾಗಿಲ್ಲವೆಂಬ ಸಾರ್ವತ್ರಿಕ ದೂರುಗಳಿರುವುದು ನಿಜವೆ ; (ವಿವರ ನೀಡುವುದು)

(ಈ) ಇತ್ತೀಚೆಗೆ ವರದಿಯಾಗಿರುವಂತೆ ನರೇಗಾ ಯೋಜನೆಯ ಹಣವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಖಾತೆಗೆ ಜಮಾ ಆಗಿರುವುದು ನಿಜವೆ ; ಹಾಗಿದ್ದಲ್ಲಿ, ಜಮಾ ಆದ ಮೊತ್ತ ಎಷ್ಟು ; ಈ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ಅಧಿಕಾರಿಗಳ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು ?

## ಅಲೆಯನ್ಸ್ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೫ (೪೧೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲೆಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು. ಇದರ ಮಾಲೀಕರುಗಳ ಕೌಟುಂಬಿಕ ಕಲಹದಿಂದಾಗಿ ಈ ವಿಶ್ವವಿದ್ಯಾಲಯ ಅತಂತ್ರ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಅಲೆಯನ್ಸ್ ವಿಶ್ವವಿದ್ಯಾಲಯವು ಈ ಶೈಕ್ಷಣಿಕ ವರ್ಷದಲ್ಲಿ ಹಲವಾರು ಬಾರಿ ಬಾಗಿಲು ಮುಚ್ಚಿ ವಿದ್ಯಾರ್ಥಿಗಳಿಗೆ ಪಾಠ ಪ್ರವಚನ ಮಾಡದೆ ಅನ್ಯಾಯ ಮಾಡುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ವಿದ್ಯಾರ್ಥಿಗಳ ಪೋಷಕರಿಂದ, ಸಾರ್ವಜನಿಕರಿಂದ ದೂರುಗಳು ಬಂದಿರುವುದು ನಿಜವೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಈ ವಿಶ್ವವಿದ್ಯಾಲಯಕ್ಕೆ ಕೂಡಲೇ ಆಡಳಿತಾಧಿಕಾರಿ ನೇಮಿಸಿ ವಿಶ್ವವಿದ್ಯಾಲಯವನ್ನು ತಹಬದಿಗೆ ತಂದು ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ರಕ್ಷಣೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳ ಬಡ್ತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೬ (೪೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ೧೯೯೯ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮುಖ್ಯ ಶಿಕ್ಷಕರುಗಳಾಗಿ ನೇಮಕಗೊಂಡಿರುವವರ ಸಂಖ್ಯೆ ಎಷ್ಟು ;

(ಆ) ಸದರಿ ಮುಖ್ಯ ಶಿಕ್ಷಕರುಗಳಲ್ಲಿ ಇದುವರೆವಿಗೆ ಬಡ್ತಿ ಹೊಂದಿರುವವರ ಸಂಖ್ಯೆ ಎಷ್ಟು ; ಹಾಗೂ ಬಡ್ತಿ ಹೊಂದಬೇಕಾದವರ ಸಂಖ್ಯೆ ಎಷ್ಟು ;

(ಇ) ಈ ಮುಖ್ಯ ಶಿಕ್ಷಕರುಗಳಿಗೆ ಕಾಲ ಕಾಲಕ್ಕೆ ಸಿಗಬೇಕಾದ ಬಡ್ತಿಯಲ್ಲಿ ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಈ) ಬಡ್ತಿ ಹೊಂದದೆ ಉಳಿದ ಅರ್ಹ ಮುಖ್ಯ ಶಿಕ್ಷಕರುಗಳಿಗೆ ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು ? (ವಿವರ ನೀಡುವುದು)

## ಬೃಹತ್ ಕೈಗಾರಿಕೆ ಸ್ಥಾಪನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೭ (೪೧೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಬೃಹತ್ ಕೈಗಾರಿಕೆಯನ್ನು ಪ್ರಾರಂಭಿಸಲು ಕ್ರಮ ಕೈಗೊಂಡಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಬೃಹತ್ ಕೈಗಾರಿಕೆ ನಿರ್ಮಿಸಿ, ನಿರುದ್ಯೋಗಿ ಯುವಕರುಗಳಿಗೆ ಉದ್ಯೋಗ ದೊರಕಿಸಿಕೊಡಲು ಸರ್ಕಾರ ಚಿಂತಿಸುವುದೇ ; (ವಿವರ ನೀಡುವುದು)

(ಇ) ಬೃಹತ್ ಕೈಗಾರಿಕೆ ಪ್ರಾರಂಭಿಸಲು ಯಾವ ಯಾವ ಜಿಲ್ಲೆಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಬೃಹತ್ ಕೈಗಾರಿಕೆಗಳಿಂದ ರಾಜ್ಯಕ್ಕೆ ಹೆಚ್ಚು ಆದಾಯ ಬರುವುದರಿಂದ ಸರ್ಕಾರ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಉ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಯಾವುದಾದರೂ ಬೃಹತ್ ಕೈಗಾರಿಕೆ ಪ್ರಾರಂಭಿಸಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ಎಂ.ಆರ್. ವ್ಯಾಕ್ಸಿನೇಶನ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೮ (೪೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ದಡಾರ ಮತ್ತು ರುಬೆಲ್ಲಾ (Measles & Rubella) ಎಷ್ಟು ಶಾಲಾ ಮಕ್ಕಳಲ್ಲಿ ಕಾಣಿಸಿಕೊಂಡಿದೆ ; (ವಿವರ ನೀಡುವುದು)

(ಆ) ಈ ಖಾಯಿಲೆಯ ಸ್ವರೂಪ ಮತ್ತು ಲಕ್ಷಣ ಹಾಗೂ ಗಂಭೀರತೆಯ ಬಗ್ಗೆ ಶಾಲಾ ಮಕ್ಕಳಲ್ಲಿ, ಪೋಷಕರಲ್ಲಿ, ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ; (ವಿವರ ನೀಡುವುದು)

(ಇ) ಸರ್ಕಾರವು ಆರೋಗ್ಯ ಮತ್ತು ಶಿಕ್ಷಣ ಇಲಾಖೆಯು ಸಂಯೋಗದೊಂದಿಗೆ ದಿನಾಂಕ: ೦೭-೦೨-೨೦೧೭ ರಿಂದ ೨೮-೦೨-೨೦೧೭ರವರೆಗೆ ದಡಾರ ಮತ್ತು ರುಬೆಲ್ಲಾ ಖಾಯಿಲೆಗೆ ಸಂಬಂಧಿಸಿದಂತೆ ಶಾಲಾ ಮಕ್ಕಳಿಗೆ ಎಂ.ಆರ್. ಲಸಿಕೆ ಹಾಕಲು ಕಾರ್ಯಕ್ರಮ ಹಮ್ಮಿಕೊಂಡಿರುವುದು ನಿಜವೆ ; ಹಾಗಿದ್ದಲ್ಲಿ, ಇದರ ರೂಪುರೇಷೆಯ ವಿವರ ನೀಡುವುದು ;

(ಈ) ಶಾಲಾ ಮಕ್ಕಳಿಗೆ ಈ ಲಸಿಕೆ ಹಾಕುವುದು ಕಡ್ಡಾಯವಲ್ಲವೇ ; ಹಾಗಿದ್ದಲ್ಲಿ, ಶಾಲಾ ಮಕ್ಕಳ ಪೋಷಕರಿಂದ ಅನುಮತಿ ಪಡೆಯಲಾಗಿದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಖಾಸಗಿ ಪ್ರತಿಷ್ಠಿತ ಶಾಲೆಗಳು ಸರ್ಕಾರದಿಂದ ಒದಗಿಸಲಾಗುವ ಎಂ.ಆರ್. ಲಸಿಕೆ ಗುಣಮಟ್ಟದಿರುವುದಿಲ್ಲವೆಂದು ಈ ಲಸಿಕಾ ಕಾರ್ಯವನ್ನು ಆಯಾ ಖಾಸಗಿ ಶಾಲೆಗಳೇ ಹಮ್ಮಿಕೊಳ್ಳಲಾಗುವುದೆಂದು ಹೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮಕೈಗೊಳ್ಳಲಾಗಿದೇ ;

(ಊ) ಹಾಗಿದ್ದಲ್ಲಿ, ಅಂತಹ ಖಾಸಗಿ ಶಾಲೆಗಳ ವಿವರ ನೀಡುವುದು ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಬೋಧಕೇತರ, ಸಹಾಯಕ ಕುಲಪತಿ, ಉಪಕುಲಪತಿ ಹುದ್ದೆಗಳ ಮುಂಬಡ್ತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೮೯ (೪೫೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಬೋಧಕೇತರ ಹುದ್ದೆಗಳಾದ ಸಹಾಯಕ ಕುಲಸಚಿವರಿಂದ ಉಪ ಕುಲಸಚಿವರ ಹುದ್ದೆಗೆ ಮುಂಬಡ್ತಿ ಪದೋನ್ನತಿ ಪಡೆಯಲು ಅರ್ಹರಿರುವ ಸಿಬ್ಬಂದಿಗಳೆಷ್ಟು; (ವಿವರಗಳನ್ನು ನೀಡುವುದು)

(ಆ) ಹಾಗೆಯೇ ಅಧೀಕ್ಷಕರು, ಸಹಾಯಕ ಕುಲಸಚಿವರು, ಉಪ ಕುಲಸಚಿವರು, ಈ ಪದ ವೃಂದಕ್ಕೆ ಮಂಜೂರಾಗಿದ್ದ ಹಾಗೂ ಹಾಲಿ ಖಾಲಿ ಇರುವ ಹುದ್ದೆಗಳೆಷ್ಟು; ಯಾವಾಗಿನಿಂದ ಖಾಲಿ ಇವೆ ; ಈವರೆಗೆ ಭರ್ತಿ ಮಾಡದಿರಲು ಕಾರಣಗಳೇನು ; ಅರ್ಹರಿಗೆ ಬಡ್ತಿ ನೀಡಲು ಇರುವ ಅಡ್ಡಿ–ಆತಂಕಗಳೇನು ;

(ಇ) ಹಾಗಿದ್ದಲ್ಲಿ, ಅರ್ಹರಿರುವ ಅಧೀಕ್ಷಕರಿಂದ ಸಹಾಯಕ ಕುಲಸಚಿವರಿಗೆ, ಎ.ಆರ್.ನಿಂದ ಡಿ.ಆರ್.ಗೆ ಹಾಗೂ ಹಿರಿಯ ಸಹಾಯಕರಿಂದ ಅಧೀಕ್ಷಕರ ಹುದ್ದೆಗೆ ಪದೋನ್ನತಿ–ಬಡ್ತಿ ನೀಡಲು ವಿಶ್ವವಿದ್ಯಾಲಯ ಮುಂದಾಗುವುದೇ ಇಲ್ಲದಿದ್ದಲ್ಲಿ, ಕಾರಣಗಳೇನು ; ಇದಕ್ಕೆ ಅನುಸರಿಸುವ ಮಾನದಂಡಗಳೇನು ; ಇರುವ ನಿಯಮಗಳಾವುವು ; ಸದರಿ ವೃಂದ ನೇಮಕಾತಿ ನಿಯಮಗಳನ್ನು ಈ ಹಿಂದಿನ ಹಲವು ಬಡ್ತಿ ಸಂದರ್ಭಗಳಲ್ಲಿ ಪರಿಗಣಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಈ) ತಮಗೆ ಬೇಕಾದಂತೆ ಪರಿನಿಯಮಾವಳಿಗಳನ್ನು ಬಳಸಿಕೊಳ್ಳುವ ಪರಿಪಾಠ ಸರಿಯಾದ ಕ್ರಮವೇ ; ಖಾಲಿ ಇರುವ ಹುದ್ದೆಗಳಿಗೆ ಬಡ್ತಿ–ಪದೋನ್ನತಿ ನೀಡಲಾಗುವುದು ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು ; (ವಿವರ ಒದಗಿಸುವುದು)

(ಉ) ಹಿರಿಯ ಸಹಾಯಕರಿಂದ ಅಧೀಕ್ಷಕರ ಹುದ್ದೆಯ ನಿರೀಕ್ಷೆಯಲ್ಲಿರುವ ಅರ್ಹ ಸಿಬ್ಬಂದಿಗಳೆಷ್ಟು ; (ಹೆಸರು ಸಹಿತ ವಿವರ ನೀಡುವುದು) ಸದರಿಯುವರುಗಳಿಗೆ ಇದುವರೆಗೂ ಬಡ್ತಿ ನೀಡದಿರಲು ಕಾರಣಗಳೇನು ; ಅಲ್ಲದೇ ೨೦೦೭ರಲ್ಲಿ ನೇಮಕಗೊಂಡ ಒಂದೇ ಪದ ವೃಂದದ ಕೆಲವರಿಗೆ ಈಗಾಗಲೇ ಎರಡೆರಡು ಬಡ್ತಿಗಳು ಲಭಿಸಿ ಕೇವಲ ಬೆರಳೆಣಿಕೆಯ ನೌಕರರಿಗೆ ಬಡ್ತಿಯಲ್ಲಿ ವಂಚನೆ ಮಾಡುವುದು ನ್ಯಾಯು ವಂಚನೆಯುಲ್ಲವೇ ; ಈ ಬಗ್ಗೆ ವಿಶ್ವವಿದ್ಯಾಲಯುದ ನಿಲುವೇನು ; ಯಾವಾಗ ಬಡ್ತಿ ನೀಡಲಾಗುವುದು ? (ಬಡ್ತಿ ನಿರೀಕ್ಷೆಯಲ್ಲಿರುವವರ ಸೇವಾ ಜ್ಯೇಷ್ಠತೆಯ ಪಟ್ಟಿಯೊಂದಿಗೆ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಶಿಕ್ಷಕರ ಹಾಗೂ ಉಪನ್ಯಾಸಕರ ಪ್ರತಿ ತಿಂಗಳ ವೇತನ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೯೦ (೪೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ಶಾಲಾ ಶಿಕ್ಷಕರ ಹಾಗೂ ಉಪನ್ಯಾಸಕರ ವೇತನ ಪಾವತಿ ಪ್ರತಿ ತಿಂಗಳು ಮಾಡುವ ನಿಯಮ ಇದೆಯೇ ; (ಮಾಹಿತಿ ನೀಡುವುದು)

(ಆ) ಹೈದ್ರಾಬಾದ್ ಕರ್ನಾಟಕದ ಆರು ಜಿಲ್ಲೆಗಳ ಶಾಲಾ ಶಿಕ್ಷಕರ ಹಾಗೂ ಉಪನ್ಯಾಸಕರ ಸಂಬಳ ಪ್ರತಿ ತಿಂಗಳು ನಿಗಧಿತ ಸಮಯಕ್ಕೆ ಆಗದೇ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣಗಳೇನು ; ವಿಳಂಬಕ್ಕೆ ಕಾರಣೀಕರ್ತರಾದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ೨೦೧೩ ರಿಂದ ಮಂಜೂರಾದ ಖಾಲಿ ಹಾಗೂ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೯೧ (೪೪೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು ಯಾವುವು ; (ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಲ್ಲಿ ೨೦೧೩ ರಿಂದ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ಬೋಧಕ, ಬೋಧಕೇತರ ಹುದ್ದೆಗಳ ವಿಶ್ವವಿದ್ಯಾಲಯಗಳವಾರು ಮಾಹಿತಿ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಗಳಲ್ಲಿ ೨೦೧೩ ರಿಂದ ಇಲ್ಲಿಯವರೆಗೆ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ವಿಶ್ವವಿದ್ಯಾಲಯವಾರು ಬೋಧಕರ, ಬೋಧಕೇತರರ ಹುದ್ದೆಗಳ ನೇಮಕಾತಿಗಾಗಿ ಹೊರಡಿಸಿದ ಅಧಿಸೂಚನೆಗಳು ಯಾವುವು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಈ) ಬಹಳ ದೊಡ್ಡ ಸಂಖ್ಯೆಯಲ್ಲಿ ವಿಶ್ವವಿದ್ಯಾಲಯಗಳಲ್ಲಿ ಹುದ್ದೆಗಳು ಖಾಲಿ ಇದ್ದು, ಇವುಗಳನ್ನು ನೇಮಕಾತಿ ಮಾಡಲು ಸರ್ಕಾರ ಮುಂದಾಗುವುದೇ ; ಇದ್ದರೆ, ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಹೊಸ ವಿಶ್ವವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರಗಳು (IIIT) ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೯೨ (೪೫೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಉನ್ನತ ಶಿಕ್ಷಣದ Gross Enrollment Ratio ಕಡಿಮೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಸದರಿ Gross Enrollment Ratio ಹೆಚ್ಚಿಸುವ ನಿಟ್ಟಿನಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಹೊಸ ವಿಶ್ವವಿದ್ಯಾಲಯಗಳು ಮತ್ತು ಸ್ನಾತಕೋತ್ತರ ಕೇಂದ್ರಗಳು (IIIT) ಸ್ಥಾಪಿಸಲು ಸರ್ಕಾರ ಮುಂದಾಗುವುದೇ ; (ಜಿಲ್ಲಾವಾರು ಯೋಜನೆಗಳ ವಿವರ ನೀಡುವುದು)

(ಇ) Gross Enrollment Ratio ಹೆಚ್ಚಿಸುವ ನಿಟ್ಟಿನಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳ ಸ್ಥಿತಿಗತಿಗಳ ಸಮೀಕ್ಷೆ ನಡೆಸಲಾಗಿದೆಯೇ ; (ಕಾಲೇಜುವಾರು, ಸಮೀಕ್ಷಾ ವರದಿಗಳನ್ನು ನೀಡುವುದು)

(ಈ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇರುವ ನ್ಯೂನತೆಗಳೇನು ; (ಕಾಲೇಜುವಾರು ಮಾಹಿತಿಗಳನ್ನು ನೀಡುವುದು ಹಾಗೂ ಈ ನ್ಯೂನತೆಗಳನ್ನು ಸರಿಪಡಿಸಲು ಸರ್ಕಾರ ಮುಂದಿರುವ ಯೋಜನೆಗಳೇನು ಹಾಗೂ ಇದಕ್ಕೆ ತಗಲುವ ವೆಚ್ಚ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂ.೨೭, ೨೮ ಆಶ್ರಯ ಮನೆ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೯೩ (೪೪೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂಬರ್ ೨೭ ಹಾಗೂ ೨೮ ರಾಜೀವ್‌ಗಾಂಧಿ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಆಶ್ರಯ ಮನೆ ಯೋಜನೆ ಕೈಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯೋಜನೆವಾರು ಮಂಜೂರಾದ ವರ್ಷ, ಒಟ್ಟು ಮನೆಗಳ ವಿವರ ಹಾಗೂ ಯೋಜನೆಯ ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ಸದರಿ ಯೋಜನೆಯು ಅಡಿಯಲ್ಲಿ ಮನೆಗಳ ಕಟ್ಟಡ ಪೂರ್ಣಗೊಂಡಿದೆಯೇ ; ಪೂರ್ಣಗೊಂಡಿದ್ದರೆ, ಮನೆಗಳ ಹಂಚಿಕೆಯಾಗಿದೆಯೇ ; ಒಟ್ಟು ಮನೆಗಳ ವಿವರ ಫಲಾನುಭವಿಗಳ ಪಟ್ಟಿ ಹಣ ಪಾವತಿಸಿದ ಪಟ್ಟಿಗಳ ವಿವರ ನೀಡುವುದು ;

(ಇ) ೧೫ ವರ್ಷ ಗತಿಸಿದರೂ ಸದರಿ ಆಶ್ರಯ ಮನೆಗಳು ಅರ್ಹ ಫಲಾನುಭವಿಗಳಿಗೆ ಇನ್ನೂ ಹಸ್ತಾಂತರಗೊಳ್ಳದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ನಿರ್ಲಕ್ಷಕ್ಕೆ ಕಾರಣಗಳೇನು ;

(ಈ) ಈ ನ್ಯೂನತೆಯನ್ನು ಸರಿಪಡಿಸಿ ಶೀಘ್ರದಲ್ಲಿಯೇ ಅರ್ಹ ಫಲಾನುಭವಿಗಳಿಗೆ ಆಶ್ರಯ ಮನೆಗಳನ್ನು ಹಂಚಿಕೆ ಮಾಡಲು ಸರ್ಕಾರ ಮುಂದಾಗುವುದೇ ; ಈ ಬಗ್ಗೆ ಸರ್ಕಾರದ ಮುಂದಿರುವ ಕ್ರಮಗಳೇನು ?

## ಹೊಸ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ ಕುರಿತು

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೪ (೩೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಗೆ ನೂತನ ಸರಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರಾತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಜಿಲ್ಲೆಯ ಯಾವ ಯಾವ ಪ್ರದೇಶಗಳಲ್ಲಿ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿಗಾಗಿ ಬೇಡಿಕೆಗಳು ಬಂದಿವೆ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಒಟ್ಟು ಶಿಕ್ಷಕರ ಹುದ್ದೆಗಳೆಷ್ಟು ;

(ಈ) ಹೈದ್ರಾಬಾದ್–ಕರ್ನಾಟಕ ವಿಶೇಷ ಸ್ಥಾನಮಾನದ ಮುಖಾಂತರ ಭರ್ತಿ ಮಾಡಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳ ಸ್ಥಾಪನೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೫ (೩೪೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಕೈಗಾರಿಕೆಗಳ ನಿರ್ಮಾಣದ ಭೂ ಮಂಜೂರಾತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ಇಂಜಿನೀಯರಿಂಗ್ ಕಾಲೇಜು ಹಾಗೂ ಸ್ನಾತಕೋತ್ತರ ವಿಭಾಗಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೬ (೩೪೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ವಿಶ್ವವಿದ್ಯಾಲಯ ನಿರ್ಮಾಣ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ಪಟ್ಟಣದಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಹಾಗೂ ರವಿತಾಳದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರಾತಿ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರಿನಲ್ಲಿರುವ ಇಂಜಿನೀಯರಿಂಗ್ ಕಾಲೇಜು ಕಟ್ಟಡದ ನಿರ್ಮಾಣ ಪೂರೈಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರಿನಲ್ಲಿರುವ ಸ್ನಾತಕೋತ್ತರ ವಿಭಾಗದ ಅಭಿವೃದ್ಧಿ ಮಾಡಲು ಸರಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಈಶಾನ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಬಸ್ಸುಗಳ ಕೊರತೆ ಹಾಗೂ ಬಸ್ ಘಟಕಗಳ ಕುರಿತು

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೭ (೩೪೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಒಟ್ಟು ಎಷ್ಟು ಬಸ್‌ಗಳು ಸಂಚರಿಸುತ್ತಿವೆ ;

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಗ್ರಾಮಾಂತರ ಪ್ರದೇಶಗಳಲ್ಲಿ ಬಸ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಸ್ಸುಗಳ ಕೊರತೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ 'ಬಸ್ ಘಟಕ'ಗಳು ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಜಿಲ್ಲೆಯ ಯಾವ ಯಾವ ಪ್ರದೇಶ ಅಥವಾ ಪಟ್ಟಣದಲ್ಲಿ 'ಬಸ್ ಘಟಕ' ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ:–**

೨೯೮ (೪೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳನ್ನು ಗ್ರೇಡ್–೧ ಮಾಡಲಾಗಿದೆಯೇ ; ಇಲ್ಲದಿದ್ದರೆ, ಯಾವ ಕಾಲಮಿತಿಯೊಳಗೆ ಮಾಡಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಆ) ಕೇವಲ ೮ ಜನಸಂಖ್ಯೆಗೆ ಮೇಲ್ಪಟ್ಟವುಗಳನ್ನು ಗ್ರೇಡ್–೧ ಮಾಡಲಾಗಿದ್ದು, ಹಳೆಯ ೮ ರಿಂದ ೧೦ ಸಾವಿರ ಜನಸಂಖ್ಯೆವುಳ್ಳ ಗ್ರಾಮ ಪಂಚಾಯಿತಿಗಳನ್ನು ಗ್ರೇಡ್–೧ ಎಂದು ಪರಿಗಣಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಗ್ರೇಡ್–೧ ಗ್ರಾಮ ಪಂಚಾಯಿತಿಗಳನ್ನು ಯಾವ ಆಧಾರ ಮತ್ತು ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತಿದೆ ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಾರಿಗೆ ಸಂಸ್ಥೆಯಿಂದ ಹೊಸ ಬಸ್ಸುಗಳ ಖರೀದಿಯ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯ (೪೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ೨೦೧೪ ರಿಂದ ಇಲ್ಲಿಯವರೆಗೆ ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸುಗಳಿಗೆ ಯಾವ ಯಾವ ಕಂಪನಿಯಿಂದ ಇನ್ಶೂರೆನ್ಸ್ ಮಾಡಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾರಿಗೆ ಪ್ರಯಾಣಿಕರಿಂದ ಇನ್ಶೂರೆನ್ಸ್ ಕುರಿತು ಟಿಕೇಟ್ ದರದಲ್ಲಿ ಎಷ್ಟು ಹಣ ಸಂಗ್ರಹಿಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯ ಸಾರಿಗೆ ಇಲಾಖೆಯ ಬಸ್ಸುಗಳ ಅಪಘಾತದಿಂದ ದಾಖಲಾದ ಪ್ರಕರಣಗಳು ಎಷ್ಟು ; ಅವುಗಳಲ್ಲಿ ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿವೆ ; ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿವೆ ಅವುಗಳಲ್ಲಿ ಮೃತರಾದವರ ಕುಟುಂಬಕ್ಕೆ ಹಾಗೂ ಗಾಯಾಳುಗಳಿಗೆ ಎಷ್ಟು ಪರಿಹಾರವನ್ನು ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ವ್ಯಾಪಾರಸ್ಥರಿಗೆ ಜಾಗ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೦ (೪೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದ ಹೊರವಲಯದ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ವ್ಯಾಪಾರಸ್ಥರಿಗೆ ಜಾಗ ಹಂಚಿಕೆ ಮಾಡುವಾಗ ಯಾವ ಮಾನದಂಡ ಅನುಸರಿಸಲಾಗಿದೆ ; ಹಂಚಿಕೆಯಾದ ಫಲಾನುಭವಿಗಳೆಷ್ಟು ; (ಸಂಪೂರ್ಣವಾದ ವಿವರ ನೀಡುವುದು)

(ಆ) ಹಂಚಿಕೆ ಸಮಯದಲ್ಲಿ ಸರ್ಕಾರ ಹಾಗೂ ಸಂಘ ಸಂಸ್ಥೆಗಳಿಗೆ ಆದ ಒಡಂಬಡಿಕೆಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ದೀರ್ಘಾವಧಿ ವರ್ಷಗಳಿಂದ ವ್ಯಾಪಾರ ಮಾಡಿಕೊಂಡು ಬಂದಂತವರಿಗೆ ಹಂಚಿಕೆ ಮಾಡದೇ ಒಂದೇ ಕುಟುಂಬಸ್ಥರಿಗೆ ಹಂಚಿಕೆ ಮಾಡಲಾಗಿದೆ ಎಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ದಿಟ್ಟ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿ ಸದಸ್ಯರಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೪೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ಕನಿಷ್ಠ ಅನುದಾನ ನೀಡುವ ಅಧಿಕಾರ ಹಾಗೂ ಸದಸ್ಯರಿಗೆ ಹೆಚ್ಚಿನ ಗೌರವಧನ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯಿತಿ ಸದಸ್ಯರುಗಳಿಗೆ ಗುರುತಿನ ಚೀಟಿ ಪಿಂಚಣಿ ವ್ಯವಸ್ಥೆ ಮತ್ತು ಪ್ರವಾಸ ವ್ಯವಸ್ಥೆ ಕಲ್ಪಿಸಲು ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಭೀಕರ ಬರ ಆವರಿಸಿರುವ ಹಿನ್ನೆಲೆಯಲ್ಲಿ ಗ್ರಾಮಗಳಿಗೆ ಕುಡಿಯುವ ನೀರಿನ ನಿರ್ವಹಣೆಗಾಗಿ ಸರ್ಕಾರವು ಯಾವ ಮುಂಜಾಗ್ರತ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೪೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆಯಲ್ಲಿರುವ ಯೋಜನೆಗಳು ಯಾವುವು ; ಸದರಿ ಯೋಜನೆಗೆ ಸಂಬಂಧಿಸಿದಂತೆ ಅನುಷ್ಠಾನಕ್ಕೆ ಇರುವ ನಿಯಮಗಳೇನು ;

(ಆ) ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸಂಬಂಧಿಸಿದಂತೆ ೨೦೧೪ರಿಂದ ಇಲ್ಲಿಯವರೆಗೆ ಖರ್ಚಾದ ಅನುದಾನವೆಷ್ಟು ; (ಜಿಲ್ಲಾವಾರು, ಫಲಾನುಭವಿಗಳ ಹೆಸರು ಸಹಿತ ವಿವರ ನೀಡುವುದು)

(ಇ) ಸದರಿ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳೆಷ್ಟು ; ಸದ್ಯ ಖಾಲಿಯಿರುವ ಹುದ್ದೆಗಳೆಷ್ಟು ಹಾಗೂ ಎರವಲು ಸೇವೆಯ ಮೇಲೆ ಬೇರೆ ಇಲಾಖೆಯಿಂದ ತಮ್ಮ ಇಲಾಖೆಗೆ ಬಂದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಅಲ್ಪಸಂಖ್ಯಾತ ಅಂಗವಿಕಲರಿಗೆ ಇರುವ ವಿಶೇಷ ಯೋಜನೆಗಳು ಯಾವುವು ? (ವಿವರ ನೀಡುವುದು)

## ದೈಹಿಕ ಶಿಕ್ಷಕರು, ಟಿ.ಜಿ.ಟಿ. ಶಿಕ್ಷಕರು, ವೃತ್ತಿ ಶಿಕ್ಷಕರು ಹಾಗೂ ಇತರರಿಗೆ ಹೆಚ್ಚುವರಿ ವೇತನ ಬಡ್ತಿ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೩ (೪೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹ ಶಿಕ್ಷಕರು ಹಾಗೂ ಪದವಿ ಪೂರ್ವ ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಿ ಸರ್ಕಾರ ಯಾವಾಗ ಆದೇಶ ಹೊರಡಿಸಿದೆ ;

(ಆ) ಈ ಆದೇಶದಲ್ಲಿ ದೈಹಿಕ ಶಿಕ್ಷಕರು, ಟಿ.ಜಿ.ಟಿ. ಶಿಕ್ಷಕರು, ವೃತ್ತಿ ಶಿಕ್ಷಕರು ಹಾಗೂ ಸಮಾನಂತರ ಹುದ್ದೆಗಳನ್ನು ಹೊಂದಿದ ಸಿಬ್ಬಂದಿಗೆ ಈ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡದಿರಲು ಕಾರಣಗಳೇನು ;

(ಇ) ಈ ರೀತಿ ಶಿಕ್ಷಕರಲ್ಲಿಯೇ ತಾರತಮ್ಯ ಮಾಡಿ ಆದೇಶ ಹೊರಡಿಸಲು ಕಾರಣಗಳೇನು ;

(ಈ) ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಸರ್ಕಾರಿ ಆದೇಶವನ್ನು ಯಾವ ದಿನಾಂಕದೊಳಗೆ ಹೊರಡಿಸಲಾಗುವುದು ?

## ಸತತವಾಗಿ ೧೫ ವರ್ಷ ಪೂರೈಸಿದ ಖಾಸಗಿ ಪಾಲಿಟೆಕ್ನಿಕ್‌ಗಳನ್ನು ಅನುದಾನಕ್ಕೊಳಪಡಿಸಿ ಹೊರಡಿಸಿದ ಆದೇಶವನ್ನು ಜಾರಿಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೪ (೪೩೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸತತವಾಗಿ ೧೫ ವರ್ಷ ಪೂರೈಸಿದ ಖಾಸಗಿ ಪಾಲಿಟೆಕ್ನಿಕ್‌ಗಳನ್ನು ಅನುದಾನಕ್ಕೊಳಪಡಿಸಿ ಸರ್ಕಾರಿ ಆದೇಶವನ್ನು ಯಾವ ದಿನಾಂಕದಂದು ಹೊರಡಿಸಲಾಗಿದೆ ;

(ಆ) ಈ ಆದೇಶದನ್ವಯ ರಾಜ್ಯದಲ್ಲಿ ಎಷ್ಟು ಖಾಸಗಿ ಪಾಲಿಟೆಕ್ನಿಕ್‌ಗಳನ್ನು ಅನುದಾನಕ್ಕೊಳಪಡಿಸಿ ಆದೇಶ ಹೊರಡಿಸಲಾಗಿದೆ ;

(ಇ) ಈ ಆದೇಶ ಹೊರಡಿಸಿ ಮೂರು ವರ್ಷಗಳಾದರೂ ಇದುವರೆಗೆ ಈ ಪಾಲಿಟೆಕ್ನಿಕ್‌ಗಳ ಸಿಬ್ಬಂದಿಗೆ ವೇತನ ಸಿಗದಿರಲು ಕಾರಣಗಳೇನು;

(ಈ) ಈ ಕುರಿತು ಸರ್ಕಾರಿ ಆದೇಶವನ್ನು ಯಾವಾಗ ಹೊರಡಿಸಲಾಗುವುದು ?

## ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೦೫ (೪೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೯೯೫–೯೬ರ ನಂತರ ಪ್ರಾರಂಭಿಸಿದ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಮನವಿಗಳು ಬಂದಿರುವುದು ನಿಜವೇ ;

(ಈ) ಬಂದಿದ್ದಲ್ಲಿ, ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ನಿರ್ಧರಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಬೇಕಾದ ಅಂದಾಜು ಹಣವೆಷ್ಟು ?

## ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎಂ.ಬಿ.ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೬ (೪೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಎಷ್ಟು ಗ್ರಾಮಗಳಲ್ಲಿ ಜಾರಿಗೆ ಬಂದಿದೆ ; (ವಿವರ ನೀಡುವುದು)

(ಆ) ಈ ಯೋಜನೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ, ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಇನ್ನು ಎಷ್ಟು ಗ್ರಾಮಗಳಲ್ಲಿ ಈ ಯೋಜನೆಯು ಜಾರಿಗೆ ಬರಬೇಕಾಗಿದೆ? (ವಿವರ ನೀಡುವುದು)

## ವಿಶ್ವ ವಿದ್ಯಾನಿಲಯಗಳಲ್ಲಿ ನಡೆದಿರುವ ಭ್ರಷ್ಟಾಚಾರದ ಕುರಿತು

**ಶ್ರೀ ಎಂ.ಬಿ.ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭ (೪೩೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ವಿಶ್ವ ವಿದ್ಯಾನಿಲಯಗಳಲ್ಲಿ ಭ್ರಷ್ಟಾಚಾರ ನಡೆದಿದೆ ; (ವಿವರ ಒದಗಿಸುವುದು)

(ಆ) ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಯಾರು ಅವರ ಹುದ್ದೆಗಳ ಸಹಿತ ವಿವರ ನೀಡುವುದು ;

(ಇ) ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಇನ್ನು ಮುಂದೆ ಭ್ರಷ್ಟಾಚಾರ ನಡೆಯದಂತೆ ಹಾಗೂ ಭ್ರಷ್ಟಾಚಾರ ತಡೆಗೆ ತೆಗೆದುಕೊಂಡ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೮ (೪೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಬೇಡಿಕೆ ಇದೆ ; ಸಂಪೂರ್ಣ ಬೇಡಿಕೆಯನ್ನು ಎಷ್ಟು ಅವಧಿಯಲ್ಲಿ ಪೂರೈಸಲಾಗುವುದು ;

(ಇ) ಇದಕ್ಕಾಗಿ ಮಂಜೂರಾಗಿರುವ ಹಣ ಎಷ್ಟು ; ಮೀಸಲಿಟ್ಟಿರುವ ಹಣ ಎಷ್ಟು ?

## ವಸತಿ ಸೌಲಭ್ಯಗಳು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೯ (೪೪೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ವಸತಿರಹಿತ ಜನರ ಸಂಖ್ಯೆ ಎಷ್ಟು ; ಮತ್ತು ಅವರಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ವಿವಿಧ ವಸತಿ ಯೋಜನೆಗಳಡಿಯಲ್ಲಿ ಮೇಲ್ಕಂಡ ಎರಡು ಜಿಲ್ಲೆಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜೀವ್ ಗಾಂಧಿ ವಸತಿ ಅಭಿವೃದ್ಧಿ ನಿಗಮದಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಮಂಜೂರು ಮಾಡಿರುವ ಮನೆಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೧೦ (೪೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ ಪರಿಣಾಮಕಾರಿಯಾಗಿ ಜಾರಿಗೆ ಬಂದಿದೆಯೇ ; (ಕಾಯ್ದೆ ವ್ಯಾಪ್ತಿಯಲ್ಲಿ ಬರುವ ರಾಜ್ಯದ ಶಾಲೆಗಳ ವಿವರಗಳನ್ನು ತಾಲ್ಲೂಕುವಾರು ಒದಗಿಸುವುದು)

(ಆ) ರಾಜ್ಯದಲ್ಲಿರುವ ಶಾಲೆಗಳಲ್ಲಿ ಕಾಯ್ದೆ ಅನ್ವಯ ಮೀಸಲಿಟ್ಟಿರುವ ಸೀಟುಗಳ ಸಂಖ್ಯೆ ಎಷ್ಟು ; (ಶಾಲೆವಾರು ವಿವರ ನೀಡುವುದು)

(ಇ) ಕಾಯ್ದೆ ಜಾರಿಗೆ ಬಂದಾಗಿನಿಂದ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಹಾಗೂ ಈವರೆಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕಡ್ಡಾಯ ಶಿಕ್ಷಣ ಕಾಯ್ದೆಯಡಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಕೆಲವು ಶಾಲೆಗಳಲ್ಲಿ ಪ್ರವೇಶ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಶಾಲೆಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ; ಮುಂದಿನ ಶೈಕ್ಷಣಿಕ ವರ್ಷದಲ್ಲಿ ಈ ರೀತಿಯ ಪ್ರವೇಶ ನಿರಾಕರಣೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ೨೦೧೫-೧೬ನೇ ಸಾಲಿನಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯಡಿಯಲ್ಲಿ ಇಲ್ಲಿಯವರೆವಿಗೆ ದಾಖಲಿಸಿರುವ ವಿದ್ಯಾರ್ಥಿಗಳ ಸಲುವಾಗಿ ಒಟ್ಟು ಎಷ್ಟು ಹಣವನ್ನು ಶಾಲೆಗಳಿಗೆ ಪಾವತಿಸಲಾಗಿದೆ?

## ಐ.ಐ.ಟಿ.ಯಲ್ಲಿ ಕನ್ನಡಿಗರಿಗೆ ಮೀಸಲಾತಿ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೧೧ (೩೫೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭಾರತೀಯ ತಂತ್ರಜ್ಞಾನ ಸಂಸ್ಥೆ (IIT) ಎಲ್ಲಿದೆ ; ಈ ಸಂಸ್ಥೆಗಾಗಿ ರಾಜ್ಯ ಸರ್ಕಾರ ಎಷ್ಟು ಎಕರೆ ಜಮೀನು ಮತ್ತಿತರ ಸೌಲಭ್ಯಗಳನ್ನು ನೀಡಿದೆ ;

(ಆ) ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆ ನಿಯಂತ್ರಣದಲ್ಲಿರುವ ಈ ಸಂಸ್ಥೆ, ರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶಾತಿಯಲ್ಲಿ ಮೀಸಲಾತಿಯನ್ನು ಕಲ್ಪಿಸಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಇ) ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಾತಿ ಕಲ್ಪಿಸುವಂತೆ ರಾಜ್ಯ ಸರ್ಕಾರ ಮನವಿ ಮಾಡಿದೆಯೇ ; ಮಾಡಿದ್ದಲ್ಲಿ, ಕೇಂದ್ರ ಸರ್ಕಾರ ಮನವಿಯನ್ನು ಪುರಸ್ಕರಿಸಿದೆಯೇ ?

## ವಿಶೇಷ ಪ್ಯಾಕೇಜ್ ಮೂಲಕ ಮನೆಗಳನ್ನು ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೨ (೪೫೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲೆಮಾರಿ / ಅರೆ ಅಲೆಮಾರಿ ಹಾಗೂ ಗೊಲ್ಲರ ಹಟ್ಟಿಗಳಲ್ಲಿ ವಿಶೇಷ ಪ್ಯಾಕೇಜ್ ಮೂಲಕ ಮನೆಗಳನ್ನು ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ೨೦೧೬-೧೭ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿವಾರು ಮನೆಗಳ ಹಂಚಿಕೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ಎಷ್ಟು ಪ್ರಮಾಣ ನಿಗಧಿಪಡಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಖಾಸಗಿ ಅನುದಾನಿತ ಪ್ರೌಢ ಶಾಲಾ ಬೋಧಕೇತರ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೧೩ (೩೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕೇತರ ಗ್ರೂಪ್ 'ಸಿ' ಮತ್ತು 'ಡಿ' ನೌಕರರ ಸಂಖ್ಯೆ ಎಷ್ಟು ;

(ಆ) ಸದರಿ ಬೋಧಕೇತರ ಸಿಬ್ಬಂದಿಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇವರಲ್ಲಿ ಸುಮಾರು ೨೦-೨೫ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ೧೪೦ 'ಡಿ' ಗ್ರೂಪ್ ನೌಕರ ಸಿಬ್ಬಂದಿಗಳನ್ನು ವೇತನಾನುದಾನಕ್ಕೆ ಒಳಪಡಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಗಮನಕ್ಕೆ ಬಂದಿದ್ದಲ್ಲಿ, ಯಾವಾಗ ಸದರಿ ಸಿಬ್ಬಂದಿಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ ?

## ಖಾಸಗಿ ಅನುದಾನಿತ ನೌಕರರ ವೈದ್ಯಕೀಯ ಸೌಲಭ್ಯದ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೧೪೪ (೩೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೇತನಾನುದಾನಕ್ಕೆ ಒಳಪಟ್ಟ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರಿ ನೌಕರರಿಗೆ ದೊರಕುವಂತಹ ವೈದ್ಯಕೀಯ ಸೌಲಭ್ಯಗಳು ದೊರಕುತ್ತಿಲ್ಲದಿರುವುದು ಸರ್ಕಾರದ ಗಮನದಲ್ಲಿ ಇದೆಯೇ ;

(ಇ) ರಾಜ್ಯ ಸರ್ಕಾರಿ ನೌಕರರಿಗೆ ಸಿಗುವಂತಹ 'ಜೋತಿ ಸಂಜೀವಿನಿ' ಯೋಜನೆ ಮತ್ತು ವೈದ್ಯಕೀಯ ಮರುಪಾವತಿಯಂತಹ ಯೋಜನೆಗಳನ್ನು ಅನುದಾನಿತ ಸಿಬ್ಬಂದಿಗಳಿಗೂ ನೀಡುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ ;

(ಈ) ಆಲೋಚಿಸಿದ್ದಲ್ಲಿ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಯಾವಾಗ ಅನುಷ್ಠಾನ ಮಾಡಲಾಗುತ್ತಿದೆ ?

## ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೧೫೫ (೩೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಮಂಜೂರಾಗಿರುವ ಮುಖ್ಯ ಗ್ರಂಥಾಧಿಕಾರಿಗಳ ಹುದ್ದೆಗಳು ಎಷ್ಟು;

(ಆ) ಇದರಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; ಇದರಲ್ಲಿ ನೇರ ನೇಮಕಾತಿ ಕೋಟಾ ಮತ್ತು ಬಡ್ತಿ ಕೋಟಾದ ಹುದ್ದೆಗಳೆಷ್ಟು ;

(ಇ) ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ವಿಶೇಷವಾಗಿ ಬಡ್ತಿ ಕೋಟಾದ ಹುದ್ದೆಗಳನ್ನು ತುಂಬಲು ಕೈಗೊಂಡ ಕ್ರಮಗಳೇನು ;

(ಉ) ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೧೬ (೩೩೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದಲ್ಲಿರುವ ಖಾಸಗಿ ಅನುದಾನಿತ ಪಾಲಿಟೆಕ್ನಿಕ್ (ಡಿಪ್ಲೋಮ) ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಕಾಲೇಜುಗಳ ಹೆಸರು ಮತ್ತು ವಿಳಾಸ ಒದಗಿಸುವುದು)

(ಆ) ಯಾವ ಯಾವ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಮೆಕ್ಯಾನಿಕಲ್ ಮತ್ತು ಆಟೋಮೊಬೈಲ್ ವಿಭಾಗಗಳು ಅನುದಾನಕ್ಕೆ ಒಳಪಟ್ಟಿವೆ ; (ವಿವರವನ್ನು ಒದಗಿಸುವುದು)

(ಇ) ಕರ್ನಾಟಕದಲ್ಲಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಬೋಧಕ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಅನುದಾನಿತ ಪಾಲಿಟೆಕ್ನಿಕ್ ಮೆಕ್ಯಾನಿಕಲ್ ಮತ್ತು ಆಟೋಮೊಬೈಲ್ ವಿಭಾಗಗಳಲ್ಲಿ ಒಟ್ಟು ಎಷ್ಟು ಬೋಧಕ ಹುದ್ದೆಗಳು ಖಾಲಿ ಇವೆ ; (ವೃಂದ ಮತ್ತು ಮೀಸಲಾತಿವಾರು ಖಾಲಿಯಿರುವ ಬೋಧಕ ಹುದ್ದೆಗಳ ವಿವರವನ್ನು ಒದಗಿಸುವುದು)

(ಉ) ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ?

## ವಸತಿ ಯೋಜನೆ ಅನುಷ್ಠಾನದಲ್ಲಿನ ಗೊಂದಲ ಮತ್ತು ಗ್ರಾಮ ಪಂಚಾಯತ್ ಅಧಿಕಾರ ಮೊಟಕುಗೊಳಿಸುತ್ತಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭ (೩೪೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಆ) ವಸತಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಫೋಟೋ ಆಡಿಟ್ ಸೇರಿದಂತೆ ವಿವಿಧ ಕಾರಣ ನೀಡಿ ಅನುದಾನ ತಡೆ ಹಿಡಿಯಲಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ನೀಡಿದ ನಿವೇಶನಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ವಸತಿ ರಹಿತ ವಿಧವೆಯರು, ಅಂಗವಿಕಲರು ಸೇರಿದಂತೆ ವಿಶೇಷ ವರ್ಗದಡಿ ಹಾಗೂ ಗ್ರಾಮ ಪಂಚಾಯತ್ ವ್ಯಾಪ್ತಿಯಡಿ ಸರ್ಕಾರದಿಂದ ನಿವೇಶನ ರಹಿತರಿಗೆ ಒದಗಿಸುವ ನಿವೇಶನಗಳ ಸಂಖ್ಯೆಗನುಗುಣವಾಗಿ ಸೂರು ಕಲ್ಪಿಸಲು ಸರ್ಕಾರದಿಂದ ಮನೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲವಾದಲ್ಲಿ ಈ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಕ್ರಮ ಕೈಗೊಳ್ಳಲಿದೆ ;

(ಉ) ಉಡುಪಿ, ದಕ್ಷಿಣ ಕನ್ನಡ ಸೇರಿದಂತೆ ೫ ಜಿಲ್ಲೆಗಳಲ್ಲಿ ೧೫ ವರ್ಷಗಳಿಂದ ಸರ್ಕಾರಿ ಜಾಗದಲ್ಲಿ ವಾಸಿಸುವ ವಸತಿ ರಹಿತರಿಗೆ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸುವ ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು) ಸದರಿ ಆದೇಶ ಸಮರ್ಪಕವಾಗಿ ಅನುಷ್ಠಾನವಾಗದಿರುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಊ) ವಸತಿ ಯೋಜನೆಯ ಫಲಾನುಭವಿಗಳ ಆಯ್ಕೆಯ ವಿಧಾನ ಅಧಿಕಾರ ಮತ್ತು ಅನುಷ್ಠಾನದ ಕುರಿತು ಸ್ಪಷ್ಟ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆಯೇ ; (ಪ್ರತಿ ಒದಗಿಸುವುದು)

(ಋ) ವಸತಿ ಯೋಜನೆಯ ಫಲಾನುಭವಿಗಳ ಆಯ್ಕೆ ಅನುದಾನ ಬಿಡುಗಡೆ ಅನುಷ್ಠಾನದ ಸಂಪೂರ್ಣ ಸ್ವಾಯತ್ತ ಅಧಿಕಾರ ಮತ್ತು ಜವಾಬ್ದಾರಿಯನ್ನು ಗ್ರಾಮ ಸಭೆ, ಮತ್ತು ಗ್ರಾಮ ಪಂಚಾಯತ್‌ಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕೇಂದ್ರ ಅನುದಾನ ದುರುಪಯೋಗದ ೧೪ನೇ ಹಣಕಾಸು ಆಯೋಗದ ಅನುದಾನ ಕಡಿತಗೊಳಿಸುತ್ತಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮ (೩೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳಿಗೆ ವಿವಿಧ ಶೀರ್ಷಿಕೆಯಡಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಖರ್ಚಾದ ಅನುದಾನವೆಷ್ಟು ; (ವರ್ಷವಾರು, ಶೀರ್ಷಿಕೆವಾರು ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದ ಅನುದಾನ ದುರುಪಯೋಗವಾದ ಪ್ರಕರಣಗಳ ಸಂಖ್ಯೆ ಎಷ್ಟು ; (ದುರುಪಯೋಗ ಮಾಡಿದ ಮೊತ್ತ ಮತ್ತು ಸಂಬಂಧಿತ ಅಧಿಕಾರಿಗಳ ಮಾಹಿತಿ ನೀಡುವುದು)

(ಇ) ಅನುದಾನ ದುರುಪಯೋಗ ಪ್ರಕರಣಗಳಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ;

(ಈ) ೧೪ನೇ ಹಣಕಾಸು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ನೀಡಿರುವ ಮಾರ್ಗಸೂಚಿಗಳೇನು ; ರಾಜ್ಯ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು ; (ಪ್ರತಿ ಒದಗಿಸುವುದು) ವಿದ್ಯುತ್ ದೀಪಗಳ ಅಳವಡಿಕೆಗಿರುವ ಅನುದಾನವನ್ನು ವಿದ್ಯುತ್ ಬಿಲ್ ಬಾಕಿಗೆ ಬದಲಾಯಿಸಿರುವುದು ನಿಜವೇ ;

(ಉ) ಕೇಂದ್ರ ಸರ್ಕಾರ ನೀಡಿರುವ ೧೪ನೇ ಹಣಕಾಸು ಯೋಜನೆಯ ಮಾರ್ಗಸೂಚಿ ಉಲ್ಲಂಘನೆ ಮಾಡಿ, ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ ಬಾಕಿ ಪಾವತಿಗೆ ಕಡಿತಗೊಳಿಸುತ್ತಿರುವುದು ಸರಿಯೇ;

ಇದುವರೆಗೆ ೧೪ನೇ ಹಣಕಾಸು ಯೋಜನೆಯ ಒಟ್ಟು ಎಷ್ಟು ಮೊತ್ತವನ್ನು ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ಲು ಬಾಕಿಗಾಗಿ ಪಾವತಿ ಮಾಡಲಾಗಿದೆ ;

(ಊ) ೧೪ನೇ ಹಣಕಾಸು ಯೋಜನೆಯ ಅನುದಾನವನ್ನು ವಿದ್ಯುತ್ ಬಿಲ್ಲುಗಳ ಬಾಕಿ ಪಾವತಿಗೆ ಕಡಿತಗೊಳಿಸದೆ ಸಂಪೂರ್ಣವಾಗಿ ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ರಮೇಶ್ ಕುಮಾರ್ ಸಮಿತಿ ಶಿಫಾರಸ್ಸಿನ ಸಮರ್ಪಕ ಅನುಷ್ಠಾನದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೯ (೩೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಪಂಚಾಯತ್ ರಾಜ್ ಕಾಯಿದೆಯ ಸಮಗ್ರ ತಿದ್ದುಪಡಿಗೆ ಸಂಬಂಧಿಸಿದಂತೆ ಮಾನ್ಯ ರಮೇಶ್ ಕುಮಾರ್ ಸಮಿತಿ ಸರ್ಕಾರಕ್ಕೆ ಮಾಡಿರುವ ಒಟ್ಟು ಶಿಫಾರಸ್ಸುಗಳೆಷ್ಟು ; (ವಿವರ ನೀಡುವುದು) ಒಟ್ಟು ಎಷ್ಟು ಶಿಫಾರಸ್ಸುಗಳನ್ನು ಕಾಯಿದೆ ತಿದ್ದುಪಡಿಯೊಂದಿಗೆ ಜಾರಿಗೆ ತರಲಾಗಿದೆ ; ಉಳಿದ ಶಿಫಾರಸ್ಸುಗಳನ್ನು ಯಾವಾಗ ಜಾರಿಗೆ ತರಲಾಗಿದೆ ;

(ಆ) ಕರ್ನಾಟಕ ಗ್ರಾಮ ಸ್ವರಾಜ್ಯ ಪಂಚಾಯತ್ ರಾಜ್ ತಿದ್ದುಪಡಿ ಕಾಯಿದೆ ಯಾವಾಗ ಜಾರಿಗೆ ತರಲಾಗಿದೆ ; (ಪ್ರತಿ ಒದಗಿಸುವುದು)

(ಇ) ಹೊಸ ತಿದ್ದುಪಡಿ ಗ್ರಾಮ ತಿದ್ದುಪಡಿ ಕಾಯಿದೆಯಲ್ಲಿನ ಅಂಶಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆಯೇ ;

(ಈ) ಹೊಸ ತಿದ್ದುಪಡಿ ಕಾಯಿದೆಯಂತೆ ಗ್ರಾಮ ಪಂಚಾಯತ್ ಸ್ಥಾಯಿ ಸಮಿತಿಗಳನ್ನು ರಚಿಸಲು ಜನವಸತಿ ಸಭಾ ಪ್ರದೇಶಗಳನ್ನು ಘೋಷಣೆ ಮಾಡಲು ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು) ಇಲ್ಲವಾದಲ್ಲಿ, ಅದಕ್ಕಿರುವ ತೊಡಕುಗಳೇನು; ಯಾವಾಗ ತಿದ್ದುಪಡಿ ಕಾಯಿದೆಯಂತೆ ಸಮಿತಿಗಳನ್ನು ಪುನರ್ ರಚಿಸಿ ಘೋಷಿಸಲಾಗುವುದು ;

(ಉ) ಕರ್ನಾಟಕ ಗ್ರಾಮ ಸ್ವರಾಜ್ ಪಂಚಾಯತ್ ರಾಜ್ ಕಾಯಿದೆಯ ಸಮರ್ಪಕ ಅನುಷ್ಠಾನ ಹಾಗೂ ತ್ರಿಸ್ತರದ ಆಡಳಿತ ವ್ಯವಸ್ಥೆಗೆ ವರ್ಗಾಯಿಸಿರುವ ಯೋಜನೆ, ಅಧಿಕಾರಕ್ಕೆ ಸಂಬಂಧಿಸಿದಂತೆ, ಸಂಪನ್ಮೂಲ ಹಾಗೂ ಸಿಬ್ಬಂದಿಗಳನ್ನು ಒದಗಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಈ ಕುರಿತು ಸ್ಪಷ್ಟ ಮಾರ್ಗಸೂಚಿ ಮತ್ತು ನಿಯಮಾವಳಿಗಳನ್ನು ಯಾವಾಗ ರಚಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಕರ್ಯ ಹಾಗೂ ಗುಣಮಟ್ಟದ ಶಿಕ್ಷಣ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೨೦ (೩೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಶಿಕ್ಷಣ ಹಕ್ಕು ಕಾಯಿದೆ ಅನುಷ್ಠಾನಕ್ಕಾಗಿ ಸರ್ಕಾರ ವೆಚ್ಚ ಮಾಡಿದ ಅನುದಾನವೆಷ್ಟು ;

(ಆ) ರಾಜ್ಯದಲ್ಲಿರುವ ಒಟ್ಟು ಕಿರಿಯ, ಹಿರಿಯ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು ; ಎಷ್ಟು ಶಾಲೆಗಳಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಶೌಚಾಲಯದ ವ್ಯವಸ್ಥೆಯಿದೆ ; ಎಷ್ಟು ಶಾಲೆಗಳಲ್ಲಿ ಬಾಲಕ ಮತ್ತು

ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯ ಬಾವಿ/ಬೋರ್‌ವೆಲ್ ಅಥವಾ ನಲ್ಲಿ ನೀರಿನ ವ್ಯವಸ್ಥೆಯಿದೆ ; (ತಾಲ್ಲೂಕುವಾರು ಜಿಲ್ಲಾವಾರು ವಿವರದೊಂದಿಗೆ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪಂಚಾಯತ್‌ವಾರು ವಿವರ ನೀಡುವುದು ಹಾಗೂ ಸರ್ಕಾರಿ ಮತ್ತು ಖಾಸಗಿ ಶಾಲೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಒಟ್ಟು ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ; ಇನ್ನೂ ಎಷ್ಟು ಶಾಲೆಗಳನ್ನು ಮುಚ್ಚುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; (ವಿವರ ನೀಡುವುದು)

(ಈ) ಪಂಚಾಯತ್‌ಗೊಂದು ಮಾದರಿ ಶಾಲೆ ಪ್ರಾರಂಭಿಸಲಾಗಿದೆಯೇ; ಸರ್ಕಾರದ ಈ ಯೋಜನೆ ಯಾವ ಹಂತದಲ್ಲಿದೆ ; ಯೋಜನೆ ವಿಳಂಬಕ್ಕೆ ಕಾರಣಗಳೇನು ; ಯಾವಾಗ ಯೋಜನೆ ಕಾರ್ಯಗತಗೊಳಿಸಲಾಗುವುದು ;

(ಉ) ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿ ಸಂಖ್ಯೆಗನುಗುಣವಾಗಿ ಶಿಕ್ಷಕರು, ಕೊಠಡಿ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಉತ್ತಮ ಮೂಲ ಸೌಕರ್ಯ ಒದಗಿಸುವುದರೊಂದಿಗೆ ಸರ್ಕಾರಿ ಶಾಲೆಗೆ ಹೆಚ್ಚೆಚ್ಚು ಮಕ್ಕಳು ದಾಖಲಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಲಾ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೩೨೧ (೩೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; ಮತ್ತು ಅಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಆ) ಈ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಈ ಶಾಲಾ ಮತ್ತು ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಈ) ಈ ಶೈಕ್ಷಣಿಕ ವರ್ಷದಲ್ಲಿ ನಿಗಧಿತ ಅವಧಿಯಲ್ಲಿ ಪಠ್ಯ ಪುಸ್ತಕ, ಸಮವಸ್ತ್ರಗಳನ್ನು ಒದಗಿಸಲಾಗಿದೆಯೇ ;

## ವಿದ್ಯಾರ್ಥಿಗಳಿಗೆ ವೃತ್ತಿ ಕೌಶಲ್ಯದ ಕಲಿಕೆ ಕುರಿತು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೩೨೨ (೩೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಧುನಿಕ ಯುಗದಲ್ಲಿ ಪಠ್ಯ ಕ್ರಮದ ಜೊತೆಗೆ ವೃತ್ತಿ ಕೌಶಲ್ಯದ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿದ್ಯಾರ್ಥಿಗಳಲ್ಲಿ ವೃತ್ತಿ ಕೌಶಲ್ಯ ಕಲಿಕೆಗೆ ಪೂರಕವಾದ ಪಠ್ಯಕ್ರಮ ಮತ್ತು ಸೌಲಭ್ಯಗಳನ್ನು ಸರ್ಕಾರ ಒದಗಿಸಿದೆಯೇ ;

(ಇ) ವೃತ್ತಿ ಕೌಶಲ್ಯ ಹಾಗೂ ವೈಜ್ಞಾನಿಕ ಶಿಕ್ಷಣ ನೀಡಲು ಸರ್ಕಾರ ಚಿಂತಿಸಿದೆಯೇ ; ಇದಕ್ಕೆ ಅಗತ್ಯವಿರುವ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗುತ್ತದೆಯೇ ?

## ಪೂರ್ವ ತಯಾರಿ ಇಲ್ಲದೆ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಪಠ್ಯ ಪರಿಷ್ಕರಣೆ ಮಾಡುತ್ತಿರುವುದರಿಂದ ಪೋಷಕರು, ವಿದ್ಯಾರ್ಥಿಗಳು ಆತಂಕಗೊಂಡಿರುವುದರ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೨೩ (೩೮೭+೪೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಪೂರ್ವ ತಯಾರಿಯಿಲ್ಲದೆ ಪ್ರಾಥಮಿಕ ಶಾಲೆಗಳ ಪಠ್ಯ ಪರಿಷ್ಕರಣೆ ಮಾಡುತ್ತಿರುವುದರಿಂದ ಪೋಷಕರು, ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಆತಂಕಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅವರ ಆತಂಕ ನಿವಾರಣೆಗೆ ಸರ್ಕಾರ ಏನು ಕ್ರಮ ಕೈಗೊಳ್ಳುವುದು ತುರ್ತು ಪಠ್ಯ ಪುಸ್ತಕಗಳ ಪರಿಷ್ಕರಣೆ ಕೈಗೊಳ್ಳಲು ಕಾರಣಗಳೇನು; ಈ ಪರಿಷ್ಕರಣೆಯ ಕಾರ್ಯವನ್ನು ಯಾವ ಸಮಿತಿಗೆ ವಹಿಸಲಾಗಿದೆ;

(ಇ) ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿಯವರೆಗೆ ಹಾಲಿ ಇರುವ ಪಠ್ಯ ಪುಸ್ತಕಗಳನ್ನು ಯಾವಾಗ ಪರಿಷ್ಕರಿಸಲಾಗಿತ್ತು; ಪ್ರಸ್ತುತ ಪಠ್ಯ ಪುಸ್ತಕಗಳನ್ನು ಯಾವ ರಾಷ್ಟ್ರೀಯ ಶಿಕ್ಷಣ ನೀತಿ–ರಾಜ್ಯ ಶಿಕ್ಷಣ ನೀತಿಯ ಆಧಾರದಲ್ಲಿ ರಚಿಸಲಾಗಿದೆ;

(ಈ) ರಾಷ್ಟ್ರೀಯ ಶಿಕ್ಷಣ ನೀತಿ ಮತ್ತು ರಾಜ್ಯ ಶಿಕ್ಷಣ ನೀತಿಗಳ ವಿವರ ನೀಡುವುದು; ಸದರಿ ಪಠ್ಯ ಪರಿಷ್ಕರಣೆಯಲ್ಲಿ ಯಾವ ಶಿಕ್ಷಣ ನೀತಿ ಅಳವಡಿಸಿಕೊಳ್ಳಲಾಗಿದೆ;

(ಉ) ರಾಜ್ಯದಲ್ಲಿ ೨೦೧೭-೧೮ನೇ ಸಾಲಿಗೆ ಪರಿಷ್ಕರಿಸಿದ ಹೊಸ ಪಠ್ಯ ಪುಸ್ತಕಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆಯೇ; (೧ನೇ ತರಗತಿಯಿಂದ ೧೦ನೇ ತರಗತಿಯ ಪ್ರತಿಯೊಂದು ವಿಷಯದ ವಿವರ ನೀಡುವುದು)

(ಊ) ರಾಜ್ಯ ಸರ್ಕಾರ ಡಾ॥ ಬರಗೂರು ರಾಮಚಂದ್ರಪ್ಪ ಸರ್ವಾಧ್ಯಕ್ಷರು ಆಗಿರುವ ಪರಿಷ್ಕರಣಾ ಸಮಿತಿಯ (ಪ್ರತಿಯೊಂದು ವಿಷಯವಾರು) ನೇಮಕಗೊಂಡ ದಿನಾಂಕದಿಂದ ಇಲ್ಲಿಯವರೆಗೂ work done report, ನಡೆಸಲಾದ ಪ್ರತಿಯೊಂದು ಚರ್ಚೆಗಳ ವಿವರ ಸ್ವೀಕರಿಸಲಾದ ಅಹವಾಲು, ದೂರು, ಮನವಿ, ದಾಖಲೆಗಳ ವಿವರ ನೀಡುವುದು;

(ಋ) ಸದರಿ ಪರಿಷ್ಕರಣಾ ಸಮಿತಿಗೆ ನೇಮಿಸಲಾದ ಪ್ರತಿಯೊಬ್ಬ ಸದಸ್ಯರ ಹೆಸರು, ಅವರು ಕಾರ್ಯನಿರ್ವಹಿಸಿದ ಅವಧಿ, ಅರ್ಧದಲ್ಲೇ ತೆರವುಗೊಳಿಸಿದ ಸದಸ್ಯರ ವಿವರ, ಬದಲಿ ನೇಮಕಗೊಂಡ ಸದಸ್ಯರ ವಿವರ, ಅವರು ಭಾಗವಹಿಸಿದ ಸಭೆಯ ವಿವರಗಳನ್ನು ನೀಡುವುದು;

(ಎ) ಪರಿಷ್ಕರಣಾ ಸಮಿತಿಯು ಪ್ರತಿ ವಿಷಯವಾರು ಪಠ್ಯ ಪುಸ್ತಕಗಳಲ್ಲಿ ತರಗತಿವಾರು ತೆಗೆದು ಹಾಕಿದ ಅಂಶಗಳು ಹಾಗೂ ಸೇರ್ಪಡೆಗೊಳಿಸಿದ ಅಂಶಗಳು, ಅದಕ್ಕೆ ಒದಗಿಸಿರುವ ಸಮರ್ಥನೀಯ ವಿವರಗಳನ್ನು ಸಂಪೂರ್ಣವಾಗಿ ಒದಗಿಸುವುದು; (ಪ್ರತಿ ವಿಷಯವಾರು ಹಾಗೂ ತರಗತಿವಾರು ಎಲ್ಲಾ ಪುಸ್ತಕಗಳ ವಿವರ ನೀಡುವುದು)

(ಏ) ಎನ್.ಸಿ.ಈ.ಆರ್.ಟಿ. ಪಠ್ಯ ಪುಸ್ತಕಗಳನ್ನೇ ಕನ್ನಡಕ್ಕೆ ಅನುವಾದಿಸುವ ಕಾರ್ಯ ನಡೆದಿದೆಯೇ; ಅದನ್ನು ಅಳವಡಿಸಿಕೊಳ್ಳುವ ಚಿಂತನೆ ಇದೆಯೇ; ಇದ್ದರೆ, ಯಾವ ಯಾವ ತರಗತಿಗಳಿಗೆ ಅಳವಡಿಸಿಕೊಳ್ಳಲಾಗುವುದು; ಯಾವ ವರ್ಷದಿಂದ ಜಾರಿಗೊಳಿಸಲಾಗುವುದು?

## ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ ನೀಡುವ ಹಾಲಿನ ಪುಡಿ ಕಾಳಸಂತೆಯ ಪಾಲಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೪ (೩೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಕ್ಷೀರ ಭಾಗ್ಯ ಯೋಜನೆಯಡಿ ಶಾಲಾ ಮಕ್ಕಳಿಗೆ ಉಚಿತವಾಗಿ ನೀಡುವ ಹಾಲಿನ ಪುಡಿ ಬೆಳಗಾವಿ ಜಿಲ್ಲೆಯಲ್ಲಿ ಕಾಳಸಂತೆಯ ಪಾಲಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಜನ ವಿದ್ಯಾರ್ಥಿಗಳಿಗೆ ಪ್ರತಿದಿನ ಹಾಲಿನ ಪುಡಿಗಳನ್ನು ಉಚಿತವಾಗಿ ನೀಡಲಾಗುತ್ತಿದೆ; ಹಾಲಿನ ಪುಡಿಯು ಖರೀದಿಯಿಂದ ಹಿಡಿದು ಮಕ್ಕಳಿಗೆ ವಿತರಣೆಯಾಗುವತನಕ, ಯಾರಿಂದ ಖರೀದಿಸಲಾಗುತ್ತದೆ; ಅದರ ಮಾನದಂಡಗಳೇನು; ವಿತರಣೆಯ ಹೊಣೆ ಯಾರದ್ದು; (ಪ್ರತಿ ಹಂತದ ವಿವರ ನೀಡುವುದು)

(ಇ) ರಾಜ್ಯ ಸಿಸಿಬಿ ಪೊಲೀಸರು ಬಂಧಿಸಿರುವ ಹಾಲಿನ ಪುಡಿ ಕಾಳ ಸಂತೆಯ ಮಾರಾಟಗಾರರ ವಿರುದ್ಧ ಸರ್ಕಾರವು ಏನು ಕ್ರಮ ಕೈಗೊಂಡಿದೆ; ಇಂತಹ ಇನ್ನು ಎಷ್ಟು ಪ್ರಕರಣಗಳು ದಾಖಲಾಗಿವೆ; (ವಿವರ ನೀಡುವುದು)

(ಈ) ಈ ಪ್ರಕರಣದ ಹಿಂದೆ ದೊಡ್ಡ ಜಾಲವೇ ಇರುವುದು ಕಂಡು ಬಂದಿದ್ದು, ಸರ್ಕಾರವು ಇದನ್ನು ತಡೆಗಟ್ಟಲು ಏನು ಕ್ರಮ ಕೈಗೊಂಡಿದೆ?

## ಬೆಳಗಾವಿ ಜಿಲ್ಲೆಗೆ ನರೇಗಾ ಯೋಜನೆಗೆ ಅನುದಾನ ಬಿಡುಗಡೆಯಾಗದೆ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೫ (೩೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ನರೇಗಾ ಯೋಜನೆಗೆ ಅನುದಾನ ಬಿಡುಗಡೆಯಾಗದೆ ಕಾಮಗಾರಿಗಳು ಸ್ಥಗಿತಗೊಂಡಿದ್ದು, ಬರದಿಂದ ಕಂಗೆಟ್ಟ ಜನ ಉದ್ಯೋಗಕ್ಕಾಗಿ ಗುಳೆ ಹೋಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳು ಎಷ್ಟು; ಅವು ಯಾವುವು; ಸದರಿ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು; (ತಾಲ್ಲೂಕುವಾರು, ಪಂಚಾಯತಿವಾರು ವಿವರ ನೀಡುವುದು)

(ಇ) ಕೂಲಿ ಕಾರ್ಮಿಕರು ಗುಳೆ ಹೋಗದಂತೆ ತಡೆಯಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಿದೆ;

(ಈ) ನರೇಗಾ ಯೋಜನೆಯಡಿ ಹೊಸ ಕ್ರಿಯಾ ಯೋಜನೆ ತಯಾರಿಸಿ ಅನುದಾನ ಬಿಡಗಡೆ ಮಾಡಿ ಉದ್ಯೋಗ ಸೃಷ್ಟಿಸಲು ಸರ್ಕಾರ ಚಿಂತಿಸಿದೆಯೇ?

## ರಾಜ್ಯದಲ್ಲಿ ೧೯೮೭–೧೯೯೫ರ ನಂತರ ಪ್ರಾರಂಭವಾದ ಪ್ರಾಥಮಿಕ ಮತ್ತು ಪ್ರೌಢ (ಕನ್ನಡ ಮಾಧ್ಯಮ) ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೨೬ (೪೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೯೮೭–೯೫ ರವರೆಗೆ ಪ್ರಾರಂಭವಾದ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳನ್ನು ಮತ್ತು ಆ ಸಂಸ್ಥೆಗಳ ಎಷ್ಟು ಜನ ಸಿಬ್ಬಂದಿಗಳನ್ನು ಅನುದಾನ ಪ್ರಕ್ರಿಯೆಗೆ ಒಳಪಡಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅವಧಿಯಲ್ಲಿ ಪ್ರಾರಂಭವಾದ ಎಷ್ಟು ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳು ಅನುದಾನಕ್ಕೆ ಒಳಪಡಿಸಲು ಬಾಕಿ ಉಳಿದಿರುತ್ತದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಅವಧಿಯಲ್ಲಿ ಪ್ರಾರಂಭವಾದ ಎಷ್ಟು ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳು ತಮಗೆ ಅನುದಾನದ ಅಗತ್ಯವಿಲ್ಲವೆಂದು ತಿಳಿಸಿರುತ್ತಾರೆ; (ಜಿಲ್ಲಾವಾರು ವಿವರ ನೀಡುವುದು)

(ಈ) ೧೯೯೫ ಜೂನ್ ನಂತರ ರಾಜ್ಯದಲ್ಲಿ ಎಷ್ಟು ಪ್ರಾಥಮಿಕ/ಪ್ರೌಢ/(ಕನ್ನಡ ಮಾಧ್ಯಮ) ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಉ) ೧೯೯೫ರ ನಂತರ ಪ್ರಾರಂಭವಾದ ಪ್ರಾಥಮಿಕ/ಪ್ರೌಢ/(ಕನ್ನಡ ಮಾಧ್ಯಮ) ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳನ್ನು ಅನುದಾನದ ವ್ಯಾಪ್ತಿಗೆ ಒಳಪಡಿಸುವ ಯೋಚನೆ/ಯೋಜನೆ ಸರ್ಕಾರದ ಮುಂದಿದೆಯೇ; (ಕಾರಣಗಳನ್ನು ನೀಡುವುದು)

(ಊ) ಮಾಧ್ಯಮಗಳಲ್ಲಿ ವರದಿಯಾದಂತೆ ಮುಂದಿನ ೫ ವರ್ಷಗಳ ಕಾಲ ಹೊಸ ಶಿಕ್ಷಣ ಸಂಸ್ಥೆಗಳನ್ನು ಖಾಸಗಿ ರಂಗದಲ್ಲಿ ತೆರೆಯಲು ಅನುಮತಿ ನೀಡದಿರಲು ಸರ್ಕಾರ ನಿರ್ಣಯಿಸಿದೆಯೇ? (ನಿರ್ಣಯಿಸಿದ್ದಲ್ಲಿ, ಕಾರಣಗಳನ್ನು ನೀಡುವುದು)

## ರಾಜ್ಯದ ಖಾಸಗಿ ಅನುದಾನಿತ (ಪ್ರಾಥಮಿಕ/ಪ್ರೌಢ/ಪದವಿಪೂರ್ವ) ಶಿಕ್ಷಣ ಸಂಸ್ಥೆಗಳಲ್ಲಿ ಗ್ರೂಫ್–ಸಿ ಮತ್ತು ಗ್ರೂಫ್–ಡಿ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಅನುದಾನಕ್ಕೆ ಒಳಪಡಿಸುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೨೭ (೪೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಅನುದಾನಿತ (ಪ್ರಾಥಮಿಕ/ಪ್ರೌಢ/ಪದವಿಪೂರ್ವ) ಶಿಕ್ಷಣ ಸಂಸ್ಥೆಗಳಲ್ಲಿ ಒಂದು ಗ್ರೂಫ್–ಸಿ ಮತ್ತು ಗ್ರೂಫ್–ಡಿ ಹುದ್ದೆಗಳನ್ನು ನೇಮಿಸಲು ನಿರ್ಣಹಿಸಲಾಗಿದೆಯೇ; (ಈ ಕುರಿತಾಗಿ ಸರ್ಕಾರಿ ಆದೇಶವನ್ನು ಹೊರಡಿಸಿದ್ದಲ್ಲಿ ಪ್ರತಿಯನ್ನು ನೀಡುವುದು)

(ಆ) ಸರ್ಕಾರದ ಮೇಲಿನ ಆದೇಶದಂತೆ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಎಷ್ಟು ಗ್ರೂಫ್–ಸಿ ಮತ್ತು ಗ್ರೂಫ್–ಡಿ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ; (ವಿವರ ನೀಡುವುದು)

(ಇ) ಹತ್ತಾರು ವರ್ಷಗಳಿಂದ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಗ್ರೂಫ್–ಸಿ ಮತ್ತು ಗ್ರೂಫ್–ಡಿ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸಲು ಮತ್ತು ಸರ್ಕಾರದ ಆದೇಶವನ್ನು ಅನುಷ್ಠಾನಗೊಳಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ; ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ಯಾವಾಗ?

## ರಾಜ್ಯದಲ್ಲಿ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ಸಂಸ್ಕೃತ ಶಿಕ್ಷಕರು/ಉಪನ್ಯಾಸಕರುಗಳ ಹುದ್ದೆಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೨೮ (೪೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ಸಂಸ್ಕೃತ ಶಿಕ್ಷಕ/ಉಪನ್ಯಾಸಕರ ಹುದ್ದೆ ಸೃಷ್ಟಿಯಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ಸೃಷ್ಟಿಯಾಗಿರುವ ಸಂಸ್ಕೃತ ಶಿಕ್ಷಕ/ಉಪನ್ಯಾಸಕರ ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳನ್ನು ತುಂಬಲು ಬಾಕಿ ಇವೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಹುದ್ದೆಗಳನ್ನು ತುಂಬದಿರಲು ಕಾರಣಗಳೇನು;

(ಈ) ಭಾರತದ ಅತ್ಯಂತ ಪ್ರಾಚೀನ ಭಾಷೆಯಾಗಿರುವ ಸಂಸ್ಕೃತದ ಘೋಷಣೆಗಾಗಿ ಅತ್ಯಂತ ಅಗತ್ಯವಿರುವ ಈಗಾಗಲೇ ಸೃಷ್ಟಿಯಾಗಿರುವ ಸಂಸ್ಕೃತ ಶಿಕ್ಷಕ/ಉಪನ್ಯಾಸಕ ಹುದ್ದೆಗಳನ್ನು ಆದ್ಯತೆಯ ಮೇರೆಗೆ ವಿಶೇಷ ಪ್ರಕರಣವೆಂದು ಪರಿಗಣಿಸಿ ವಿದ್ಯಾರ್ಥಿಗಳ ಸಂಖ್ಯೆಯ ಅನುಪಾತದಲ್ಲಿ ಮಾರ್ಪಾಡುಗೊಳಿಸಿ ತುಂಬಲು ಯಾವ ಅಗತ್ಯ ಕ್ರಮ ಕೈಗೊಳ್ಳಲಾಗಿದೆಯೇ; ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

## ಹೊಸ ಪಠ್ಯ ಪುಸ್ತಕಗಳನ್ನು ರಚಿಸಲು ಹಾಗೂ ಬಿಡುಗಡೆ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೨೯ (೪೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿಯವರೆಗೆ ಪ್ರಸ್ತುತ ಉಪಯೋಗಿಸುತ್ತಿರುವ ಪಠ್ಯಪುಸ್ತಕಗಳನ್ನು ಯಾವಾಗ ರಚಿಸಲಾಗಿದೆ;

(ಆ) ಈಗ ಉಪಯೋಗದಲ್ಲಿರುವ ಪಠ್ಯ ಪುಸ್ತಕಗಳನ್ನು ಯಾವ ರಾಷ್ಟ್ರೀಯ ಶಿಕ್ಷಣ ನೀತಿ/ರಾಜ್ಯ ಶಿಕ್ಷಣ ನೀತಿಯ ಆಧಾರದಲ್ಲಿ ರಚಿಸಲಾಗಿದೆ; (ವಿವರ ನೀಡುವುದು)

(ಇ) ಸರ್ಕಾರದ ಆದೇಶ ಸಂಖ್ಯೆ, ಇಡಿ:೯೫:ಡಿಜಿಒ:೨೦೦೫, ಬೆಂಗಳೂರು, ದಿನಾಂಕ: ೦೪-೦೧-೨೦೦೬ರ ಅನ್ವಯ ಪಠ್ಯ ಪುಸ್ತಕ ರಚನೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ;

(ಈ) ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ವರದಿಯಾಗಿರುವಂತೆ ಹೊಸ ಪಠ್ಯ ಪುಸ್ತಕಗಳನ್ನು ರಚಿಸಲು ಸರ್ಕಾರ ನಿರ್ಣಯ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ವಿವರವಾದ ಕಾರಣಗಳನ್ನು ನೀಡುವುದು;

(ಉ) ಹೊಸ ಪಠ್ಯ ಪುಸ್ತಕಗಳನ್ನು ರಚಿಸಲು ಮತ್ತು ಅವುಗಳನ್ನು ಬಿಡುಗಡೆ ಮಾಡುವ ಹಂತದಲ್ಲಿ ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಯಾವ ಮಾನದಂಡಗಳನ್ನು ಪರಿಗಣಿಸಲಾಗಿದೆ; ಮತ್ತು ಎಲ್ಲಾ ಹಂತದ ಪರಿಶೀಲನಾ ಪ್ರಕ್ರಿಯೆಯನ್ನು ಅನುಸರಿಸಲಾಗಿದೆಯೇ; (ವಿವರ ನೀಡುವುದು)

(ಊ) ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿ (National Education Policy) ಯ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಜೆ.ಓ.ಸಿ ಉಪನ್ಯಾಸಕರನ್ನು ಸರ್ಕಾರಿ ಮತ್ತು ಅನುದಾನಿತ ಸೇವೆಯಲ್ಲಿ ವಿಲೀನಗೊಳಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):-**

೩೩೦ (೪೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಈ ಹಿಂದೆ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವೃತ್ತಿಪರ ಶಿಕ್ಷಕರಾಗಿ (ಜೆ.ಓ.ಸಿ) ಕಾರ್ಯನಿರ್ವಹಿಸುತ್ತಿದ್ದು, ಎಷ್ಟು ಜನ

ಅನುದಾನಿತ/ಸರ್ಕಾರಿ ಶಿಕ್ಷಕ/ಉಪನ್ಯಾಸಕರನ್ನು ಸರ್ಕಾರಿ ಮತ್ತು ಅನುದಾನಿತ ಸೇವೆಯಲ್ಲಿ ವಿಲೀನಗೊಳಿಸಲಾಗಿದೆ; (ಇಲಾಖಾವಾರು ವಿವರ ನೀಡುವುದು)

(ಆ) ಈ ರೀತಿ ವಿಲೀನಗೊಳಿಸಿದ ಎಷ್ಟು ಜನ ಸಿಬ್ಬಂದಿಗಳ ಖಾಯಂ ಪೂರ್ವ ಅವಧಿಯನ್ನು ಘೋಷಣೆ ಮಾಡಲಾಗಿದೆ; (ಇಲಾಖಾವಾರು ವಿವರ ನೀಡುವುದು)

(ಇ) ಪದವಿ ಪೂರ್ವ ಇಲಾಖೆ ಮತ್ತು ಕಾರ್ಮಿಕ ಇಲಾಖೆಯಲ್ಲಿ ಬಹು ದೊಡ್ಡ ಸಂಖ್ಯೆಯಲ್ಲಿ (ಜೆ.ಓ.ಸಿ) ಸಿಬ್ಬಂದಿಗಳ ವಿಲೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಲ್ಲಿ, ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನದಲ್ಲಿ ಇದೆಯೇ; (ಕಾರಣಗಳನ್ನು ನೀಡುವುದು)

(ಈ) ವಿಲೀನ ಪ್ರಕ್ರಿಯೆಗಾಗಿ ಬಾಕಿ ಉಳಿದಿರುವ ಪ್ರಕರಣಗಳೆಷ್ಟು; ಈ ವಿಲೀನ ಪ್ರಕ್ರಿಯೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು;

(ಉ) ಜೆ.ಓ.ಸಿ. ಸಿಬ್ಬಂದಿಗಳನ್ನು ಅನುದಾನಿತ ಸಂಸ್ಥೆಗಳಲ್ಲಿ ನೇಮಕ ಮಾಡುವಲ್ಲಿ ತಪ್ಪಿರುವ ಸಂಸ್ಥೆಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ?

## ಆಂಗ್ಲ ಭಾಷೆ ಬೋಧಕರ ಕೊರತೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೩೧ (೪೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ತುಮಕೂರು ಜಿಲ್ಲೆಯಲ್ಲಿ ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಬೋಧಿಸುವ ಶಿಕ್ಷಕರು ಇಲ್ಲದೆ ಇರುವ ಶಾಲೆಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಕ್ಕಳಿಗೆ ಆಂಗ್ಲ ಕಲಿಕೆಗೆ ಪೂರಕವಾಗಿ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ; (ಮಾಹಿತಿ ಒದಗಿಸುವುದು)

(ಇ) ಆಂಗ್ಲ ಭಾಷಾ ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲು ಸರ್ಕಾರದ ನೀತಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೩೨ (೩೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲು ಇರುವ ಸರ್ಕಾರದ ನೀತಿ ಏನು; (ವಿವರ ನೀಡುವುದು)

(ಆ) ಈ ನಿಟ್ಟಿನಲ್ಲಿ ಸಂಪುಟ ಉಪ ಸಮಿತಿ ರಚಿಸಲಾಗಿದೆಯೇ; ಸಂಪುಟ ಉಪ ಸಮಿತಿ ಮುಂದಿರುವ ಪ್ರಸ್ತಾವನೆ ಏನು;

(ಇ) ಯಾವ ಯಾವ ಕಾಲೇಜುಗಳಿಗೆ ಯಾವ ಅವಧಿಯೊಳಗೆ ಅನುದಾನ ನೀಡಲಾಗುವ ವಿಷಯವು ಉಪ ಸಮಿತಿಯ ಮುಂದಿದೆಯೇ; ಇದಕ್ಕೆ ನಿಗಧಿಪಡಿಸಲಾಗಿರುವ ಸಮಯವೇನು;

(ಈ) ಇದಕ್ಕೆ ಅನುಸರಿಸಲಾಗುವ ಮಾನದಂಡಗಳೇನು? (ಮಾಹಿತಿ ನೀಡುವುದು)

## ಗ್ರಾಮಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೩೩ (೪೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ವಿಧಾನ ಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಕುಡಿಯಲು ಯೋಗ್ಯವಿಲ್ಲದ ನೀರಿರುವ ಗ್ರಾಮಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಅಂತಹ ಗ್ರಾಮಗಳು ಯಾವುವು; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಕುಡಿಯಲು ಯೋಗ್ಯವಲ್ಲದ ನೀರಿರುವ ಗ್ರಾಮಗಳಲ್ಲಿ ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶುದ್ಧೀಕರಣ ಘಟಕಗಳನ್ನು ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು?

## ರಾಜ್ಯದ ಶಾಲಾ ಕಟ್ಟಡಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೪ (೪೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮಲೆನಾಡು ಪ್ರದೇಶಗಳಲ್ಲಿ ಮಳೆಗಾಲದಲ್ಲಿ ಬಹಳಷ್ಟು ಶಾಲಾ ಕಟ್ಟಡಗಳು ಹಾಳಾಗುತ್ತಿದ್ದು, ಇವುಗಳ ದುರಸ್ಥಿಗಾಗಿ ನೀಡುತ್ತಿರುವ ಅನುದಾನ ಬಹಳ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾದ ಮನೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೫ (೪೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನವರೆಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಸರ್ಕಾರದಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಹಾಗೂ ಯೋಜನೆಗಳವಾರು ವಿವರ ನೀಡುವುದು)

(ಆ) ಸದರಿ ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳ ಹಂಚಿಕೆ ಕಾರ್ಯ ಪೂರ್ಣಗೊಂಡಿದೆ;

(ಇ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿವೆ; ಮತ್ತು ಪೂರ್ಣಗೊಳ್ಳದ ಮನೆಗಳ ಸಂಖ್ಯೆ ಎಷ್ಟು; ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣಗಳೇನು? (ವಿವರ ನೀಡುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೬ (೪೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ (NREG) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಯಾವ್ಯಾವ ಗ್ರಾಮ ಪಂಚಾಯಿತಿಗಳಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ ಇದೆ ;

(ಇ) ಗ್ರಾಮ ಪಂಚಾಯಿತಿಗಳಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ನಿಯೋಜನೆ ಮಾಡುವ ಅಧಿಕಾರವು ಜಿಲ್ಲಾ ಪಂಚಾಯಿತಿಗೆ ಇದೆಯೇ; ಹಾಗಾದರೆ ಯಾವ್ಯಾವ ಗ್ರಾಮ ಪಂಚಾಯಿತಿಗಳಿಂದ ಯಾವ್ಯಾವ ಗ್ರಾಮ ಪಂಚಾಯಿತಿಗಳಿಗೆ ನಿಯೋಜನೆ ಮಾಡಲಾಗಿದೆ ; ನಿಯೋಜನೆ ಮಾಡಲಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಎಷ್ಟೆಷ್ಟು ಗ್ರಾಮ ಪಂಚಾಯಿತಿಗಳ ಜವಾಬ್ದಾರಿಯನ್ನು ವಹಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಯನ್ನು ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು ; ಯಾವ ಕಾಲಮಿತಿಯಲ್ಲಿ ಎಲ್ಲಾ ಪಂಚಾಯಿತಿಗಳಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ನೇಮಕ ಮಾಡಲಾಗುವುದು ?

## ಗ್ರಾಮೀಣ ಕುಡಿಯುವ ನೀರಿನ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೭ (೩೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿಯಲ್ಲಿನ ಅನುದಾನದ ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರದಿಂದ ಗ್ರಾಮೀಣ ಕುಡಿಯುವ ನೀರಿನ ಯೋಜನೆಯ ಅನುದಾನದಡಿಯಲ್ಲಿ ಯಾವ ಯಾವ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರದಿಂದ ಗ್ರಾಮೀಣ ಕುಡಿಯುವ ನೀರಿನ ಯೋಜನೆಯ ಅನುದಾನವನ್ನು ಸಮರ್ಪಕವಾಗಿ ಬಳಸಿ ಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರದಿಂದ ಬಂದಿರುವ ಗ್ರಾಮೀಣ ಕುಡಿಯುವ ನೀರಿನ ಯೋಜನೆಯ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗಿದೆಯೇ ; ಬಳಸಿಕೊಳ್ಳದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ರೀತಿ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರಗಳನ್ನು ನೀಡುವುದು)

## ಸಾರಿಗೆ ನಿಗಮದ ಕೆಲವು ಹುದ್ದೆಗಳನ್ನು ಆನ್‌ಲೈನ್ ಮೂಲಕ ಭರ್ತಿ ಮಾಡಲು ಬಂದಿರುವ ಅರ್ಜಿಗಳ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೮ (೩೩೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಕೆಲವು ಹುದ್ದೆಗಳನ್ನು ಆನ್‌ಲೈನ್ ಮೂಲಕ ತುಂಬಲು ಅರ್ಜಿಗಳನ್ನು ಆಹ್ವಾನಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ತುಂಬಲು ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಿಗಧಿಪಡಿಸಿದ್ದು ನಿಜವೇ ;

(ಇ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿತ್ತು ; (ವಿವರಗಳನ್ನು ನೀಡುವುದು)

(ಈ) ಸಾರಿಗೆ ನಿಗಮವು ನಿಗಧಿಪಡಿಸಿದ್ದ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ದಿಢೀರ್ ರದ್ದುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ರೀತಿ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ದಿಢೀರ್ ರದ್ದುಗೊಳಿಸಿರುವುದರಿಂದ, ಅಭ್ಯರ್ಥಿಗಳಿಗೆ ತೊಂದರೆಯಾಗಿರುವುದು ನಿಜವೇ ;

(ಊ) ಈ ರೀತಿ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ದಿಢೀರ್ ರದ್ದುಗೊಳಿಸಲು ಕಾರಣಗಳೇನು ? (ವಿವರಗಳನ್ನು ನೀಡುವುದು)

## ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟದ ಕುಸಿತದ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೯ (೩೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗುಣಮಟ್ಟ ಕುಸಿತಕ್ಕೆ ಕಾರಣಗಳೇನು ;

(ಇ) ಶಿಕ್ಷಣದ ಗುಣಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇರುವ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೦ (೩೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೨೦೧೨ರಿಂದ ಇಲ್ಲಿಯವರೆಗೆ ಸರ್ಕಾರ ನೇಮಕ ಮಾಡಿದ ದೈಹಿಕ ಶಿಕ್ಷಕರ ಸಂಖ್ಯೆ ಎಷ್ಟು ; (ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರತ್ಯೇಕ ವಿವರ ನೀಡುವುದು)

(ಇ) ಉಳಿದ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮ ಸ್ವರಾಜ್ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೧ (೩೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಸ್ವರಾಜ್ ಯೋಜನೆಯ ಎರಡನೇ ಹಂತದ ಕಾಮಗಾರಿಗಳ ಅನುಷ್ಠಾನ ಪ್ರಾರಂಭವಾಗಿದೆಯೇ ; ಇಲ್ಲದಿದ್ದಲ್ಲಿ, ಪ್ರಾರಂಭಿಸಲಾಗುವುದು ಯಾವಾಗ ;

(ಆ) ಗ್ರಾಮ ಸ್ವರಾಜ್ ಯೋಜನೆಯ ಎರಡನೇ ಹಂತದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ಹೋಬಳಿ ಮಟ್ಟದಲ್ಲಿ ಗ್ರಾಮೀಣಾಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಸೃಜಿಸಲು ಸರ್ಕಾರ ತೀರ್ಮಾನಿಸಿದೆಯೇ ;

(ಇ) ತೀರ್ಮಾನಿಸಿದಲ್ಲಿ, ಈ ಹುದ್ದೆಗಳ ನೇಮಕಾತಿ ವಿಧಿ ವಿಧಾನಗಳೇನು? (ನೇರ ನೇಮಕಾತಿ ಅಥವಾ ಪದೋನ್ನತಿ)

## ಕಾಲ್ಪನಿಕ ವೇತನ ಮತ್ತು ಬಡ್ತಿ ನೀಡುವ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೪೨ (೩೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲೆಗಳಲ್ಲಿ ಶಿಕ್ಷಕರಿಗೆ ನೀಡುತ್ತಿರುವ ಕಾಲ್ಪನಿಕ ವೇತನ ಎಷ್ಟು ; ಈ ಅನುದಾನಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಕಾಲ್ಪನಿಕ ವೇತನವನ್ನು ನೀಡುತ್ತಿಲ್ಲವೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಶಿಕ್ಷಕರಿಗೆ ಕಾಲ್ಪನಿಕ ವೇತನ ಮತ್ತು ಬಡ್ತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಅತಿಥಿ ಉಪನ್ಯಾಸಕರನ್ನು ಖಾಯಂ ಗೊಳಿಸುವ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೪೩ (೩೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆಯನ್ನು ಒದಗಿಸಲು ಮತ್ತು ಈಗಿರುವ ಸಂಭಾವನೆಗಿಂತ ಹೆಚ್ಚಿನ ಸಂಭಾವನೆ ಕೊಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ವೇತನದ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೪೪ (೩೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾಂತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ನೇ ಸಾಲಿನಲ್ಲಿ ಗುತ್ತಿ ಬಸವೇಶ್ವರ ಮ್ಯಾನ್ ಪವರ್ ಏಜೆನ್ಸಿ, ತಾಳಿಕೋಟೆ, ಇದರ ಮುಖಾಂತರ ಬಾಗಲಕೋಟೆ ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ೨೩೨ ಜನ ಶಿಕ್ಷಕರನ್ನು ನೇಮಕ ಮಾಡಿಕೊಂಡಿದ್ದು, ಸದರಿ ಶಿಕ್ಷಕರಿಗೆ ಇಲ್ಲಿಯವರೆಗೂ ವೇತನ ನೀಡಿಲ್ಲವೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇಷ್ಟು ವಿಳಂಬವಾಗಲು ಕಾರಣಗಳೇನು; ಸದರಿ ಶಿಕ್ಷಕರ ವೇತನವನ್ನು ಯಾವಾಗ ನೀಡಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೬ ಜೂನ್‌ನಲ್ಲಿ ಅರೆಕಾಲಿಕ ಶಿಕ್ಷಕರನ್ನು ಹೊರಗುತ್ತಿಗೆ ಆಧಾರದ ಮೇಲೆ ಗುತ್ತಿ ಬಸವೇಶ್ವರ ಮ್ಯಾನ್ ಪವರ್ ಏಜೆನ್ಸಿ, ತಾಳಿಕೋಟೆ, ಇವರು ೨೩೨ ಜನ ಶಿಕ್ಷಕರನ್ನು ನೇಮಕ ಮಾಡಿಕೊಂಡಿದ್ದು, ಡಿಸೆಂಬರ್ ೨೦೧೬ರಲ್ಲಿ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿದೆ, ಇದರಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗದೆ ತೀವ್ರ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆಯನ್ನು ಪರಿಹರಿಸುವಲ್ಲಿ, ಸರ್ಕಾರವು ತೆಗೆದುಕೊಂಡ ನಿಲುವುಗಳೇನು ? (ವಿವರವಾದ ಮಾಹಿತಿ ನೀಡುವುದು)

## ಕುಡಚಿ–ಬಾಗಲಕೋಟೆ ರೈಲು ಮಾರ್ಗದ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೩೪೫ (೩೮೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಡಚಿ ಬಾಗಲಕೋಟೆ ರೈಲು ಮಾರ್ಗ ಕಾಮಗಾರಿ ಕುಂಠಿತಗೊಂಡಿದ್ದು, ಇದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿಳಂಬವಾಗಲು ಕಾರಣವೇನು;

(ಆ) ಈ ಕಾಮಗಾರಿಗೆ ಮಂಜೂರಾದ ಒಟ್ಟು ಅನುದಾನವೆಷ್ಟು;

(ಇ) ಈ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಪಠ್ಯ ಪುಸ್ತಕ ಪರಿಷ್ಕರಣಾ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೩೪೬ (೩೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಠ್ಯ ಪುಸ್ತಕ ಪರಿಷ್ಕರಣಾ ಸಮಿತಿಯನ್ನು ಯಾವಾಗ ರಚಿಸಲಾಗಿದೆ;

(ಆ) ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಯಾರು ಯಾರು; ಈ ಸಮಿತಿ ರಚಿಸಲು ಇರುವ ಮಾನದಂಡಗಳೇನು;

(ಇ) ಸದರಿ ಸಮತಿಯು ಈವರೆಗೂ ಎಷ್ಟು ಸಭೆಗಳನ್ನು ನಡೆಸಿದೆ, ಹಾಗೂ ಸದರಿ ಸಮಿತಿಯ ಸಭೆಗಳಿಗಾಗಿ ಎಷ್ಟು ಮೊತ್ತದ ಹಣವನ್ನು ವ್ಯಯಿಸಲಾಗಿದೆ;

(ಈ) ಸಮಿತಿ ನೀಡಿರುವ ಪಠ್ಯ ಪುಸ್ತಕ ಪರಿಷ್ಕರಣಾ ವರದಿಯನ್ನು ಯಾವ ಶೈಕ್ಷಣಿಕ ವರ್ಷದಿಂದ ಜಾರಿಗೊಳಿಸಲಾಗುವುದು;

(ಉ) ಸದರಿ ವರದಿಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಇದನ್ನು ವಿರೋಧಿಸಿ ಹೋರಾಟಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತರಾತುರಿಯಲ್ಲಿ ಜಾರಿಗೊಳಿಸುವ ಉದ್ದೇಶವೇನು? (ಸಮಿತಿ ನೀಡಿರುವ ವರದಿಯ (ವಿಷಯವಾರು) ಪ್ರತಿಯನ್ನು ನೀಡುವುದು)

## ಚಾಮರಾಜನಗರ ಬಸ್ ಡಿಪೋದಲ್ಲಿ ಸಿಟಿ ಬಸ್‌ಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೭ (೪೧೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಸ್ತೆ ಸಾರಿಗೆ ಸಂಸ್ಥೆಯ ಚಾಮರಾಜನಗರ ಬಸ್ ಡಿಪೋದಲ್ಲಿ ನಗರ ಸಂಚಾರಕ್ಕೆ ಒದಗಿಸಿರುವ ಬಸ್‌ಗಳ ಸಂಖ್ಯೆ ಎಷ್ಟು; ಯಾವ ಯಾವ ಮಾರ್ಗದಲ್ಲಿ ಅವು ಸಂಚರಿಸುತ್ತಿವೆ ;

(ಆ) ಜಿಲ್ಲಾ ಕೇಂದ್ರದಿಂದ ೩೦ ಕಿಮೀ ವ್ಯಾಪ್ತಿಯ ಗ್ರಾಮಗಳಿಗೆ ನಗರ/ ಗ್ರಾಮೀಣ ಸಾರಿಗೆ ಬಸ್ ಸೌಲಭ್ಯ ಒದಗಿಸಲು ಉದ್ದೇಶಿಸಲಾಗಿದೆಯೇ; ಈ ವರ್ಷ ಎಷ್ಟು ಸಿಟಿ ಬಸ್‌ಗಳನ್ನು ಚಾಮರಾಜನಗರ ಡಿಪೋಗೆ ನೀಡಲಾಗುವುದು ;

(ಇ) ಚಾಮರಾಜನಗರ ಬಸ್ ನಿಲ್ದಾಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಮಹಿಳಾ ವಿಶ್ರಾಂತಿ ಗೃಹ, ಅಂಗವಿಕಲರ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸಲಾಗುವುದು; ಮತ್ತು ಬಿಗ ಹಾಕಿರುವ ಅಂಗವಿಕಲರ ಶೌಚಾಲಯವನ್ನು ಉಪಯೋಗಕ್ಕೆ ತೆರೆದಿಡಲು ವ್ಯವಸ್ಥೆ ಮಾಡಲಾಗುವುದು ಯಾವಾಗ ?

# ಚಾಮರಾಜನಗರ ಜಿಲ್ಲೆ ಸರ್ಕಾರಿ ಶಾಲೆಗಳ ಕಟ್ಟಡ ದುರಸ್ಥಿ ಹಾಗೂ ಕಟ್ಟಡ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೮ (೪೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಪೂರ್ಣ ಶಿಥಿಲಾವಸ್ಥೆಯಲ್ಲಿರುವ ಅಲ್ಪ ಶಿಥಿಲಾವಸ್ಥೆಯಲ್ಲಿರುವ ಮತ್ತು ಹೊಸದಾಗಿ ನಿರ್ಮಿಸಬೇಕಾಗಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಪ್ರಸಕ್ತ ವರ್ಷದಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ ಎಷ್ಟು ಕೊಠಡಿಗಳ ದುರಸ್ಥಿ ಮತ್ತು ಎಷ್ಟು ಹೊಸ ಕೊಠಡಿಗಳ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗಿದೆ ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು ;

(ಇ) ಪಿರಿಯಾಪಟ್ಟಣ ತಾಲ್ಲೂಕು, ಮುಡಿಯೂರು ಸರ್ಕಾರಿ ಪ್ರಾಥಮಿಕ ಶಾಲೆಯ ಪರಿಸರವು ಅವ್ಯವಸ್ಥೆಗಳ ಆಗರವಾಗಿದ್ದು, ಕೊಳವೆ ಬಾವಿಯಲ್ಲಿ ಕಲುಷಿತ ನೀರು ಬರುತ್ತಿರುವುದು, ಶಾಲಾ ಶೌಚಾಲಯದ ಪಕ್ಕದಲ್ಲಿ ೪೦ ಅಡಿ ಆಳದ ಕಲುಷಿತ ನೀರು ತುಂಬಿದ ಹಾಳು ಬಾವಿ ಇರುವುದು, ಶಾಲೆಯ ಮೇಲೆ ಹೈಟೆನ್‌ಷನ್ ವೈರ್ ಅಪಾಯಕಾರಿ ಸ್ಥಿತಿಯಲ್ಲಿ ಹಾದು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಗಳ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು ?

## ಚಾಮರಾಜನಗರ ಕೊಳ್ಳೇಗಾಲಕ್ಕೆ ಬಸ್ ಸೌಲಭ್ಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೯ (೪೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದಿಂದ ಚನ್ನಪ್ಪನಪುರ ಮತ್ತು ಕೆಲ್ಲಂಬಳ್ಳಿಗೆ ಬಸ್ಸು ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಚಾಮರಾಜನಗರದಿಂದ ಕೊಳ್ಳೇಗಾಲಕ್ಕೆ ಮತ್ತು ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ ಸಂಜೆ ೪ ರಿಂದ ೮ ಘಂಟೆಯವರೆಗೆ ಬಸ್ಸು ಸೌಲಭ್ಯ ಕಡಿಮೆ ಇದ್ದು, ಈ ಬಸ್ಸು ಸೌಲಭ್ಯವನ್ನು ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಸಂತೇಮಾರಹಳ್ಳಿಯ ಬಳಿ ಎಲ್ಲಾ ಬಸ್ಸುಗಳನ್ನು ನಿಲುಗಡೆ ಮಾಡಲು ಹಾಗೂ ಈ ಬಗ್ಗೆ ಇಲ್ಲಿ ಒಂದು ಸೂಚನಾ ಫಲಕ ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಕಗ್ಗಳದ ಹುಂಡಿ ಬಳಿ ಚೆಂಡು ಹೂವಿನ ಕಾರ್ಖಾನೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೦ (೪೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುಂಡ್ಲುಪೇಟೆ ತಾಲ್ಲೂಕು, ಕೆಲಸೂರು ಗ್ರಾಮ ಪಂಚಾಯತಿಗೆ ಸೇರಿದ ಕಗ್ಗಳದ ಹುಂಡಿ ಬಳಿ ಚೆಂಡುಹೂವಿನ ಕಾರ್ಖಾನೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುಮೋದನೆ ನೀಡಿರುವುದನ್ನು

ವಿರೋಧಿಸಿ ರೈತರು ಧರಣಿ ನಡೆಸುತ್ತಿರುವುದು ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಎಷ್ಟು ಜನ ರೈತರನ್ನು ಬಂಧಿಸಲಾಗಿದೆ ;

(ಆ) ಈ ಕಾರ್ಖಾನೆಗೆ ಅನುಮೋದನೆ ನೀಡಲು ಗ್ರಾಮ ಸಭೆ ನಡೆಸಿ ಒಪ್ಪಿಗೆಯನ್ನು ಪಡೆಯಲಾಗಿದೆಯೇ ; ಗ್ರಾಮ ಸಭೆ ನಡೆದದ್ದು ಯಾವಾಗ ; ಎಷ್ಟು ಜನ ಹಾಜರಿದ್ದರು ; ಗ್ರಾಮ ಸಭೆ ನಡೆಸಿ ಅನುಮೋದನೆ ಪಡೆಯದೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅವರು ನಿರ್ಮಾಣ ಕಾಮಗಾರಿಗೆ ಲೈಸೆನ್ಸ್ ನೀಡಿರುತ್ತಾರೆಯೇ?

## ಅಂಬೇಡ್ಕರ್ ವಸತಿ ಯೋಜನೆಯಲ್ಲಿ ಚಾಮರಾಜನಗರ ವಸತಿ ಸೌಲಭ್ಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೧ (೪೨೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಅಂಬೇಡ್ಕರ್ ವಸತಿ ಯೋಜನೆ ಅಡಿಯಲ್ಲಿ ಚಾಮರಾಜನಗರ ನಗರಸಭೆಗೆ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು ;

(ಆ) ಈ ಮನೆಗಳನ್ನು ನಿರ್ಮಿಸಲು ಯಾವ ಸ್ಥಳದಲ್ಲಿ ಭೂಮಿಯನ್ನು ಗುರುತಿಸಲಾಗಿದೆ ; ಸದರಿ ಭೂಮಿಯನ್ನು ಸ್ವಾಧೀನಕ್ಕೆ ತೆಗೆದುಕೊಳ್ಳಲಾಗಿದೆಯೇ ;

(ಇ) ಸೋಮವಾರ ಪೇಟೆ ಬಳಿ ಹಂದಿ ಜೋಗಿ ಜನಾಂಗದವರಿಗೆ ೨೨ ನಿವೇಶನಗಳನ್ನು ಮೀಸಲಿರಿಸಲಾಗಿದೆ ಎಂದು ತಿಳಿದು ಬಂದಿದ್ದು, ಫಲಾನುಭವಿಗಳನ್ನು ಆಯ್ಕೆ ಮಾಡಿ, ಇವರಿಗೆ ವಸತಿ ನಿವೇಶನ ಹಂಚಿಕೆ ಮಾಡಲು ಕ್ರಮ ಜರುಗಿಸಲಾಗುವುದೇ ?

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ಮಂಜೂರಾದ ಕಟ್ಟಡದ ಪ್ರಗತಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೨ (೩೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿಯಲ್ಲಿ ಮಂಜೂರಾದ ಕಟ್ಟಡಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪ್ರಾರಂಭವಾಗದ ಮತ್ತು ಪೂರ್ಣವಾಗದ ಕಟ್ಟಡಗಳ ಸಂಖ್ಯೆ ಎಷ್ಟು ; ಈ ಕಟ್ಟಡಗಳಿಗೆ ಕಾಯ್ದಿರಿಸಿದ ಅನುದಾನ ಮತ್ತು ವೆಚ್ಚವಾದ ಮೊತ್ತವೆಷ್ಟು ; ಈ ಕಟ್ಟಡ ಪೂರ್ಣಗೊಳಿಸಲು ಇರುವ ಕಾಲಮಿತಿ ಎಷ್ಟು ; (ವರ್ಷವಾರು, ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಆ) ಈ ಮಂಜೂರಾದ ಕಟ್ಟಡಗಳಲ್ಲಿ ಶೌಚಾಲಯವು ಒಳಗೊಂಡಿರುವುದೇ ; ಇಲ್ಲವಾದಲ್ಲಿ, ಈ ಕಟ್ಟಡಗಳಿಗೆ ಶೌಚಾಲಯದ ಅಗತ್ಯವಿಲ್ಲವೆ ; ಈ ಬಗ್ಗೆ ಸರ್ಕಾರದ ಕ್ರಮವೇನು?

# ಉಡುಪಿ ಜಿಲ್ಲೆಯಲ್ಲಿ ಮರಳು, ಕೆಂಪು ಕಲ್ಲು ಗಣಿಗಾರಿಕೆಯ ತೊಂದರೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೩ (೩೨೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷದಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಕೆಂಪುಕಲ್ಲು, ಶಿಲೆಕಲ್ಲು ಮತ್ತು ಮರಳು ಗಣಿಗಾರಿಕೆಗೆ ಸಂಬಂಧಿಸಿದಂತೆ ಸಂಗ್ರಹಿಸಲಾದ ದಂಡವೆಷ್ಟು ; ಈ ಬಗ್ಗೆ ಕೋರ್ಟ್‌ನಲ್ಲಿರುವ ಪ್ರಕರಣಗಳೆಷ್ಟು ; ದಂಡ ವಿಧಿಸಲು ಇರುವ ಮಾರ್ಗಸೂಚಿ ಯಾವುದು ; (ಆದೇಶದ ಪ್ರತಿ ಒದಗಿಸುವುದು)

(ಆ) ಕಳೆದ ಮೂರು ವರ್ಷದಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪುಕಲ್ಲು ಮತ್ತು ಶಿಲೆಕಲ್ಲು ಗಣಿಗಾರಿಕೆಗೆ ಪರವಾನಗೆ ಮತ್ತು ನವೀಕರಣಕ್ಕೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ೩ ತಿಂಗಳಿಗಿಂತ ಹೆಚ್ಚು ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅನಾವಶ್ಯಕ ವಿಳಂಬವು, ಅಕ್ರಮಗಳಿಗೆ ಅವಕಾಶ ಮಾಡಿದಂತಾಗುವುದಿಲ್ಲವೇ ; ಅರ್ಜಿಗಳ ತ್ವರಿತ ವಿಲೇವಾರಿಗೆ ಸರ್ಕಾರದ ಕ್ರಮವೇನು ;

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಲೋಕೋಪಯೋಗಿ ಇಲಾಖೆಯಿಂದ ವಿತರಿಸಲಾದ ಮರಳಿನ ಪ್ರಮಾಣವೆಷ್ಟು ; (ತಿಂಗಳು, ತಾಲ್ಲೂಕುವಾರು ವಿವರ ನೀಡುವುದು)

(ಈ) ಮರಳಿನ ಅಭಾವದಿಂದ ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದರೆ, ಈ ಬಗ್ಗೆ ಕ್ರಮವೇನು ; ಮರಳಿನ ಕೊರತೆಯನ್ನು ಶಾಶ್ವತವಾಗಿ ನಿವಾರಿಸಲು ಸರ್ಕಾರದ ಕಾರ್ಯ ಯೋಜನೆಗಳೇನು?

## Karnataka Rural Industrial Development Limited ನಿಂದ ನಿರ್ವಹಿಸಿದ ಕಾಮಗಾರಿಗಳು ಮತ್ತು ಅವುಗಳ ಗುಣಮಟ್ಟದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೪ (೩೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ Karnataka Rural Industrial Development Limited (ಕರ್ನಾಟಕ ಗ್ರಾಮೀಣ ಕೈಗಾರಿಕಾ ಅಭಿವೃದ್ಧಿ ನಿಗಮ) ದಿಂದ ನಿರ್ಮಿಸಲಾದ ಮಿನಿ ವಿಧಾನಸೌಧ ಮತ್ತು ಇತರ ಕಾಮಗಾರಿಗಳ ಸಂಖ್ಯೆ ಎಷ್ಟು ; ಈ ಕಾಮಗಾರಿಗಳ ಅಂದಾಜು ವೆಚ್ಚವೆಷ್ಟು ; ಪಾವತಿಯಾದ ಮೊತ್ತವೆಷ್ಟು ; ಹೆಚ್ಚುವರಿ ಪಾವತಿಯನ್ನು ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಕಾಮಗಾರಿವಾರು, ವರ್ಷಾವಾರು ಮಾಹಿತಿ ನೀಡುವುದು)

(ಆ) ಕಾಮಗಾರಿಗಳ ಗುಣಮಟ್ಟದ ನಿಯಂತ್ರಣಕ್ಕೆ ಇಲಾಖೆಯು ವಿಶೇಷ ತಜ್ಞರ ಸಮಿತಿಯನ್ನು ಹೊಂದಿದೆಯೆ ; ಹೌದಾದಲ್ಲಿ, ಸಮಿತಿಯ ಹೆಸರೇನು ; ಸಮಿತಿಯ ಸದಸ್ಯರ ಹುದ್ದೆಗಳಾವುವು ; ಮತ್ತು ಈ ಸಮಿತಿಯಿಂದ ಪರಿಶೀಲನೆ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಕಳಪೆ ಗುಣಮಟ್ಟದ ಕಾಮಗಾರಿ ಎಂದು ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಬಗ್ಗೆ ತೆಗೆದುಕೊಂಡ ಕ್ರಮವೇನು? (ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

## ಸಾರ್ವಜನಿಕ ರಜೆ ಘೋಷಣೆ ಸಂದರ್ಭ ಕಾರ್ಯನಿರ್ವಹಿಸಿದ ಖಾಸಗಿ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೫ (೩೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ವಿಶೇಷ ತುರ್ತು ಸಂದರ್ಭದಲ್ಲಿ ಸರ್ಕಾರದಿಂದ ಶಿಕ್ಷಣ ಸಂಸ್ಥೆಗಳಿಗೆ ಎಷ್ಟು ಬಾರಿ ರಜೆ ಘೋಷಣೆ ಮಾಡಲಾಗಿದೆ ; (ಪ್ರಕರಣವಾರು ವಿವರ ನೀಡುವುದು) ಈ ರೀತಿ ರಜೆ ಘೋಷಣೆ ಮಾಡಿದರೂ ಸರ್ಕಾರದ ಆದೇಶವನ್ನು ಧಿಕ್ಕರಿಸಿ ಕಾರ್ಯನಿರ್ವಹಿಸಿದ ಖಾಸಗಿ ಶಿಕ್ಷಣ ಸಂಸ್ಥೆಗಳು ಯಾವುವು ; (ಪಟ್ಟಿ ಒದಗಿಸುವುದು)

(ಆ) ಮಾನ್ಯ ಸಚಿವರಾದ ಶ್ರೀ ಮಹಾದೇವ ಪ್ರಸಾದ್‌ರವರ ಅಕಾಲಿಕ ಮರಣ ನಿಮಿತ್ತ ಸರ್ಕಾರವು ರಜೆ ಘೋಷಿಸಿದ್ದರೂ ಅದನ್ನು ಕಾರ್ಯರೂಪಕ್ಕೆ ತಾರದೆ ಇರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮಾಹಿತಿಯು ಸರ್ಕಾರಕ್ಕೆ ಇದೆಯೇ ; ಹೌದಾದಲ್ಲಿ, ಅಂತಹ ಶಿಕ್ಷಣ ಸಂಸ್ಥೆಗಳು ಯಾವುವು ; ಮತ್ತು ಅವುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಭವಿಷ್ಯದಲ್ಲಿ ಸರ್ಕಾರದ ಆದೇಶವನ್ನು ಪಾಲಿಸುವಂತೆ ಮಾಡಲು ಇಲಾಖೆಯು ಕೈಗೊಂಡ ಕ್ರಮವೇನು ?

## ಗ್ರಾಮ ಪಂಚಾಯತಿಗಳಲ್ಲಿ ಸಾಮಾಜಿಕ ಪರಿಶೋಧನಾ ತಂಡದವರಿಂದ ಆಡಿಟ್ ಮಾಡಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೬ (೩೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿಗಳಲ್ಲಿ ಸಾಮಾಜಿಕ ಪರಿಶೋಧನೆ ಆಡಿಟ್ ಮಾಡುವ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಮತ್ತು ಪಿ.ಡಿ.ಓ.ಗಳಿಂದ ಲಂಚ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಲ್ಲಿ ಸಾಮಾಜಿಕ ಲೆಕ್ಕ ಪರಿಶೋಧಕರು ಆಡಿಟ್ ಮಾಡುವ ಅಧಿಕಾರಿಗಳ ವಿದ್ಯಾರ್ಹತೆ ಏನು ; ಚಿಕ್ಕಮಗಳೂರು ಜಿಲ್ಲೆಯ ಅಧಿಕಾರಿಗಳು ಯಾರು ; (ವಿವರ ನೀಡುವುದು) ಹಾಗೂ ಮಾನದಂಡವೇನು ; (ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿಯಲ್ಲಿ ಎಸ್.ಎಸ್.ಎಲ್.ಸಿ., ಪಿ.ಯು.ಸಿ.ಗಿಂತ ಕಡಿಮೆ ಶಿಕ್ಷಣ ಪಡೆದ ಅಧಿಕಾರಿಗಳು ಆಡಿಟ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸರ್ಕಾರ ಗ್ರಾಮ ಪಂಚಾಯಿತಿಗಳಲ್ಲಿ ಸಾಮಾಜಿಕ ಪರಿಶೋಧನ ತಂಡದವರಿಂದ ಆಡಿಟ್ ಮಾಡಿಸುವುದರ ಪ್ರಮುಖ ಉದ್ದೇಶವೇನು? (ವಿವರ ನೀಡುವುದು)

## ಸಣ್ಣ ಕೈಗಾರಿಕೆ ಇಲಾಖೆ ಯೋಜನೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೭ (೪೬೬) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡ ಯೋಜನೆಗಳು ಯಾವುವು ; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಣ್ಣ ಕೈಗಾರಿಕೆ ಇಲಾಖೆಯಲ್ಲಿ ಕೈಗೊಳ್ಳಲಾಗುತ್ತಿರುವ ಯೋಜನೆಗಳು ಯಾವ ಹಂತದಲ್ಲಿದೆ ; ಪೂರ್ಣಗೊಂಡ ಯೋಜನೆಗಳು ಯಾವುವು; (ವಿವರ ನೀಡುವುದು)

(ಇ) ಹೊಸದಾಗಿ ಸಣ್ಣ ಕೈಗಾರಿಕೆ ಸಂಸ್ಥೆ ಸ್ಥಾಪಿಸಲು ಇರುವ ಮಾನದಂಡಗಳೇನು ; ಯಾವ ಯಾವ ಯೋಜನೆಗಳಿಗೆ ಅಂದಾಜು ಎಷ್ಟು ಮೊತ್ತ ತಗಲುತ್ತದೆ ; ಸರ್ಕಾರದಿಂದ ಲಭಿಸುವ ಸಹಾಯಧನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಸಭೆ ಮತ್ತು ವಾರ್ಡ್ ಸಭೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೮ (೩೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ವರ್ಷಕ್ಕೆ ಎಷ್ಟು ಗ್ರಾಮ ಸಭೆ ಹಾಗೂ ವಾರ್ಡ್ ಸಭೆಗಳನ್ನು ನಡೆಸಲಾಗುತ್ತಿದೆ ; (ವಿವರ ನೀಡುವುದು)

(ಆ) ಗ್ರಾಮ ಸಭೆಗೆ ನೋಡಲ್ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಗೈರು ಹಾಜರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಇ) ಗ್ರಾಮ ಸಭೆಗಳಿಗೆ ಅಧಿಕಾರಿಗಳು ಗೈರುಹಾಜರಾಗುವುದರಿಂದ, ಗ್ರಾಮ ಸಭೆಗೆ ತೊಂದರೆಯಾಗುವುದಿಲ್ಲವೇ ;

(ಈ) ಮಹಿಳಾ ವಿಶೇಷ ಗ್ರಾಮ ಸಭೆ ನಡೆಸುವುದರಿಂದ, ಮಹಿಳೆಗೆ ಆಗುವ ಪ್ರಯೋಜನವೇನು ; (ವಿವರ ನೀಡುವುದು)

(ಉ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಧಿಕಾರಿಗಳು ಗೈರುಹಾಜರಾಗಿರುವ ಪ್ರಕರಣಗಳು ಎಷ್ಟು ಹಾಗೂ ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಊ) ಚಿಕ್ಕಮಗಳೂರು ಜಿಲ್ಲೆಯಲ್ಲಿ ನಡೆಸಲಾಗಿರುವ ಮಹಿಳಾ ವಿಶೇಷ ಗ್ರಾಮ ಸಭೆಗಳೆಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಯಂತ್ರ ಅಳವಡಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೯ (೩೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಯಂತ್ರ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಯಂತ್ರ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ ; (ವಿವರ ನೀಡುವುದು)

(ಇ) ಸ್ವೈಪಿಂಗ್ ಯಂತ್ರ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಯಾವುದಾದರೂ ಆದೇಶ ಹೊರಡಿಸಿದೆಯೇ ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯ ಕುವೆಂಪು ವಿಶ್ವವಿದ್ಯಾಲಯದ ಭೂಮಿಯು ಅರಣ್ಯ ಇಲಾಖೆ ಭೂಮಿಯಾಗಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೦ (೩೭೦ಎ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುವೆಂಪು ವಿಶ್ವವಿದ್ಯಾಲಯದ ವರ್ಷದ ಆದಾಯವೆಷ್ಟು ; ಪ್ರತಿ ವರ್ಷ ಎಷ್ಟು ಹಣ ವೆಚ್ಚ ಮಾಡಲಾಗುತ್ತಿದೆ ;

(ಆ) ದೂರ ಶಿಕ್ಷಣ ವಿಭಾಗಕ್ಕೆ ಅಧ್ಯಯನ ಕೇಂದ್ರಗಳಿಂದ ಬರಬೇಕಾಗಿರುವ ಬಾಕಿ ಹಣವೆಷ್ಟು ; ಬಾಕಿ ಉಳಿಯಲು ಕಾರಣ ಕರ್ತರಾಗಿರುವವರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಈ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ಶಿವಮೊಗ್ಗ, ಬಿ.ಹೆಚ್. ಬೈಪಾಸ್ ರಸ್ತೆಯ ಸಹ್ಯಾದ್ರಿ ಕಾಲೇಜು ಆವರಣದಲ್ಲಿ ಹೊರಾಂಗಣ–ಕ್ರೀಡಾಂಗಣ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಸರ್ಕಾರ ವಿಶೇಷ ಅನುದಾನ ಬಿಡುಗಡೆ ಮಾಡಲು ಕೈಗೊಂಡಿರುವ ಕ್ರಮಗಳೇನು?

## ಶಿವಮೊಗ್ಗ ಜಿಲ್ಲೆಯ ಕುವೆಂಪು ವಿಶ್ವವಿದ್ಯಾಲಯದ ಭೂಮಿಯು ಅರಣ್ಯ ಇಲಾಖೆ ಭೂಮಿಯಾಗಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೧ (೩೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಕುವೆಂಪು ವಿಶ್ವವಿದ್ಯಾನಿಲಯದ ಭೂಮಿಯು ಅರಣ್ಯ ಇಲಾಖೆಯ ಭೂಮಿಯಾಗಿದ್ದು, ಈ ಭೂಮಿಯನ್ನು ಕುವೆಂಪು ವಿಶ್ವವಿದ್ಯಾನಿಲಯದ ಹೆಸರಿಗೆ ನೋಂದಾಯಿಸಲು ಯಾವ ಕ್ರಮ ಕೈಗೊಂಡಿದೆ ;

(ಆ) ಈ ವಿಶ್ವವಿದ್ಯಾನಿಲಯದಲ್ಲಿರುವ ಬೋಧಕ ಮತ್ತು ಬೋಧಕೇತರ (ಟೀಚಿಂಗ್ ಮತ್ತು ನಾನ್ ಟೀಚಿಂಗ್) ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಆ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿರುವ ಸಂಖ್ಯೆ ಹಾಗೂ ಎಷ್ಟು ಹುದ್ದೆಗಳು ಇನ್ನು ಖಾಲಿ ಇವೆ ; ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಕಾರ್ಯ ನಿರ್ವಹಿಸುತ್ತಿದ್ದಾರೆ ;

(ಈ) ಕುವೆಂಪು ವಿಶ್ವವಿದ್ಯಾನಿಲಯುದಲ್ಲಿ ಕಾರ್ಯನಿರ್ವಹಿಸಲು ಹೊರಗುತ್ತಿಗೆ ಆಧಾರದ ಮೇರೆಗೆ ಯಾವ ಏಜೆನ್ಸಿಯ ಮೂಲಕ ನೇಮಕ ಮಾಡಿಕೊಳ್ಳಲಾಗಿದೆ ; ಪ್ರತಿ ತಿಂಗಳು ಹೊರ ಗುತ್ತಿಗೆ ಏಜೆನ್ಸಿಗೆ ಸಂದಾಯ ಮಾಡಲಾಗುತ್ತಿದೆಯೇ ; ಹಾಗೂ ಅವರ ಸೇವಾ ಶುಲ್ಕದ ಮೊತ್ತವೆಷ್ಟು ; ಹೊರಗುತ್ತಿಗೆ ಏಜೆನ್ಸಿಯನ್ನು ಹೊಸ ಟೆಂಡರ್ ಮೂಲಕ ಆಹ್ವಾನಿಸಲಾಗಿದೆಯೇ ;

(ಉ) ಇಲ್ಲದಿದ್ದಲ್ಲಿ, ಇಷ್ಟು ವರ್ಷ ಯಾವ ಕಾರಣಕ್ಕಾಗಿ ಏಜೆನ್ಸಿಯನ್ನು ಮುಂದುವರೆಸಿಕೊಂಡು ಬರಲಾಗಿದೆ ?

## ಕಲ್ಲುಗಣಿ ಮತ್ತು ಎಂ–ಸ್ಯಾಂಡ್ (M-Sand)ನ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೨ (೩೮೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಈವರೆಗೆ ಕಲ್ಲು ಗಣಿ ಮತ್ತು ಎಂ–ಸ್ಯಾಂಡ್ (M-Sand) ಗಾಗಿ ನೀಡಿರುವ ಲೀಸ್ ಗುತ್ತಿಗೆಗಳೆಷ್ಟು ; ಇವುಗಳಲ್ಲಿ ಎಷ್ಟು ಕಲ್ಲು ಗಣಿ ಮತ್ತು ಎಂ–ಸ್ಯಾಂಡ್ (M-Sand)ಗಳು ಕಾರ್ಯನಿರ್ವಹಿಸುತ್ತಿವೆ ; ಗುತ್ತಿಗೆ ನೀಡಿರುವ ಕಲ್ಲು ಗಣಿಯಿಂದ ಸರ್ಕಾರದ ವಾರ್ಷಿಕ ರಾಜಸ್ವ ಗಳಿಕೆ ಎಷ್ಟು; ಹಾಗೆಯೇ ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಪ್ರತಿ ಟನ್‌ಗೆ ವಿಧಿಸಿರುವ ರಾಯಧನ ಎಷ್ಟು ;

(ಆ) ತಮಿಳುನಾಡಿನಿಂದ ಪ್ರತಿ ನಿತ್ಯ ಬೆಂಗಳೂರು ನಗರ ಮತ್ತು ಜಿಲ್ಲೆಗೆ ಸುಮಾರು ೭೦೦–೮೦೦ ಲಾರಿಗಳಲ್ಲಿ ಜಲ್ಲಿ ಹಾಗೂ ಎಂ–ಸ್ಯಾಂಡ್ (M-Sand) ಬರುತ್ತಿರುವುದು ನಿಜವೇ; ಹಾಗಿದ್ದರೆ, ಎಷ್ಟು ಲಾರಿಗಳು ಜಲ್ಲಿ ಹಾಗೂ ಎಂ–ಸ್ಯಾಂಡ್(M-Sand) ಅನ್ನು ಹೊತ್ತು ತರುತ್ತಿವೆ. ತಮಿಳುನಾಡಿನಿಂದ ಬರುವ ಈ ಲಾರಿಗಳಿಗೆ ಸರ್ಕಾರ ವಿಧಿಸಿದ ರಾಯಧನ ಹಾಗೂ ಮಾರಾಟ ತೆರಿಗೆ ಎಷ್ಟು; ಇದರಿಂದ ಸರ್ಕಾರಕ್ಕೆ ಬರುತ್ತಿರುವ ಮಾಸಿಕ ಆದಾಯ ಎಷ್ಟು ; ಇಂತಹ ಲಾರಿಗಳನ್ನು ತಪಾಸಣೆ ಮಾಡಲಿಕ್ಕೆ ರಾಜ್ಯದ ಗಡಿ ಭಾಗದಲ್ಲಿ ಚೆಕ್‌ಪೋಸ್ಟ್‌ಗಳು (Check Post) ನಿರ್ಮಿಸಲಾಗಿದೆಯೇ ; ಹಾಗೂ ಪರ್ಮಿಟ್ ನೀಡಲಾಗುತ್ತಿದೆಯೇ;

(ಇ) ಈ ಎರಡು ಜಿಲ್ಲೆಗಳಲ್ಲಿ ಕಲ್ಲು ಗಣಿ ಎಂ–ಸ್ಯಾಂಡ್ (M-Sand) ಗುತ್ತಿಗೆ ಪಡೆದಿರುವ ಮಾಲೀಕರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು? (ಮಾಹಿತಿಯನ್ನು ನೀಡುವುದು)

# ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಕಂಪ್ಯೂಟರ್ ತರಬೇತಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೩ (೩೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಗರ ಭಾಗದ ಅಥವಾ ಗ್ರಾಮೀಣ ಭಾಗದ ಸರ್ಕಾರಿ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದಿಂದ ಅಥವಾ ಕೇಂದ್ರ ಸರ್ಕಾರದಿಂದ ಶಾಲೆಗಳಲ್ಲಿ ಉಚಿತ ಕಂಪ್ಯೂಟರ್ ತರಬೇತಿ ನೀಡುತ್ತಿರುವುದು ನಿಜವೇ ;

(ಆ) ಹಾಗಾದರೆ, ರಾಜ್ಯದಲ್ಲಿ ಇದುವರೆವಿಗೆ ಎಷ್ಟು ನಗರ ಗ್ರಾಮೀಣ ಭಾಗದ ಶಾಲೆಗಳ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಕಂಪ್ಯೂಟರ್ ತರಬೇತಿ ನೀಡಲಾಗಿದೆ ; ನೀಡುತ್ತಿರುವ ಉಚಿತ ಕಂಪ್ಯೂಟರ್ ತರಬೇತಿ ಯೋಜನೆಯ ಹೆಸರೇನು ; ಏಪ್ರಿಲ್ ೨೦೧೩ ರಿಂದ ೩೧ನೇ ಡಿಸೆಂಬರ್ ೨೦೧೬ರವರೆಗೆ ಎಷ್ಟು ; ವಿದ್ಯಾರ್ಥಿಗಳು ಈ ಯೋಜನೆಯಡಿಯಲ್ಲಿ ಉಚಿತ ಕಂಪ್ಯೂಟರ್ ತರಬೇತಿಯನ್ನು ಪಡೆದುಕೊಂಡಿರುತ್ತಾರೆ ; ಇದಕ್ಕೆ ಭರಿಸುತ್ತಿರುವ ವೆಚ್ಚವೆಷ್ಟು ; (ಜಿಲ್ಲಾವಾರು ಶಾಲೆಗಳ ಪೂರ್ಣ ವಿವರ ನೀಡುವುದು)

(ಇ) ಉಚಿತ ಕಂಪ್ಯೂಟರ್ ತರಬೇತಿ ಯೋಜನೆಯನ್ನು ಸರ್ಕಾರದಿಂದ ಖಾಸಗಿ ಸಂಸ್ಥೆಯವರಿಗೆ ಅಥವಾ ಖಾಸಗಿ ಕಂಪನಿಯವರಿಗೆ ತರಬೇತಿ ನೀಡಲು ಅನುಮತಿ ನೀಡುತ್ತಿದ್ದರೆ, ಅನುಸರಿಸಬೇಕಾದ ಮಾನದಂಡಗಳೇನು ; ಅನುಮತಿ ನೀಡುವ ಅಧಿಕಾರ ಯಾರಿಗೆ ನೀಡಲಾಗಿದೆ ; (ವಿವರ ನೀಡುವುದು)

(ಈ) ಈ ಸಂಬಂಧ ಇದುವರೆಗೆ ಈ ಯೋಜನೆಯಡಿಯಲ್ಲಿ ಎಷ್ಟು ಕಂಪ್ಯೂಟರ್‌ಗಳನ್ನು ಪ್ರತಿಯೊಂದು ಶಾಲೆಗಳಿಗೆ ನೀಡಲಾಗಿದೆ ; ಯಾವ ಸಂಸ್ಥೆ ಅಥವಾ ಕಂಪನಿಯಿಂದ ನೀಡಲಾಗಿದೆ ? (ಪೂರ್ಣ ವಿವರ ನೀಡುವುದು)

## ಚಿತ್ರದುರ್ಗ ಜಿಲ್ಲೆಯ ಗ್ರಾಮ ಪಂಚಾಯ್ತಿಗಳ ಗೌರವಧನದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೪ (೪೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯ್ತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರಿಗೆ ಮಾಸಿಕ ಗೌರವಧನ ನೀಡಲಾಗುತ್ತಿದೆಯೇ ;

(ಆ) ಕಳೆದ ಮೂರು ವರ್ಷಗಳಿಂದ ಗ್ರಾಮ ಪಂಚಾಯ್ತಿ ಸದಸ್ಯರು, ಅಧ್ಯಕ್ಷರು, ಉಪಾಧ್ಯಕ್ಷರಿಗೆ ಪಾವತಿಸಿದ ಗೌರಧನವೆಷ್ಟು ; (ಮಾಹಿತಿ ಒದಗಿಸುವುದು)

(ಇ) ಅನುದಾನ ನೀಡದಿದ್ದಲ್ಲಿ, ಬಾಕಿಯಿರುವ ಕುರಿತು ಗ್ರಾಮ ಪಂಚಾಯ್ತಿವಾರು ಮಾಹಿತಿ ಒದಗಿಸುವುದು ?

## ಚಿತ್ರದುರ್ಗ ತಾಲ್ಲೂಕಿನ ಗ್ರಾಮಪಂಚಾಯತಿಗಳಿಗೆ ಬಿಡುಗಡೆ ಮಾಡುವ ಅನುದಾನ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೫ (೪೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ತಾಲ್ಲೂಕಿನ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ವಿದ್ಯುತ್ ಶುಲ್ಕ ಪಾವತಿಸಲು ಬಳಸಲಾಗಿರುವ ಅನುದಾನ ಎಷ್ಟು ; ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು?

## ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ R.O ಪ್ಲಾಂಟ್‌ಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೬ (೩೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು : (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಆರ್.ಓ. ಪ್ಲಾಂಟ್‌ಗಳ ಅಳವಡಿಕೆಗೆ ವೆಚ್ಚವಾದ ಅನುದಾನ ಎಷ್ಟು? (ಮಾಹಿತಿ ಒದಗಿಸುವುದು)

## ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾನಿಲಯ ಕಾರ್ಯಾರಂಭ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೭ (೩೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿತವಾದಂತೆ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾನಿಲಯ ಕಾರ್ಯಾರಂಭ ಆಗಿದೆಯೇ;

(ಆ) ಆಗಿದ್ದಲ್ಲಿ, ಅದರ ಬಗ್ಗೆ ಮಾಹಿತಿ ಒದಗಿಸುವುದು; ಇಲ್ಲವಾದಲ್ಲಿ ಕಾರ್ಯಾರಂಭ ಯಾವಾಗ ಮಾಡಲಾಗುವುದು? (ಮಾಹಿತಿ ಒದಗಿಸುವುದು)

## ಶಾಲಾ ಕಾಲೇಜುಗಳ ಮತ್ತು ಫಲಿತಾಂಶದ ಮಾಹಿತಿ ನೀಡುವ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೩೬೮ (೩೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ರಾಜಾಜಿನಗರ, ಗಾಂಧಿನಗರ, ಶಿವಾಜಿನಗರ, ಶಾಂತಿನಗರ, ಸರ್ವಜ್ಞನಗರ, ಸಿ.ವಿ.ರಾಮನ್ ನಗರ, ಮಹದೇವಪುರ ಮತ್ತು ಚಾಮರಾಜಪೇಟೆ ವಿಧಾನ ಸಭಾ ಕ್ಷೇತ್ರಗಳಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳೆಷ್ಟು; (ಮಾಹಿತಿ ನೀಡುವುದು)

(ಆ) ೨೦೧೬-೨೦೧೭ರಲ್ಲಿ ಸದರಿ ಶಾಲಾ ಕಾಲೇಜುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ, ಕಟ್ಟಡಗಳ ಸಂಖ್ಯೆ, ಕೊಠಡಿಗಳ ಸಂಖ್ಯೆ; ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ವಿವರವನ್ನು ಒದಗಿಸುವುದು;

(ಇ) ಸದರಿ ಶಾಲೆ/ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳೆಷ್ಟು; ಕಳೆದ ಮೂರು ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ./ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ ಕುಳಿತ ಮತ್ತು ಪಾಸಾದ ವಿದ್ಯಾರ್ಥಿಗಳೆಷ್ಟು?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೯ (೩೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ನೇ ಸಾಲಿನಲ್ಲಿ ರಾಜ್ಯದಲ್ಲಿನ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಸರ್ಕಾರದ ಅನುದಾನಕ್ಕೆ ಒಳಪಡಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಅನುದಾನಕ್ಕೆ ಒಳಪಡಿಸಲು ನಿಗಧಿಪಡಿಸಿರುವ ಮಾನದಂಡಗಳೇನು;

(ಇ) ೨೦೧೬ನೇ ಸಾಲಿನಲ್ಲಿ ಒಟ್ಟು ಎಷ್ಟು ಶಿಕ್ಷಕರನ್ನು ಸರ್ಕಾರ ಅನುದಾನದ ವ್ಯಾಪ್ತಿಗೆ ಒಳಪಡಿಸಿದೆ. ಒಳಪಡಿಸದಿದ್ದಲ್ಲಿ, ಕಾರಣವೇನು? (ಶಾಲೆಗಳವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೦ (೩೯೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಆ) ಈ ಭಾಗದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸುವವರಿಗೆ ಸರ್ಕಾರ ಯಾವ ರೀತಿಯ ಉತ್ತೇಜನ ರಿಯಾಯಿತಿ ಮತ್ತು ವಿನಾಯಿತಿಗಳನ್ನು ನೀಡುತ್ತದೆ;

(ಇ) ಕಳೆದ ಮೂರು ವರ್ಷಗಳಲ್ಲಿ ನಡೆದ ವಿಶ್ವ ಬಂಡವಾಳ ಹೂಡಿಕೆ ಸಮಾವೇಶದಲ್ಲಿ ಭಾಗವಹಿಸಿದ್ದವರ ಪೈಕಿ ಎಷ್ಟು ಜನರು ಈ ಭಾಗದಲ್ಲಿ ವಿಶೇಷವಾಗಿ ಬೀದರ್ ಮತ್ತು ಕಲಬುರ್ಗಿಯಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಒಡಂಬಡಿಕೆ ಮಾಡಿಕೊಂಡಿದ್ದಾರೆ; ಇದರಿಂದ ಈ ಜಿಲ್ಲೆಗಳಲ್ಲಿ ಎಷ್ಟು ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತವೆ? (ಸಂಪೂರ್ಣ ವಿವರ ನೀಡುವುದು)

## ಚಾಲಕ/ನಿರ್ವಾಹಕರಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೧ (೩೯೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊನೆಯ ಟ್ರಿಪ್ ಮೂಲಕ ತಾಲ್ಲೂಕು/ಜಿಲ್ಲಾ ಕೇಂದ್ರಗಳಿಂದ ಗ್ರಾಮೀಣ ಪ್ರದೇಶಗಳ ರಾತ್ರಿ ವಾಸ್ತವ್ಯ ಹೂಡುವ ನಿರ್ವಾಹಕ/ ಚಾಲಕರು ವಾಸ್ತವ್ಯ ತೊಂದರೆ ಹಾಗೂ ಆರೋಗ್ಯದ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ನಿರ್ವಾಹಕರ ಹಾಗೂ ಚಾಲಕರಿಗೆ ಉತ್ತಮ ಊಟ ವಸತಿ ನೈರ್ಮಲ್ಯ ಶೌಚಾಲಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆಯೇ;

(ಇ) ಇಲ್ಲದಿದ್ದಲ್ಲಿ, ಮೇಲ್ಕಂಡ ಸೌಲಭ್ಯಗಳನ್ನು ಒದಗಿಸುವ ಉದ್ದೇಶಗಳು ಸರ್ಕಾರಕ್ಕಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ಅದಿರು ತೆಗೆಯಲು ಪರವಾನಗೆ ನೀಡುವ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೨ (೪೩೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾನೈಟ್ ಜಲ್ಲಿ ಕಲ್ಲು ಹಾಗೂ ಅದಿರನ್ನು ತೆಗೆಯಲು ಪರವಾನಗೆ ನೀಡಲಾಗಿದೆಯೇ; ನೀಡಿದ್ದರೆ ಯಾವ ಯಾವ ಜಿಲ್ಲೆಯಲ್ಲಿ ಪರವಾನಗೆ ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅದಿರು ತೆಗೆಯುವ ಪರವಾನಗೆ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗೆ ಮೀಸಲಾಗಿದೆಯೇ; ಇದ್ದರೆ, ವಿವರ ನೀಡುವುದು;

(ಇ) ಇಲ್ಲದಿದ್ದರೆ, ಮೀಸಲಾತಿಯನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ತಾಲ್ಲೂಕು ಮಟ್ಟದಲ್ಲಿ ವಸತಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೩ (೪೫೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜೀವ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ೨೦೧೩ರಿಂದ ೨೦೧೭ನೇ ಸಾಲಿನವರೆಗೆ ಗ್ರಾಮೀಣ ವಸತಿ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಸದರಿ ಅನುದಾನದಲ್ಲಿ ಖರ್ಚಾದ ಹಾಗೂ ವಿನಿಯೋಗಿಸದೆ ಉಳಿದ ಅನುದಾನವೆಷ್ಟು;

(ಆ) ಸದರಿ ಯೋಜನೆಗಳ ಮೇಲುಸ್ತುವಾರಿಗೆ ಹೊರಗುತ್ತಿಗೆ ಸಿಬ್ಬಂದಿಗಳನ್ನು ತಾಲ್ಲೂಕು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜಿಸಿರುವುದರಿಂದ, ಪರಿಣಾಮಕಾರಿಯಾಗಿ ಹಾಗೂ ಜವಾಬ್ದಾರಿಯುತವಾಗಿ ಯೋಜನೆಗಳು ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸದರಿ ಯೋಜನೆಗಳ ಸೂಕ್ತ ಹಾಗೂ ಪರಿಣಾಮಕಾರಿ ಮೇಲುಸ್ತುವಾರಿಗೆ ತಾಲ್ಲೂಕು ಮಟ್ಟದಲ್ಲಿ ಸಹಾಯಕ ನಿರ್ದೇಶಕರು(ವಸತಿ) ಹುದ್ದೆಯನ್ನು ಸೃಷ್ಟಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ಸರ್ಕಾರಿ ಶಾಲೆಗಳಿಗೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ೧:೩೦ ರ ಅನುಪಾತವನ್ನು ಪಾಲಿಸುತ್ತಿರುವಂತೆ ಅನುದಾನಿತ ಶಾಲೆಗಳಿಗೂ ೧:೩೦ರ ಅನುಪಾತವನ್ನು ಕಡ್ಡಾಯಗೊಳಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೭೪ (೪೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲೆಗಳಿಗೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ೧:೩೦ ಅನುಪಾತದ ನಿಯಮವಿರುವುದು ನಿಜವೇ;

(ಆ) ಸರ್ಕಾರದ ಅನುದಾನಿತ ಶಾಲೆಗಳಲ್ಲಿಯು ಇದೇ ರೀತಿಯ ಅನುಪಾತದ ನಿಯಮವಿದೆಯೇ; ಇದ್ದಲ್ಲಿ, ವಿವರ ನೀಡುವುದು;

(ಇ) ಅನುದಾನಿತ ಶಾಲೆಗಳಿಗೆ ೧:೪೦ ಅನುಪಾತದ ನಿಯಮವಿರುವುದು ನಿಜವೇ; ನಿಜವಾಗಿದ್ದಲ್ಲಿ, ಸರ್ಕಾರಿ ಶಾಲೆಗಳ ಮಕ್ಕಳಿಗೂ ಅನುದಾನಿತ ಶಾಲೆಗಳ ಮಕ್ಕಳಿಗೂ ಈ ರೀತಿಯ ತಾರತಮ್ಮ ಮಾಡಲು ಕಾರಣವೇನು;

(ಈ) Right to education Act ನಲ್ಲಿ ಈ ಸಂಬಂಧ ಯಾವ ರೀತಿಯ ನಿಯಮಗಳಿವೆ;

(ಉ) ಈ ಸಂಬಂಧ ಮಾನ್ಯ ಉಚ್ಚನ್ಯಾಯಾಲಯದಲ್ಲಿ Writ Petition No. 32598/32830/2011 (S-RES) ನ ತೀರ್ಪಿನ ಯಥಾವತ್ ವಿವರ ನೀಡುವುದು;

(ಊ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅನುದಾನಿತ ಶಾಲೆಗಳಿಗೂ ೧:೩೦ ಅನುಪಾತವನ್ನು ಆದೇಶಿಸಿ ಕಡ್ಡಾಯಗೊಳಿಸಲು ಸರ್ಕಾರ ಮುಂದಾಗುವುದೇ;

(ಋ) ಇಲ್ಲವಾದಲ್ಲಿ, ಕಾರಣವೇನು?

## ಸರ್ಕಾರಿ ಶಾಲೆಗಳಿಗೆ ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲು ಅನುಮತಿ ನೀಡಿದಂತೆ ಅನುದಾನಿತ ಶಾಲೆಗಳಿಗೂ ಅನುಮತಿ ನೀಡದೆ ತಾರತಮ್ಯ ಮಾಡಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೭೫ (೪೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಸರ್ಕಾರಿ ಶಾಲೆಗಳಿಗೆ ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲು ಅನುಮತಿ ನೀಡುತ್ತಿರುವುದು ನಿಜವೇ; ನಿಜವಾಗಿದ್ದಲ್ಲಿ, ಯಾವಾಗಿನಿಂದ ನೀಡಲಾಗುತ್ತಿದೆ;

(ಆ) ಈ ರೀತಿ ಅನುಮತಿ ನೀಡಲು ಕಾರಣವೇನು; ಈ ಕುರಿತು ನಿಯಮವಿದ್ದಲ್ಲಿ ವಿವರ ನೀಡುವುದು;

(ಇ) ಅದೇ ರೀತಿ ಖಾಸಗಿ ಅನುದಾನಿತ ಶಾಲೆಗಳಿಗೂ ಅನುಮತಿ ನೀಡಲು ಸಾಧ್ಯವಿಲ್ಲವೇ; ಬೆಂಗಳೂರು ನಗರ ಜಿಲ್ಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತ್ತು ರಾಮನಗರ ಜಿಲ್ಲೆಯಲ್ಲಿನ ಅನುದಾನಿತ ಶಾಲೆಗಳು ೬ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನಡೆಸಲು ಅನುಮತಿ ನೀಡುವಂತೆ ಕೇಳಿ ಅರ್ಜಿ ಸಲ್ಲಿಸಿವೆಯೇ; ಸಲ್ಲಿಸಿದ್ದಲ್ಲಿ, ಯಾವಾಗ; (ಶಾಲೆವಾರು ದಿನಾಂಕ ಸಹಿತ ವಿವರ ನೀಡುವುದು)

(ಈ) ಸದರಿ ಜಿಲ್ಲೆಗಳಲ್ಲಿ ಅರ್ಜಿ ಸಲ್ಲಿಸಿರುವ ಯಾವ ಯಾವ ಅನುದಾನಿತ ಶಾಲೆಗಳಿಗೆ ಅನುಮತಿ ನೀಡಲಾಗಿದೆ; ಯಾವ ಯಾವ ಅನುದಾನಿತ ಶಾಲೆಗಳಿಗೆ ಅನುಮತಿ ನೀಡಲಾಗಿಲ್ಲ; (ವಿವರ ನೀಡುವುದು)

(ಉ) ಅನುಮತಿ ನೀಡದಿರಲು ಕಾರಣವೇನು?

## ಸೊರಬ ತಾಲ್ಲೂಕಿನ ಬೆಟ್ಟ ಕೊರ್ಲಿ ಗುಡ್ಡೆಕೊಪ್ಪ ಗ್ರಾಮಗಳ ಮಧ್ಯೆ ಇರುವ ಗೌರಿಹಳ್ಳಕ್ಕೆ ಸೇತುವೆ ನಿರ್ಮಿಸಿದಲ್ಲಿ ೨೫ ಕಿ.ಮೀ. ಬದಲು ೨ ಕಿ.ಮೀ. ದೂರವಾಗುವುದರಿಂದ, ಸೇತುವೆ ನಿರ್ಮಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೭೬ (೪೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕಿನ ಅಕ್ಕಪಕ್ಕದ ಗ್ರಾಮಗಳಾದ, ಬೆಟ್ಟದ ಕೂರ್ಲಿ ಗ್ರಾಮದಿಂದ ಗುಡ್ಡೆಕೊಪ್ಪ ಗ್ರಾಮವನ್ನು ತಲುಪಲು ಸುಮಾರು ೨೫ ಕಿ.ಮೀ. ಬಳಸಿಕೊಂಡು ಪ್ರಯಾಣಿಸಬೇಕಾಗಿದ್ದು, ಈ ಗ್ರಾಮಗಳ ಮಧ್ಯೆ ಇರುವ ಗೌರಿಹಳ್ಳಕ್ಕೆ ಸೇತುವೆ ನಿರ್ಮಿಸಿದಲ್ಲಿ, ಕೇವಲ ೨ ಕಿ.ಮೀ. ಪ್ರಯಾಣವಾಗುತ್ತದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸಂಬಂಧ ಎರಡೂ ಗ್ರಾಮಗಳ ಮತ್ತು ಸುತ್ತಲಿನ ಹಲವು ಗ್ರಾಮಗಳ ಗ್ರಾಮಸ್ಥರು, ಹಲವು ದಶಕಗಳಿಂದ ಸದರಿ ಸೇತುವೆ ನಿರ್ಮಾಣಕ್ಕಾಗಿ ಬೇಡಿಕೆ ಮತ್ತು ಒತ್ತಾಯ ಮಾಡುತ್ತಿದ್ದು, ಈ ಸಂಬಂಧ ಸರ್ಕಾರದ ನಿಲುವೇನು;

(ಇ) ಈ ಬಾರಿಯ ಗ್ರಾಮೀಣಾಭಿವೃದ್ಧಿಯ ಕಾಮಗಾರಿಗಳಲ್ಲಿ ಸದರಿ ಸೇತುವೆ ನಿರ್ಮಾಣವನ್ನು ಪ್ರಮುಖವಾಗಿ ಪರಿಗಣಿಸಲು ಸಾಧ್ಯವೇ?

## ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಪ್ರೌಢಶಾಲಾ ಶಿಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸಲು ನೀಡಿರುವ ವಿಶೇಷ ವೇತನ ಬಡ್ತಿಯನ್ನು ಕೆಲವು ವಿಭಾಗಗಳ ಶಿಕ್ಷಕರುಗಳಿಗೆ ಇದುವರೆಗೂ ನೀಡಿಲ್ಲದಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೭೭ (೪೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಪ್ರೌಢಶಾಲಾ ಶಿಕ್ಷಕರ ವೇತನ ಶ್ರೇಣಿಯ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಹುದ್ದೆಗಳು ಯಾವುವು; (ವಿವರ ನೀಡುವುದು)

(ಆ) ಶ್ರೀ ಕುಮಾರ್ ನಾಯಕ್ ರವರ ವರದಿಯಲ್ಲಿ ಪ್ರೌಢಶಾಲಾ ಶಿಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸಲು ನೀಡಿರುವ ವಿಶೇಷ ವೇತನ ಬಡ್ತಿಯ ವಿವರಗಳೇನು; (ಶ್ರೇಣಿಗೆ ಸಂಬಂಧಿಸಿದಂತೆ, ಸಂಕ್ಷಿಪ್ತ ವಿವರ ನೀಡುವುದು)

(ಇ) ಪ್ರೌಢಶಾಲಾ ಶಿಕ್ಷಕರ ಶ್ರೇಣಿಯಲ್ಲಿ ಬರುವ ಎಲ್ಲರಿಗೂ ವಿಶೇಷ ವೇತನ ಬಡ್ತಿ ನೀಡಬೇಕೆಂದು ವರದಿಯಲ್ಲಿ ಇರುವುದು ನಿಜವೇ;

(ಈ) ಪ್ರಸ್ತುತ ಯಾವ ಯಾವ ವಿಭಾಗದ ಶಿಕ್ಷಕರುಗಳಿಗೆ ವಿಶೇಷ ವೇತನ ಬಡ್ತಿಯನ್ನು ನೀಡಲಾಗಿರುತ್ತದೆ;

(ಉ) ಈ ಸಂಬಂಧ ಹೊರಡಿಸಲಾಗಿರುವ ಸರ್ಕಾರಿ ಆದೇಶಗಳು ಯಾವುವು; (ವಿವರ ನೀಡುವುದು) ಪ್ರೌಢಶಾಲಾ ಶಿಕ್ಷಕರ ಶ್ರೇಣಿಯಲ್ಲಿ ಬರುವ ಯಾವ ಯಾವ ವಿಭಾಗದ ಶಿಕ್ಷಕರುಗಳಿಗೆ ವಿಶೇಷ ವೇತನ ಬಡ್ತಿಯನ್ನು ನೀಡಲಾಗಿರುವುದಿಲ್ಲ; ಕಾರಣವೇನು?

## ೬೩ನೇ ಪ್ಲಾನ್ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನುದಾನಿತ ಶಾಲೆಗಳ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ಜೂನ್ ೨೦೧೬ ರಿಂದ ಸಮರ್ಪಕವಾಗಿ ವೇತನ ಬಿಡುಗಡೆ ಆಗದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೭೮ (೪೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೬೩ನೇ ಪ್ಲಾನ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನಿತ ಶಾಲೆಗಳ ಪ್ರಾಥಮಿಕ ಶಾಲಾ ಶಿಕ್ಷಕರುಗಳ ಸಂಖ್ಯೆ ಎಷ್ಟು;

(ಆ) ಸದರಿ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ಜೂನ್ ೨೦೧೬ ರಿಂದ ಸಮರ್ಪಕವಾಗಿ ವೇತನವನ್ನು ನೀಡಿಲ್ಲವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ವೇತನ ವಿಳಂಬಕ್ಕೆ ಕಾರಣವೇನು? (ಸಂಕ್ಷಿಪ್ತ ವಿವರ ನೀಡುವುದು)

## ಅಕ್ರಮ ಕಳಪೆ ಮರಳು ಗಣಿಗಾರಿಕೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೫ (೪೬೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಕ್ರಮ ಕಳಪೆ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು; ಹಾಗೂ ದಾಖಲಾದ ಒಟ್ಟು ಪ್ರಕರಣಗಳು ಎಷ್ಟು; (ವಿವರಣೆ ನೀಡುವುದು)

(ಆ) ಜನಸಾಮಾನ್ಯರಿಗೆ ಹಾಗೂ ಸರ್ಕಾರದ ವಿವಿಧ ಕಾಮಗಾರಿಗಳಿಗೆ ಮತ್ತು ಇನ್ನಿತರೆ ಕಾಮಗಾರಿಗಳಿಗೆ ಈ ಜಿಲ್ಲೆಗಳಲ್ಲಿ ಉತ್ತಮ ಗುಣಮಟ್ಟದ ಮರಳು ಸರಬರಾಜಿಗೆ ಕೈಗೊಂಡಿರುವ ಕ್ರಮಗಳೇನು? (ವಿವರಣೆಯನ್ನು ನೀಡುವುದು)

## ೧೯೯೫ರ ನಂತರದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೦ (೪೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈಗಾಗಲೇ ೧೯೯೫ರ ವರೆಗಿನ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕಾರ್ಯವು ಚಾಲ್ತಿಯಲ್ಲಿದ್ದು ಈವರೆಗೂ ಎಷ್ಟು ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ; ಬಾಕಿ ಇರವ ಶಾಲಾ ಕಾಲೇಜುಗಳ ವಿವರಗಳನ್ನು ನೀಡುವುದು;

(ಆ) ೧೯೯೫ರ ನಂತರದಿಂದ ೨೦೧೭ರವರೆಗೆ ಆರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು; ಇದರಿಂದ ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು;

(ಇ) ಎಷ್ಟು ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸಬಹುದು?

## ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿನ ಹುದ್ದೆಗಳ ಭರ್ತಿ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೧ (೪೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳ ಭರ್ತಿಗೆ ಈ ಹಿಂದೆ ಸರ್ಕಾರ ಯಾವಾಗ ಅನುಮತಿಸಿತ್ತು; ಈ ಖಾಲಿ ಹುದ್ದೆಗಳ ಭರ್ತಿ ಮಾಡದೆ ಸ್ವಂತ ಖರ್ಚಿನಿಂದ ತಾತ್ಕಾಲಿಕ ಬೋಧಕರನ್ನು ಭರ್ತಿ ಮಾಡಿಕೊಳ್ಳಲು ಆಗದೆ ಆಡಳಿತ ಮಂಡಳಿಗಳು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಖಾಲಿ ಇರುವ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಯಾವ ಕಾಲಮಿತಿಯೊಳಗೆ ಅನುಮತಿಸಲಾಗುವುದು?

## ಹಾವೇರಿ ಜಿಲ್ಲೆಯಲ್ಲಿ ಕಲ್ಲು ಕ್ವಾರಿಗಳನ್ನು ನಡೆಸಲು ಅನುಮತಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೨ (೪೦೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಕಲ್ಲು ಕ್ವಾರಿ ನಡೆಸಲು ಅನುಮತಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಕ್ವಾರಿ ನಡೆಸಲು ಅನುಮತಿ ನೀಡುವ ಎನ್‌ಕಮರೆನ್ಸ್ ಸರ್ಟಿಫಿಕೇಟ್ (ಇ.ಸಿ) ನೀಡುವ ಅಧಿಕಾರವನ್ನು ಸರ್ಕಾರ ಯಾರಿಗೆ ನೀಡಿದೆ ;

(ಇ) ಎನ್‌ಕಮರೆನ್ಸ್ ಸರ್ಟಿಫಿಕೇಟ್ (ಇ.ಸಿ) ಪಡೆದ ಕ್ವಾರಿ ಮಾಲೀಕರು/ ಗುತ್ತಿಗೆದಾರರು ಅವಧಿ ಮುಗಿದ ನಂತರ ಪಡೆಯಬೇಕಾದ (ಎನ್.ಓ.ಸಿ.) ನಿರಾಪೇಕ್ಷಣಾ ಪತ್ರ ಪಡೆಯಲು ಬಹಳಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೀಡಲಾದ ಪರಿಹಾರವೇನು;

(ಈ) ಕ್ವಾರಿ ಪಡೆದಾಗಿನಿಂದ ಮಾಡುತ್ತಿರುವ ಗುತ್ತಿಗೆದಾರರು ಗುತ್ತಿಗೆ ಅವಧಿ ಮುಗಿದ ನಂತರ ನವೀಕರಣ ಮಾಡಲು ಸರ್ಕಾರ ಜನರಿಗೆ ಸಹಾಯವಾಗುವಂತಹ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆಯೇ?

## ರಾಜ್ಯದಲ್ಲಿ ಮರಳುಗಾರಿಕೆ ನೀತಿಗಳನ್ನು ರೂಪಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೩ (೪೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮರಳು ನೀತಿಗಳನ್ನು ರೂಪಿಸಲಾಗಿದೆಯೇ; ಪ್ರಸ್ತುತ ಮರಳು ಗಣಿಗಾರಿಕೆಗೆ ಯಾವ ಮಾನದಂಡ ಅನುಸರಿಸಿ ಪರವಾನಿಗೆ ನೀಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಮರಳುಗಾರಿಕೆಗೆ ಪರವಾನಿಗೆ ನೀಡಲಾಗಿದೆ; ಇದರ ಮಾನದಂಡಗಳೇನು; (ಹಾವೇರಿ ಜಿಲ್ಲೆಗೆ ಸಂಬಂಧಪಟ್ಟಂತೆ ಪರವಾನಿಗೆ ಪಡೆದವರ ಹೆಸರು ಸಹಿತ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೃತಕ ಉತ್ಪಾದಿತ ಮರಳಿನ (ಎಂ.ಸ್ಯಾಂಡ್) ಬಗ್ಗೆ ಸರ್ಕಾರದ ನೀತಿ ಏನು; ಇದನ್ನು ಪ್ರೋತ್ಸಾಹಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು;

(ಈ) ಹಾವೇರಿ ಜಿಲ್ಲೆಯಲ್ಲಿ ಕೃತಕ ಉತ್ಪಾದಿತ ಮರಳು (ಎಂ.ಸ್ಯಾಂಡ್) ಘಟಕಗಳು ಎಷ್ಟೆಷ್ಟು; ಯಾವ ಯಾವ ಸ್ಥಳಗಳಲ್ಲಿ ಕಾರ್ಯಾಚರಣೆಯಲ್ಲಿವೆ? (ವಿವರ ನೀಡುವುದು)

## ಆರ್.ಟಿ. ಓ. ಚೆಕ್‌ಪೋಸ್ಟ್‌ಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) : –**

೩೮೪ (೪೫೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಿಂದ ಬೇರೆ ರಾಜ್ಯಕ್ಕೆ ವಾಹನಗಳು ಹೋಗಬೇಕಾದಲ್ಲಿ ಪರವಾನಗಿ ಶುಲ್ಕ ಎಷ್ಟು ಪಾವತಿಸಬೇಕು ; (ಮಾಹಿತಿ ನೀಡುವುದು)

(ಆ) ಬೇರೆ ರಾಜ್ಯದಿಂದ ನಮ್ಮ ರಾಜ್ಯಕ್ಕೆ ಬರುವ ವಾಹನಗಳಿಗೆ ಎಷ್ಟು ಪರವಾನಗಿ ಶುಲ್ಕ ಪಾವತಿಸಬೇಕಾಗಿದೆ ; ಯಾವ ರೀತಿಯ ವಾಹನಗಳಿಗೆ ಶುಲ್ಕ ನೀಡಬೇಕಾಗಿರುತ್ತದೆ ; ಈ ಶುಲ್ಕದ ಉದ್ದೇಶವೇನು ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಲ್ಲೆಲ್ಲಿ ಸಾರಿಗೆ ಇಲಾಖೆಯ ಚೆಕ್ ಪೋಸ್ಟ್‌ಗಳು ಇವೆ; ಇಲ್ಲಿರುವ ಸಿಬ್ಬಂದಿಗಳೆಷ್ಟು ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಟಾಟಾ ಮಾರ್ಕೊಪೋಲೊ ಬಸ್‌ಗಳನ್ನು ಖರೀದಿಸುತ್ತಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) : –**

೩೮೫ (೪೫೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿರುವ ಒಟ್ಟು ಬಸ್‌ಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವರ್ಗವಾರು ಪೂರ್ಣ ವಿವರ ನೀಡುವುದು)

(ಆ) ಇದರಲ್ಲಿ ಟಾಟಾ ಮಾರ್ಕೊಪೋಲೊ ಬಸ್‌ಗಳ ಸಂಖ್ಯೆ ಎಷ್ಟು ; ಇವುಗಳನ್ನು ಸಂಚಾರಕ್ಕೆ ಬಳಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಈ ಟಾಟಾ ಮಾರ್ಕೊಪೋಲೊ ಬಸ್‌ಗಳ ದಕ್ಷತೆಯ ವಿವರ ನೀಡುವುದು ; ಇವುಗಳಿಂದ ನಷ್ಟ ಉಂಟಾಗುತ್ತಿದ್ದರೂ ಪುನಃ ಬಸ್ಸುಗಳನ್ನು ಖರೀದಿಸಲು ಆಸಕ್ತಿ ತೋರಿಸಲು ಕಾರಣ ಏನು? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕುಡಿಯುವ ನೀರಿನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) : –**

೩೮೬(೪೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ ರಿಂದ ೨೦೧೬ನೇ ಸಾಲಿನಲ್ಲಿ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕುಡಿಯುವ ನೀರು ಮತ್ತು ಬಹುಗ್ರಾಮ ಕುಡಿಯುವ ನೀರು ಯೋಜನೆಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ; ಈ ಯೋಜನೆ ಯಶಸ್ವಿಗಾಗಿ ಕೇಂದ್ರ ಸರ್ಕಾರ, ರಾಜ್ಯಕ್ಕೆ ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ಬಯಲು ಶೌಚ ಮುಕ್ತ ಯೋಜನೆಗಾಗಿ ರಾಜ್ಯಾದ್ಯಂತ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; ಇದಕ್ಕಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ನೇಮಕಾತಿ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) : –**

೩೮೭ (೪೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಅನುದಾನಿತ ನೌಕರರ ಮತ್ತು ಆಡಳಿತ ಮಂಡಳಿಗಳ ಸಂಘಟನೆಗಳ ವತಿಯಿಂದ ನಿವೃತ್ತಿ ನಿಧನ ಹಾಗೂ ರಾಜೀನಾಮೆಯಿಂದ ಖಾಲಿ ಆದ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವಂತೆ ಇಲಾಖೆಗೆ ಬೇಡಿಕೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿಂದೆ ಸರ್ಕಾರ ೦೧-೦೧-೨೦೦೯ ರಿಂದ ೩೧-೧೨-೨೦೧೨ ರ ಅಂತ್ಯಕ್ಕೆ ಖಾಲಿ ಇದ್ದ ಒಟ್ಟು ೧೩೩೪ ಹುದ್ದೆಗಳನ್ನು ಜೇಷ್ಠತೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದ್ದು, ಈ ಎಲ್ಲಾ ಹುದ್ದೆಗಳನ್ನು ವಿವಿಧ ಆಡಳಿತ ಮಂಡಳಿಯವರು ಭರ್ತಿ ಮಾಡಿಕೊಂಡಿದ್ದಾರೆಯೇ ; (ವಿವರಣೆ ನೀಡುವುದು)

(ಇ) ಪದವಿ ಪೂರ್ವ ಮಹಾವಿದ್ಯಾಲಯಗಳಲ್ಲಿ ೦೧-೦೭-೨೦೧೦ ರಿಂದ ೦೧-೦೪-೨೦೧೩ ರವರೆಗೆ ಖಾಲಿ ಇದ್ದ ೪೮೦ ಉಪನ್ಯಾಸಕರ ಹುದ್ದೆಗಳನ್ನು ಆಡಳಿತ ಮಂಡಳಿಯವರು ಭರ್ತಿ ಮಾಡಿದ್ದಾರೆಯೇ ;

(ಈ) ಖಾಸಗಿ ಅನುದಾನಿತ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಈಗಾಗಲೇ ತುಂಬಿಕೊಳ್ಳಲು ಅನುಮತಿಸಿದ ಹುದ್ದೆಗಳನ್ನು ಆಡಳಿತ ಮಂಡಳಿಯವರು ಭರ್ತಿ ಮಾಡದಿದ್ದರೆ, ಅಂತಹ ಹುದ್ದೆಗಳನ್ನು ಭರ್ತಿ ಮಾಡಲು ಈ ಹಿಂದೆ ನಿಗಧಿಪಡಿಸಿದ ದಿನಾಂಕಗಳನ್ನು (ಪ್ರೌಢ ೩೧-೧೨-೨೦೧೨ ಹಾಗೂ ಪದವಿ ಪೂರ್ವ ೦೧-೦೪-೨೦೧೩) ವಿಸ್ತರಿಸಲು ಇರುವ ಅಡೆತಡೆಗಳೇನು? (ವಿವರಣೆ ನೀಡುವುದು)

## ಪದವಿ ಕಾಲೇಜುಗಳಲ್ಲಿ ಬೋಧಕ ಹುದ್ದೆಗಳ ಭರ್ತಿಗೆ ಅಧಿಸೂಚನೆ ಕುರಿತು

**ಶ್ರೀಮತಿ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು) : –**

೩೮೮(೪೭೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಕಾಲೇಜುಗಳ ಬೋಧಕ ಸಿಬ್ಬಂದಿ ನೇಮಕಕ್ಕೆ ಸರ್ಕಾರ ಈ ಹಿಂದೆ ಅಧಿಸೂಚನೆ ಹೊರಡಿಸಿದ್ದು ಯಾವಾಗ ;

(ಆ) ಕಾಲಾನುಕ್ರಮ (Chronologically) ಪ್ರಕಾರ ಈ ಪ್ರಕ್ರಿಯೆಯು ನಡೆದುಕೊಂಡು ಬಂದ ಬಗ್ಗೆ ವಿವರಣೆ ನೀಡುವುದು ;

(ಇ) ಈ ಬೋಧಕರಿಗೆ ಯಾವಾಗ ನೇಮಕಾತಿ ಆದೇಶ ನೀಡಲಾಗುವುದು ಅಥವಾ ಇವರ ನೇಮಕಾತಿಯ ಪ್ರಕ್ರಿಯೆಯನ್ನು ಕೈಬಿಡಲಾಗಿದೆಯೇ?

## ಪದವಿ ಪೂರ್ವ ವಿಜ್ಞಾನ ವಿಭಾಗವನ್ನು ಕನ್ನಡ ಮಾಧ್ಯಮದಲ್ಲಿ ಜಾರಿಗೆ ತರುವ ಬಗ್ಗೆ

**ಶ್ರೀಮತಿ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು) :–**

೩೮೯ (೪೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪದವಿ ಪೂರ್ವ ಶಿಕ್ಷಣವನ್ನು ವಿಜ್ಞಾನ ವಿಭಾಗದಲ್ಲಿ ಕನ್ನಡ ಮಾಧ್ಯಮದಲ್ಲಿ ಜಾರಿಗೊಳಿಸುವ ಕಾರ್ಯ ಆರಂಭಗೊಂಡಿದೆಯೇ ; ಹಾಗಿದ್ದಲ್ಲಿ, ಯಾವಾಗಿನಿಂದ ಪ್ರಾರಂಭಗೊಂಡಿದೆ ; ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ಹಂತದಲ್ಲಿ ಪಿ.ಯು. ವಿಜ್ಞಾನ ವಿಭಾಗವನ್ನು ಕನ್ನಡ ಮಾಧ್ಯಮದಲ್ಲಿ ಜಾರಿಗೊಳಿಸಲಾಗುವುದೇ ; ಪಿ.ಯು. ವಿಜ್ಞಾನ ವಿಭಾಗದ ಪರೀಕ್ಷೆಗಳನ್ನು ಹಾಗೂ ಸಿ.ಇ.ಟಿ. ಪರೀಕ್ಷೆಗಳನ್ನು ಕನ್ನಡ ಮಾಧ್ಯಮದಲ್ಲಿ ನಡೆಸಲು ಸರ್ಕಾರದ ಕ್ರಮಗಳೇನು ?

## ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳ ಭರ್ತಿ ಕುರಿತು

**ಶ್ರೀಮತಿ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು) :–**

೩೯೦ (೪೭೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳ ಭರ್ತಿಗೆ ಈ ಹಿಂದೆ ಸರ್ಕಾರ ಅನುಮತಿ ನೀಡಲಾಗಿದ್ದು ಯಾವಾಗ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ ಸ್ವಂತ ಖರ್ಚಿನಿಂದ ತಾತ್ಕಾಲಿಕ ಬೋಧಕರನ್ನು ಭರ್ತಿ ಮಾಡಿಕೊಳ್ಳಲು ಆಗದೆ ಆಡಳಿತ ಮಂಡಳಿಗಳು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಕಾಲಮಿತಿಯೊಳಗೆ ಈ ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಅನುಮತಿಸುವುದು ?

## ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಡಿಪೋಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೯೧ (೪೬೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಎಷ್ಟು ವಿಭಾಗಗಳಿವೆ ; ಅವು ಯಾವುವು ;

(ಆ) ಆ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಸ್ ಡಿಪೋಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ವಿಭಾಗವಾರು ಮಾಹಿತಿ ನೀಡುವುದು)

(ಇ) ಆ ಬಸ್ ಡಿಪೋಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರ ಸಂಖ್ಯೆ ಎಷ್ಟು ; (ಡಿಪೋವಾರು, ವೃಂದವಾರು ಮಾಹಿತಿ ನೀಡುವುದು)

(ಈ) ಈ ಮಹಿಳಾ ಕಾರ್ಮಿಕರಿಗೆ ಎಲ್ಲಾ ಡಿಪೋಗಳಲ್ಲಿ ಪ್ರತ್ಯೇಕವಾಗಿ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಉ) ಮೇಲ್ಕಂಡ ಎಲ್ಲಾ ವಿಭಾಗಗಳಲ್ಲಿ ಮಹಿಳಾ ಕಾರ್ಮಿಕರಿಗೆ ಸಮಸ್ಯೆಗಳನ್ನು ಆಲಿಸಲು ದೂರು ಸಮಿತಿ ಮತ್ತು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು; ಯಾವಾಗ ರಚಿಸಲಾಗುವುದು ? (ಮಾಹಿತಿ ನೀಡುವುದು)

## ಮಾತೃ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೯೨ (೩೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ರೀತ್ಯಾ, ಮಕ್ಕಳಿಗೆ ಪ್ರಾಥಮಿಕ ಶಿಕ್ಷಣವನ್ನು ಯಾವ ಭಾಷೆಯಲ್ಲಿ ಬೋಧಿಸಬೇಕಾಗುತ್ತದೆ ;

(ಆ) ರಾಜ್ಯದ ಪ್ರಸಕ್ತ ಎಷ್ಟು ಮಕ್ಕಳು ಮಾತೃ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣವನ್ನು ಪಡೆಯುತ್ತಿದ್ದಾರೆ ;

(ಇ) ರಾಜ್ಯದಲ್ಲಿ ಎಷ್ಟು ಮಕ್ಕಳು ಮಾತೃ ಭಾಷೆಯಲ್ಲದ ಆಂಗ್ಲ, ಹಿಂದಿ ಇನ್ನಿತರ ಭಾಷೆಗಳಲ್ಲಿ ಪ್ರಾಥಮಿಕ ಶಿಕ್ಷಣವನ್ನು ಪಡೆಯುತ್ತಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿ ಆಂಗ್ಲ ಭಾಷೆಯಲ್ಲಿ ಕಲಿಕೆಯನ್ನು ಕಡ್ಡಾಯಗೊಳಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಗಡಿ ಪ್ರದೇಶದ ತಾಲ್ಲೂಕುಗಳು ಮತ್ತು ಶಾಲಾ–ಕಾಲೇಜುಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೯೩ (೩೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗಡಿ ಪ್ರದೇಶದ ತಾಲ್ಲೂಕುಗಳು ಯಾವುವು ;

(ಆ) ಯಾವ ಯಾವ ಗಡಿ ಪ್ರದೇಶದ ತಾಲ್ಲುಕುಗಳಲ್ಲಿ ಎಷ್ಟೆಷ್ಟು ಸರ್ಕಾರಿ ಮತ್ತು ಖಾಸಗಿ ಕನ್ನಡ ಮಾಧ್ಯಮದ ಪ್ರಾಥಮಿಕ, ಮಾಧ್ಯಮಿಕ, ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ ;

(ಇ) ಆ ಶಾಲೆ ಮತ್ತು ಕಾಲೇಜುಗಳಲ್ಲಿ ಎಷ್ಟೆಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ; (ಶಾಲಾವಾರು ಮತ್ತು ಕಾಲೇಜುವಾರು ಮಾಹಿತಿ ನೀಡುವುದು)

(ಈ) ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ ಎಷ್ಟು ಬೋಧಕ/ಬೋಧಕೇತರ ಸಿಬ್ಬಂದಿ ಇರಬೇಕು ; ಅದರಂತೆ ಗಡಿ ಪ್ರದೇಶದ

ಶಾಲಾ ಕಾಲೇಜುಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿ ಇದ್ದಾರೆಯೇ ; ಇಲ್ಲದಿದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಂಡಿದೆ ;

(ಉ) ಈ ಶಾಲಾ–ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕುಡಚಿ–ಬಾಗಲಕೋಟೆ ರೈಲು ಮಾರ್ಗ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೯೪ (೩೩೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಡಚಿ–ಬಾಗಲಕೋಟೆ ರೈಲು ಮಾರ್ಗದ ಒಟ್ಟು ಅಂತರವೆಷ್ಟು; ಈ ರೈಲು ಮಾರ್ಗಕ್ಕೆ ಎಷ್ಟು ಜಮೀನಿನ ಅಗತ್ಯವಿದೆ ;

(ಆ) ಆ ಪೈಕಿ ಸರ್ಕಾರದ ಜಮೀನು ಎಷ್ಟು ; ಭೂಸ್ವಾಧೀನ ಮಾಡಿಕೊಳ್ಳಬೇಕಾದ ಜಮೀನಿನ ವಿಸ್ತೀರ್ಣವೆಷ್ಟು ;

(ಇ) ಇಲ್ಲಿಂಯುವರೆಗೂ ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಅದಕ್ಕೆ ನೀಡಲಾದ ಪರಿಹಾರದ ಮೊಬಲಗು ಎಷ್ಟು ; ಬಾಕಿ ನೀಡಬೇಕಾದ ಪರಿಹಾರದ ಮೊಬಲಗು ಎಷ್ಟು ;

(ಈ) ಈ ಮಾರ್ಗದ ರೈಲು ಯೋಜನೆಯ ಅಂದಾಜು ವೆಚ್ಚವೆಷ್ಟು ; ಆ ವೆಚ್ಚದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಅನುಕ್ರಮವಾಗಿ ಭರಿಸಬೇಕಾದ ಪಾಲು ಎಷ್ಟು ;

(ಉ) ಎಷ್ಟು ಅವಧಿಯಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ?

## ಗಣಿಗಾರಿಕೆ ನಡೆಸಲು ಪರವಾನಗಿ ನೀಡುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೫ (೩೪೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೭ನೇ ಸಾಲುಗಳಲ್ಲಿ ಗಣಿಗಾರಿಕೆ ಪರವಾನಗಿ ಕೋರಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ ; ಇವುಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ನೀಡಲಾಗಿದೆಯೇ ; ಹಾಗೂ ಈ ವರ್ಗದಿಂದ ಬಂದಿರುವ ಅರ್ಜಿಗಳೆಷ್ಟು ; ಇವುಗಳಲ್ಲಿ ಮಂಜೂರಾದ ಅರ್ಜಿಗಳೆಷ್ಟು ;

(ಇ) ರಾಮನಗರ, ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಮಂಜೂರಾಗದೆ ಪರಿಶೀಲನೆಯಲ್ಲಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ; (ಅರ್ಜಿದಾರರ ಹೆಸರು ಮತ್ತು ವಿಳಾಸ ನೀಡುವುದು)

(ಈ) ಗಣಿಗಾರಿಕೆ ನಡೆಸಲು ಪರವಾನಗಿ ಕೋರಿ ೩ ವರ್ಷಗಳಾದರೂ ಅರ್ಜಿಗಳ ಪರಿಶೀಲನೆಯಾಗದೆ ಅಥವಾ ಮಂಜೂರಾತಿ ಆಗದೆ ಇರಲು ಕಾರಣಗಳೇನು ;

(ಉ) ಇದೀಗ ಗಣಿಗಾರಿಕೆ ಪರವಾನಗಿ ನೀಡುವಲ್ಲಿ ಹರಾಜು ಪ್ರಕ್ರಿಯೆ ಆರಂಭ ಆಗಿರುವುದರಿಂದ, ೩ ವರ್ಷಗಳಿಂದ ಬಾಕಿ ಇರುವ ಅರ್ಜಿದಾರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ ?

## ಶುದ್ಧ ನೀರಿನ ಘಟಕಗಳನ್ನು ಪ್ರಾರಂಭಿಸಿರುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೬ (೩೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫ ರಿಂದ ೨೦೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಮಂಜೂರಾತಿ ಸಂಖ್ಯೆ ಎಷ್ಟು ; ಘಟಕಗಳನ್ನು ಪ್ರಾರಂಭಿಸಿರುವ ಸಂಖ್ಯೆ ಎಷ್ಟು ; ನಿಗಧಿಪಡಿಸಲಾದ ಅನುದಾನ ಹಾಗೂ ಖರ್ಚು ಮಾಡಿರುವ ಅನುದಾನ ಎಷ್ಟು ;

(ಆ) ಈ ಸಾಲುಗಳಲ್ಲಿ ನಿಗಧಿಪಡಿಸಿದ ಗುರಿ ಎಷ್ಟು ; ಪೂರ್ಣಗೊಂಡ ಕಾಮಗಾರಿಗಳೆಷ್ಟು ; ಯಾವ ಯಾವ ಗ್ರಾಮಗಳಲ್ಲಿ ಘಟಕಗಳನ್ನು ಸ್ಥಾಪಿಸಲಾಗಿದೆ ? (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

## ಬಹುಗ್ರಾಮ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೭ (೩೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಯಾವ ಯಾವ ಹಳ್ಳಿಗೆ ಯಾವ ಯಾವ ಮೂಲಗಳಿಂದ ನೀರನ್ನು ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕುಡಿಯುವ ನೀರಿಗಾಗಿ ಕೈಗೊಂಡಿರುವ ಕ್ರಮಗಳೇನು ; ಕಾಮಗಾರಿಗಳಿಗೆ ಖರ್ಚು ಮಾಡಿರುವ ಹಣವೆಷ್ಟು ;

(ಇ) ಈ ಸಾಲಿನಲ್ಲಿ ಕೈಗೊಂಡಿರುವ ಕಾಮಗಾರಿಗಳಲ್ಲಿ ಬಾಕಿಯಿರುವ ಕಾಮಗಾರಿಗಳೆಷ್ಟು ; ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ?

## ಬೀದರ್ ಜಿಲ್ಲೆ ವಸತಿ ರಹಿತ ಜನಸಂಖ್ಯೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೮ (೩೫೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ವಸತಿ ರಹಿತ ಜನರ ಸಂಖ್ಯೆ ಎಷ್ಟು ; ಇವರುಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಆಶ್ರಯ, ಅಂಬೇಡ್ಕರ್, ಬಸವಶ್ರೀ, ಇಂದಿರಾ ಆವಾಜ್ ವಸತಿ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಳಿದ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ಮನೆಗಳನ್ನು ಮಂಜೂರು ಮಾಡಲಾಗುವುದು ?

## ಬೀದರ್ ಜಿಲ್ಲೆಯ ಶಾಲೆಗಳ ದುರಸ್ಥಿ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೯ (೩೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅನೇಕ ವರ್ಷಗಳಿಂದ ದುರಸ್ಥಿ ಆಗದೆ ಹಾಳಾಗಿರುವ ಕಟ್ಟಡಗಳು ಎಷ್ಟು ; ಅವು ಯಾವುವು ;

(ಇ) ಕಟ್ಟಡಗಳನ್ನು ದುರಸ್ಥಿ ಮಾಡದಿರಲು ಕಾರಣಗಳೇನು ; ಯಾವಾಗ ದುರಸ್ಥಿ ಮಾಡಲಾಗುವುದು ; ಕಟ್ಟಡವಿಲ್ಲದ ಶಾಲೆಗಳಿಗೆ ಕಟ್ಟಡ ನಿರ್ಮಿಸಲಾಗುವುದು ಯಾವಾಗ ?

## ಬೀದರ್ ಜಿಲ್ಲೆಗೆ ಅಲ್ಪಸಂಖ್ಯಾತರ ಇಲಾಖೆಯಿಂದ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೦ (೩೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಆ) ಅಲ್ಪಸಂಖ್ಯಾತರ ಇಲಾಖೆಯಿಂದ ಬೀದರ್ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಆ ಪೈಕಿ ಖರ್ಚಾದ ಅನುದಾನವೆಷ್ಟು ;

(ಇ) ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿದೆ ? (ಕಾಮಗಾರಿಗಳ ವಿವರ ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ಕಲಬುರಗಿ, ಯಾದಗಿರಿ ಜಿಲ್ಲೆಗಳಲ್ಲಿ ಬರುವ ಗ್ರಾಮ ಪಂಚಾಯತ್ ಕಾಮಗಾರಿಗಳ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೧ (೩೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಗ್ರಾಮ ಪಂಚಾಯತ್‌ಗಳಿಗೆ ವಿವಿಧ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ;

(ಆ) ಸದರಿ ಅನುದಾನದಲ್ಲಿ ಖರ್ಚಾಗಿರುವ ಅನುದಾನವೆಷ್ಟು ; ಮತ್ತು ಉಳಿದಿರುವ ಅನುದಾನವೆಷ್ಟು ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯತ್ ಚುನಾಯಿತ ಪ್ರತಿನಿಧಿಗಳ ಸಂಭಾವನೆ ಹೆಚ್ಚುಗೊಳಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೨ (೩೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ನ ಚುನಾಯಿತ ಪ್ರತಿನಿಧಿಗಳ ಸಂಭಾವನೆಯನ್ನು ಹೆಚ್ಚುಗೊಳಿಸಲಾಗುವುದೆಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಕಳೆದ ಬೆಳಗಾವಿ ಅಧಿವೇಶನದಲ್ಲಿ ತಿಳಿಸಿದ್ದು, ಅದರಂತೆ ಗ್ರಾಮ ಪಂಚಾಯತ್ ಸದಸ್ಯರ ಸಂಭಾವನೆಯನ್ನು ಹೆಚ್ಚು ಮಾಡಲಾಗಿದೆಯೇ ;

(ಆ) ಇಲ್ಲದಿದ್ದಲ್ಲಿ, ಇದರ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; ವಿಳಂಬಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಗ್ರಾಮೀಣ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೩ (೩೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ವತಿಯಿಂದ ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಸರ್ಕಾರದಿಂದ ಈವರೆಗೂ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ; ಸದರಿ ಅನುದಾನದಲ್ಲಿ ಖರ್ಚಾಗಿರುವ ಮತ್ತು ಉಳಿದಿರುವ ಅನುದಾನವೆಷ್ಟು; (ಸಂಪೂರ್ಣ ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಇಲಾಖೆಯಿಂದ ಹೊಸದಾಗಿ ಕೊರೆದಿರುವ ಕೊಳವೆ ಬಾವಿಗಳೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಇ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಂ.ಪಿ/ಎಂ.ಎಲ್.ಎ/ ಎಂ.ಎಲ್.ಸಿ ಲ್ಯಾಂಡ್‌ನ ಅನುದಾನದಲ್ಲಿ ಹೊಸದಾಗಿ ಕೊರೆದಿರುವ ಬಾವಿಗಳೆಷ್ಟು ; ಆ ಪೈಕಿ ಪ್ರಗತಿಯ ಹಂತದಲ್ಲಿರುವ ಕಾಮಗಾರಿಗಳೆಷ್ಟು; ಕಾಮಗಾರಿಗಳು ವಿಳಂಬವಾಗಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ೨೦೧೬–೧೭ನೇ ಸಾಲಿನಲ್ಲಿ ಸ್ಥಾಪನೆಯಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಮ್‌ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೪ (೩೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ, ಇದಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ, (ತಾಲ್ಲೂಕುವಾರು ವಿವರ ನೀಡುವುದು) ಇದಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು ;

(ಇ) ೨೦೧೬–೧೭ನೇ ಸಾಲಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲು ಒದಗಿಸಿರುವ ಅನುದಾನವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಒಂದು ಶುದ್ಧ ನೀರು ಘಟಕವನ್ನು ಸ್ಥಾಪನೆ ಮಾಡಲು ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ ;

(ಉ) ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಪ್ಯಾಕೇಜ್ ಮಾಡಿ ಯಾವ ಕಂಪನಿಗೆ ವಹಿಸಿಕೊಡಲಾಗಿದೆ ? (ಕಂಪನಿಯ ಗುಣಮಟ್ಟ ಮತ್ತು ಪ್ರಾಮಾಣಿಕತೆ ಬಗ್ಗೆ ವಿವರ ನೀಡುವುದು)

## ರಾಜ್ಯಕ್ಕೆ ಹೊಸದಾಗಿ ಬಂದಿರುವ ಕೈಗಾರಿಕೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಮ್‌ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೫ (೪೬೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯಕ್ಕೆ ಹೊಸದಾಗಿ ಬಂದಿರುವ ಮಧ್ಯಮ ಮತ್ತು ಬೃಹತ್ ಕೈಗಾರಿಕೆಗಳು ಯಾವುವು ; (ವಿವರ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಹೊಸದಾಗಿ ಯಾವ ಯಾವ ಕೈಗಾರಿಕೆಗಳು ಬಂದಿವೆ ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲು ಆಯ್ಕೆ ಮಾಡಿಕೊಂಡಿರುವ ಸ್ಥಳಗಳಾವುವು ? (ತಾಲ್ಲೂಕುವಾರು ವಿವರ ನೀಡುವುದು)

## ೨೦೧೬–೧೭ನೇ ಸಾಲಿನಲ್ಲಿ ಹೊಸ ಬಸ್ಸುಗಳನ್ನು ಖರೀದಿ ಮಾಡಿರುವ ಬಗ್ಗೆ

**ಶ್ರೀ ಕಾಂತರಾಜು (ಬಿಎಮ್‌ಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೬ (೪೬೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ ; ಈ ಬಸ್ಸುಗಳು ಯಾವ ಕಂಪನಿಗೆ ಸೇರಿದ್ದಾಗಿದೆ ; ಪ್ರತಿಯೊಂದು ಬಸ್ಸಿನ ಬೆಲೆ ಎಷ್ಟು ; (ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಗೆ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಹೊಸ ಬಸ್ಸುಗಳನ್ನು ಒದಗಿಸಲಾಗಿದೆ ;

(ಇ) ಬೆಂಗಳೂರು–ಮೈಸೂರಿಗೆ ತಡೆ ರಹಿತ ವೋಲ್ವೋ ವಜ್ರದ ಬಸ್ಸು ಸಾರ್ವಜನಿಕರ ಸಂಚಾರಕ್ಕೆ ವ್ಯವಸ್ಥೆ ಮಾಡಿಕೊಟ್ಟಿರುವಂತೆ

ತುಮಕೂರು–ಬೆಂಗಳೂರಿಗೂ ತಡೆ ರಹಿತ ವೋಲ್ವೋ ವಜ್ರದಂತಹ ಬಸ್ಸುಗಳನ್ನು ಸಾರ್ವಜನಿಕ ಸಂಚಾರಕ್ಕೆ ವ್ಯವಸ್ಥೆ ಮಾಡಿಕೊಡಲಾಗುವುದೇ ? (ಸ್ಪಷ್ಟಪಡಿಸುವುದು)

## ವಸತಿ ಯೋಜನೆಯನ್ನು ತುಮಕೂರು ನಗರದಲ್ಲಿ ನಿರ್ಮಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿಎಮ್‌ಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೭ (೪೬೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ನಗರವನ್ನು ಸ್ಮಾರ್ಟ್‌ಸಿಟಿಯನ್ನಾಗಿ ಕೇಂದ್ರ ಸರ್ಕಾರವು ಘೋಷಣೆ ಮಾಡಿರುವುದರಿಂದ ಹಾಗೂ ಹೊಸ ಹೊಸ ಕೈಗಾರಿಕೆಗಳು ಸ್ಥಾಪನೆಯಾಗಿರುವುದರಿಂದ ವಸತಿ ಯೋಜನೆಗೆ ಹೆಚ್ಚಿನ ಬೇಡಿಕೆಯಿದ್ದು, ತುಮಕೂರು ನಗರದಲ್ಲಿ ಗೃಹ ಮಂಡಳಿ ವತಿಯಿಂದ ಹೊಸ ಬಡಾವಣೆಗಳನ್ನು ನಿರ್ಮಿಸಲು ಯೋಜನೆಯನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ಯೋಜನೆ ರೂಪಿಸಿದ್ದಲ್ಲಿ ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ ; ಮತ್ತು ಇದಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿರುವ ಜಮೀನು ಎಷ್ಟು ; (ವಿವರ ನೀಡುವುದು)

(ಇ) ತುಮಕೂರು ನಗರದಲ್ಲಿ ಗೃಹ ಮಂಡಳಿ ವತಿಯಿಂದ ಹೊಸದಾಗಿ ಬಡಾವಣೆಗಳನ್ನು ನಿರ್ಮಿಸಲು ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) ವತಿಯಿಂದ ಅಭಿವೃದ್ಧಿ ಪಡಿಸಲಾದ ಕೈಗಾರಿಕಾ ಪ್ರದೇಶಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೪೦೮ (೩೯೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಿಂದ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) ಯಿಂದ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳೆಷ್ಟು ; (ವಿವರ ಒದಗಿಸುವುದು)

(ಆ) ಈ ಕೈಗಾರಿಕಾ ಪ್ರದೇಶದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಿಟ್ಟ ನಿವೇಶನಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಇ) ಕೈಗಾರಿಕಾ ಸಂಸ್ಥಗಳಿಂದ ಸ್ಥಳೀಯ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಶೇಕಡವಾರು ಲಾಭಾಂಶ ಭಾಗವನ್ನು ನೀಡುವ ನಿಯಮವಿದೆಯೇ ; ಇದ್ದಲ್ಲಿ, ಶೇಕಡ ಎಷ್ಟು ಲಾಭಾಂಶ ನೀಡಬೇಕಾಗುತ್ತದೆ ?

## ಕಲಬುರಗಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೪೮೯ (೩೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಬಹುತೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ; ಕಳೆದ ೩ ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇದರಲ್ಲಿ ಬಳಕೆಯಾಗಿರುವ ಅನುದಾನವೆಷ್ಟು ; ಬಳಕೆಯಾಗದಿದ್ದಲ್ಲಿ, ಸೂಕ್ತ ಕಾರಣ ತಿಳಿಸುವುದು;

(ಇ) ಕಳೆದ ೩ ವರ್ಷಗಳಿಂದ ಕೊಳವೆ ಬಾವಿ ಕೊರೆಯಲು ಬಿಡುಗಡೆಯಾಗಿರುವ ಅನುದಾನ ಎಷ್ಟು ? (ವಿವರ ಒದಗಿಸುವುದು)

## ಬಿದಾಯಿ ಯೋಜನೆಯ ಮಾಹಿತಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೦ (೪೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿದಾಯಿ (ಶಾದಿಭಾಗ್ಯ) ಯೋಜನೆಯನ್ನು ಎಂದಿನಿಂದ ಆರಂಭಿಸಲಾಯಿತು ; (ಆದೇಶದ ಪ್ರತಿ ಒದಗಿಸುವುದು)

(ಆ) ಬಿದಾಯಿ ಯೋಜನೆಯಲ್ಲಿ ಪ್ರಯೋಜನ ಪಡೆಯಲು ಅರ್ಹತೆಗಳೇನು ; (ವಿವರ ನೀಡುವುದು)

(ಇ) ಇದುವರೆಗೂ ಬಿದಾಯಿ ಯೋಜನೆ ಅಡಿಯಲ್ಲಿ ಸಲ್ಲಿಕೆಯಾದ ಅರ್ಜಿಗಳೆಷ್ಟು ಮತ್ತು ಅನರ್ಹಗೊಂಡ ಅರ್ಜಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ವಧು ಮತ್ತು ವರನ ಅಪ್ರಾಪ್ತ ವಯೋಮಿತಿಯ ಕಾರಣಕ್ಕಾಗಿ ಯೋಜನೆ ಆರಂಭದಿಂದ ಅನರ್ಹಗೊಂಡ ಅರ್ಜಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಇದುವರೆಗೂ ಯೋಜನೆಯಲ್ಲಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು ; ಬಾಕಿ ಉಳಿಯಲು ಕಾರಣಗಳೇನು ?

## ಕೊಡಗು ಜಿಲ್ಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೧ (೪೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಗೆ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸಲು ಮಂಜೂರಾಗಿರುವ ಶಿಕ್ಷಕರ ಹುದ್ದೆಯ ಸಂಖ್ಯೆ ಎಷ್ಟು ;

(ಆ) ಸದರಿ ಮಂಜೂರಾಗಿರುವ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಹುದ್ದೆಗಳನ್ನು ತುಂಬಲು ನಿಗಧಿಪಡಿಸಿರುವ ಕಾಲಮಿತಿ ಏನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0251/800 ಪ್ರತಿಗಳು/04–02–2017